ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 72

2–9–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 72

## ಸಂಪಾದಕೀಯ.....

## ಮಾನವೀಯತೆ ಮೇಲಿನ ಕ್ರೂರ ದಾಳಿ ಮರ್ಯಾದೆ ಹತ್ಯೆ



ಕಲಬುರ್ಗಿಯಲ್ಲಿ ಮರ್ಯಾದೆಯ ಹತ್ಯೆ, ಇಳಕಲ್‌ನಲ್ಲಿ ಬಾಲಕಿ ಗರ್ಭಿಣಿ, ಹುಕ್ಕೇರಿ ತಾಲ್ಲೂಕಿನ ಬಸಾಪುರದ ಬಾಲಕಿಯನ್ನು ಮದುವೆಯಾದ ಗ್ರಾಪಂ ಅಧ್ಯಕ್ಷ, ಈ ಮೂರು ಸುದ್ದಿಗಳು ಆಧುನಿಕ ಸಮಾಜದಲ್ಲಿ ಮಾನವೀಯ ಮೌಲ್ಯಗಳು ಅಧಃಪತನಗೊಳ್ಳುತ್ತಿರುವ ಪ್ರತೀಕವಾಗಿದೆ.

ಮರ್ಯಾದೆಯ ಹತ್ಯೆ ಸಮಾಜವನ್ನು ನಡುಗಿಸುವ ಘಟನೆಯಾಗಿದೆ. ಮಹಿಳೆಯೊಬ್ಬಳನ್ನು ನಿರ್ದಯವಾಗಿ ಕೊಲ್ಲುವುದು ಕೇವಲ ಒಂದು ಕುಟುಂಬದ ದುರಂತವಲ್ಲ, ಇದು ನಮ್ಮ ಸಮಾಜದೊಳಗಿನ ಕ್ರೌರ್ಯ, ಅಸಹಿಷ್ಣುತೆ ಮತ್ತು ಕಾನೂನು ಜಾರಿಯ ದುರ್ಬಲತೆಯ ಕಹಿ ಪ್ರತಿಬಿಂಬವಾಗಿದೆ. ಇಂತಹ ಘಟನೆಗಳು ಮಾನವೀಯ ಮೌಲ್ಯಗಳ ಹೀನಾಯ ಕುಸಿತವನ್ನು ಸ್ಪಷ್ಟವಾಗಿ ತೋರಿಸುತ್ತವೆ.

ಮಹಿಳೆಯರ ವಿರುದ್ಧದ ಹಿಂಸೆ, ಶೋಷಣೆ, ಕೊಲೆಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿರುವುದು ಗಂಭೀರ ಚಿಂತೆಗೆ ಕಾರಣವಾಗಿದೆ. ಕಾನೂನುಗಳು ಕಠಿಣವಾಗಿದ್ದರೂ ಜಾರಿಗೆ ಬರುವಲ್ಲಿ ಕೊರತೆಯಿಂದಾಗಿ ಅಪರಾಧಿಗಳು ನಿರ್ಭಯರಾಗುತ್ತಿದ್ದಾರೆ. ತ್ವರಿತ ನ್ಯಾಯ ಮತ್ತು ಕಠಿಣ ಶಿಕ್ಷೆಯ ಕೊರತೆ ಅವರಿಗೆ ಧೈರ್ಯ ತುಂಬುತ್ತಿದೆ. ಕಾನೂನು ಬಲಗೊಳ್ಳುವುದರ ಜೊತೆಗೆ ಸಮಾಜದಲ್ಲೇ ಮಹಿಳೆಯರ ಬಗ್ಗೆ ಗೌರವದ ಮನೋಭಾವ ಬೆಳೆಸುವುದು ಅವಶ್ಯಕ.

ಮರ್ಯಾದೆಯ ಹತ್ಯೆ ನಮ್ಮೆಲ್ಲರಿಗೂ ಎಚ್ಚರಿಕೆಯ ಗಂಟೆಯಾಗಿದೆ. ಕುಟುಂಬದಿಂದಲೇ ಮಹಿಳೆಯರನ್ನು ಗೌರವಿಸುವ ಸಂಸ್ಕಾರವನ್ನು ರೂಢಿಸಬೇಕು. ಶಾಲೆ–ಕಾಲೇಜುಗಳಲ್ಲಿ ಮಾನವೀಯ ಮೌಲ್ಯಗಳ ಶಿಕ್ಷಣವನ್ನು ಬಲಪಡಿಸಬೇಕು. ಜೊತೆಗೆ, ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣಗಳ ಮೂಲಕ ಮಹಿಳೆಯರ ಹಕ್ಕು ಮತ್ತು ಸುರಕ್ಷತೆ ಕುರಿತ ಜಾಗೃತಿ ಮೂಡಿಸಬೇಕು. ಕಾನೂನು ಜಾರಿಗೊಳಿಸುವ ಸಂಸ್ಥೆಗಳು ನಿಷ್ಪಕ್ಷಪಾತವಾಗಿ, ಕಟ್ಟುನಿಟ್ಟಾಗಿ ಕಾರ್ಯನಿರ್ವಹಿಸಿದಾಗ ಮಾತ್ರ ಅಪರಾಧಿಗಳಿಗೆ ಭಯ ಮೂಡುತ್ತದೆ.

ಮರ್ಯಾದೆಯ ಜೀವವನ್ನು ಹಿಂದಿರುಗಿಸಲಾಗುವುದಿಲ್ಲ. ಆದರೆ ಅವಳ ಸಾವಿನಿಂದ ಸಮಾಜ ಪಾಠ ಕಲಿಸಿದರೆ, ಇಂತಹ ಅಮಾನುಷ ಘಟನೆಗಳನ್ನು ತಡೆಯಲು ಸಾಧ್ಯ. ಮಹಿಳೆಯರ ಗೌರವ ಮತ್ತು ಸುರಕ್ಷತೆಯನ್ನು ಕೇವಲ ಮಾತಿನಲ್ಲಿ ಮಾತ್ರವಲ್ಲ, ಕೃತ್ಯಗಳಲ್ಲಿ ತೋರಿಸುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ. ಮರಿಯಾದೆಯ ಹತ್ಯೆ ಸಮಾಜದ ಪ್ರತಿಬಿಂಬವಾಗಬಾರದು, ಅದು ಬದಲಾವಣೆಯ ಹಾದಿಗೆ ದಾರಿಯಾಗಬೇಕು.

ಇಷ್ಟೊಂದು ಕಾನೂನುಗಳಿದ್ದರೂ ಇನ್ನೂ ಬಾಲ್ಯವಿವಾಹ ನಿಂತಿಲ್ಲವೆನ್ನುವುದು ಸೋಜಿಗದ ಸಂಗತಿ. ಇದರ ಜೊತೆ ಬಡ ಹೆಣ್ಣುಮಕ್ಕಳು ಪ್ರವೇಶ ಪಡೆಯುವ ಸರ್ಕಾರಿ ವಸತಿ ಶಾಲೆಗಳಲ್ಲಿ ಅಲ್ಲಿನ ಬಾಲಕಿಯರು ಗರ್ಭಿಣಿಯರಾಗುತ್ತಿರುವುದು ಅತ್ಯಂತ ಶೋಚನೀಯ ಸಂಗತಿ. ಸರ್ಕಾರ ಇಂಥ ವಿಚಾರಗಳ ಬಗ್ಗೆ ಸಂವೇದಿಯಾಗಿ ತ್ವರಿತ ಹಾಗೂ ಕಠಣಿ ಕ್ರಮಕ್ಕೆ ಮುಂದಾಗದಿದ್ದರೆ ಬಡವರ ಹೆಣ್ಣು ಮಕ್ಕಳು ಬಾಲ್ಯದಲ್ಲಿಯೇ ಪೈಶಾಚಿಕ ಕೃತ್ಯಕ್ಕೆ ಮತ್ತಷ್ಟು ಬಲಿಯಾಗುತ್ತಾರೆ. ಇಂಥ ಘೋರ ಕೃತ್ಯಗಳನ್ನು ಸರ್ಕಾರ ನಿಯಂತ್ರಿಸಿದಾಗ ಮಾತ್ರ ಹೆಣ್ಣು ಸಬಲೆಯಾಗಲು ಸಾಧ್ಯ.

–ಮಲ್ಲಿಕಾರ್ಜುನ್ ಕಬ್ಬೂರು
ಸಂಪಾದಕರು

# ಧರ್ಮಸ್ಥಳ ಚಲೋ : ಶ್ರೀಕ್ಷೇತ್ರದ ವಿರುದ್ಧದ ಷಡ್ಯಂತ್ರ ಪ್ರಕರಣ ಎನ್‌ಐಎಗೆ ವಹಿಸುವಂತೆ ಕೇಸರಿ ಪಡೆ ಕೂಗು

**ಬೆಂಗಳೂರು :** ಶ್ರೀಕ್ಷೇತ್ರ ಧರ್ಮಸ್ಥಳದ ವಿರುದ್ಧ ನಡೆದಿರುವ ವ್ಯವಸ್ಥಿತ ಷಡ್ಯಂತ್ರ ಪ್ರಕರಣವನ್ನು ರಾಷ್ಟ್ರೀಯ ತನಿಖಾ ದಳಕ್ಕೆ (ಎನ್‌ಐಎ) ವಹಿಸಬೇಕೆಂದು ಒತ್ತಾಯಿಸಿ ಬಿಜೆಪಿ ವತಿಯಿದ ಬೃಹತ್ ಧರ್ಮಸ್ಥಳ ಚಲೋ ಅಭಿಯಾನವನ್ನು ನಡೆಸಲಾಯಿತು.

ಎಸ್‌ಐಟಿ ಬದಲಿಗೆ ರಾಜ್ಯ ಸರ್ಕಾರ ತಕ್ಷಣವೇ ಪ್ರಕರಣವನ್ನು ಎನ್‌ಐಎಗೆ ವಹಿಸಿ ಈ ಷಡ್ಯಂತ್ರ ಮಾಡಿರುವ ದುಷ್ಟಶಕ್ತಿಗಳನ್ನು ಕಾನೂನು ಪ್ರಕಾರ ಶಿಕ್ಷೆಗೊಳಪಡಿಸದಿದ್ದರೆ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸುತ್ತೇವೆ ಎಂಬ ಎಚ್ಚರಿಕೆಯ ಸಂದೇಶವನ್ನು ರವಾನಿಸಿದರು.

ಮಂಜುನಾಥಸ್ವಾಮಿ ಸನ್ನಿಧಿಗೆ ಹೊಂದಿಕೊಂಡಿರುವ ಮೈದಾನದಲ್ಲಿ ನಡೆದ ಧರ್ಮಸ್ಥಳ ಅಭಿಯಾನಕ್ಕೆ ನಿರೀಕ್ಷೆಗೂ ಮೀರಿದ ಸ್ಪಂದನೆ ಹಿಂದೂ ಕಾರ್ಯಕರ್ತರಿಂದ ವ್ಯಕ್ತವಾಯಿತು.

ಮಂಗಳೂರು, ಉಡುಪಿ, ಹಾಸನ, ಚಿಕ್ಕಮಗಳೂರು, ಶಿವಮೊಗ್ಗ, ದಾವಣಗೆರೆ, ಬೆಳಗಾವಿ, ಧಾರವಾಡ, ಹಾವೇರಿ, ಗದಗ ಸೇರಿದಂತೆ ರಾಜ್ಯದ ನಾನಾ ಭಾಗಗಳಿಂದ ಆಗಮಿಸಿದ್ದ ಬೃಹತ್ ಸಂಖ್ಯೆಯ ಸಾವಿರಾರು ಕಾರ್ಯಕರ್ತರು ಧರ್ಮಸ್ಥಳದ ಪರವಾಗಿ ನಾವಿದ್ದೇವೆ ಎಂಬ ಸಂದೇಶವನ್ನು ರವಾನೆ ಮಾಡಿದರು.




ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ, ಕೇಂದ್ರದ ಮಾಜಿ ಸಚಿವ ಡಿ.ವಿ.ಸದಾನಂದಗೌಡ, ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್, ವಿಧಾನಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಶಾಸಕರಾದ ಗಾಲಿ ಜನಾರ್ಧನರೆಡ್ಡಿ, ಮುನಿರತ್ನ, ಎಸ್.ಆರ್.ವಿಶ್ವನಾಥ್, ಮಾಜಿ ಸಚಿವರಾದ ಶ್ರೀರಾಮುಲು, ಎಂ.ಪಿ.ರೇಣುಕಾಚಾರ್ಯ, ವಿಧಾನಪರಿಷತ್ ಸದಸ್ಯರು, ಮುಖಂಡರು ಸೇರಿದಂತೆ ಹಿಂದೂಪರ ಸಂಘಟನೆಗಳ ಸಾವಿರಾರು ಕಾರ್ಯಕರ್ತರು ಭಾಗವಹಿಸಿ ಶ್ರೀಕ್ಷೇತ್ರ ಧರ್ಮಸ್ಥಳಕ್ಕೆ ತಮ ನೈತಿಕ ಬೆಂಬಲವನ್ನು ಸೂಚಿಸಿದರು.

ಎಸ್‌ಐಟಿ ತನಿಖೆ ಬಗ್ಗೆ ನನಗೆ ಯಾವುದೇ ರೀತಿಯ ಅನುಮಾನಗಳಿಲ್ಲ. ಆದರೆ ಈ ಪ್ರಕರಣದಲ್ಲಿ ಅಂತಾರಾಷ್ಟ್ರೀಯ ಶಕ್ತಿಗಳ ಕೈವಾಡ ಇರುವುದರಿಂದ ಪ್ರಕರಣವನ್ನು ಎನ್‌ಐಎಗೆ ವಹಿಸಬೇಕೆಂದು ವೇದಿಕೆಯಲ್ಲಿ ಮಾತನಾಡಿದ ಪ್ರಮುಖರು ಒತ್ತಾಯಿಸಿದರು.

ಪ್ರಕರಣವು ದಿನದಿಂದ ದಿನಕ್ಕೆ ಹೊಸ ಹೊಸ ಸ್ವರೂಪ ಪಡೆದುಕೊಳ್ಳುತ್ತಿದೆ. ಧರ್ಮಸ್ಥಳದ ಖ್ಯಾತಿಗೆ ಮಸಿ ಬಳಿಯುವ ದುರುದ್ದೇಶದಿಂದಲೇ ವ್ಯವಸ್ಥಿತ ಷಡ್ಯಂತ್ರ ಮಾಡಿದ್ದಾರೆ. ಸತ್ಯಾಂಶ ಹೊರಬರಲು ಸಾಧ್ಯವಿಲ್ಲ. ಇದನ್ನು ಎನ್‌ಐಗೆ ವಹಿಸಿದರೆ ಮಾತ್ರ ನಿಜವಾದ ಸೂತ್ರಧಾರರು ಹೊರಬರಲಿದ್ದಾರೆ ಎಂದು ಹೇಳಿದರು.

ಪ್ರಸ್ತುತ ಎಸ್‌ಐಟಿ ವಶದಲ್ಲಿರುವ ಚಿನ್ನಯ್ಯ ದಿನಕ್ಕೊಂದು ಹೇಳಿಕೆಗಳನ್ನು ನೀಡುತ್ತಿದ್ದಾನೆ. ಪ್ರಕರಣದ ಸೂತ್ರಧಾರಿಗಳು ಎನಿಸಿರುವ ಗಿರೀಶ್ ಮಟ್ಟಣ್ಣನವರ್, ಸುಜಾತ ಭಟ್, ಮಹೇಶ್ ಶೆಟ್ಟಿ ತಿಮರೋಡಿ, ಜಯಂತ್ ಸೇರಿದಂತೆ ಹಲವರು ಷಡ್ಯಂತ್ರ ನಡೆಸಿರುವುದು ತನಿಖೆಯಿಂದ ಹೊರಬಂದಿದೆ. ಇವರು ಮಾತ್ರವಲ್ಲದೆ ಇನ್ನು ಕೆಲವು ಎಡಪಂಥೀಯ ಚಿಂತಕರು ಸೇರಿದಂತೆ ಮತ್ತಿತರರು ಶಾಮೀಲಾಗಿದ್ದಾರೆ. ಹಾಗಾಗಿ ಕೇಂದ್ರ ಸರ್ಕಾರದ ಸಂಸ್ಥೆಯಿಂದ ತನಿಖೆ ನಡೆಸಬೇಕೆಂದು ಒತ್ತಾಯಿಸಿದರು.

**ಎಸ್‌ಐಟಿ ತನಿಖೆ ಬಗ್ಗೆ ನನಗೆ ಯಾವುದೇ ರೀತಿಯ ಅನುಮಾನಗಳಿಲ್ಲ. ಆದರೆ ಈ ಪ್ರಕರಣದಲ್ಲಿ ಅಂತಾರಾಷ್ಟ್ರೀಯ ಶಕ್ತಿಗಳ ಕೈವಾಡ ಇರುವುದರಿಂದ ಪ್ರಕರಣವನ್ನು ಎನ್‌ಐಎಗೆ ವಹಿಸಬೇಕೆಂದು' ಪ್ರಮುಖರ ಒತ್ತಾಯವಾಗಿದೆ.**

### ದಸರಾ ಕ್ರೀಡಾಕೂಟ ಉದ್ಘಾಟನೆ

## ಕ್ರೀಡಾಪಟುಗಳಿಗೆ ಸರ್ಕಾರಿ ಹುದ್ದೆಗಳ ನೇಮಕಾತಿ, ಶಿಕ್ಷಣದಲ್ಲಿ ಹೆಚ್ಚಿನ ಮೀಸಲಾತಿ ಅಗತ್ಯ : ಬಸವಂತಪ್ಪ



**ದಾವಣಗೆರೆ :** ಬಡ ಮಕ್ಕಳಿಗೆ ಕ್ರೀಡೆ ಮತ್ತು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ, ಕ್ರೀಡಾಪಟುಗಳಿಗೆ ಸರ್ಕಾರಿ ಹುದ್ದೆಯ ನೇಮಕಾತಿಯಲ್ಲಿ ಹೆಚ್ಚಿನ ಮೀಸಲಾತಿಯನ್ನು ನೀಡಬೇಕೆಂದು ಶಾಸಕರಾದ ಕೆ.ಎಸ್.ಬಸವಂತಪ್ಪ ಹೇಳಿದರು.

ಸೋಮವಾರ (ಸೆ.1) ರಂದು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ದಾವಣಗೆರೆ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದರು.

ಕ್ರೀಡೆಯ ಪ್ರಾಮುಖ್ಯತೆಯು ಇದೆ, ಜೊತೆಗೆ ಹೆಚ್ಚಿನ ಶಿಕ್ಷಣದ ಅವಶ್ಯಕತೆ ಇದೆನೀ ನಿಟ್ಟಿನಲ್ಲಿ ಕ್ರೀಡಾಪಟುಗಳಿಗೆ ಹೆಚ್ಚಿನ ಸಹಾಯಧನ ಬಿಡುಗಡೆ ಮಾಡಿಸಲು ಸರ್ಕಾರದ ಮಟ್ಟದಲ್ಲಿ ಪ್ರಾಮಾಣಿ ಪ್ರಯತ್ನ ಮಾಡಲಾಗುತ್ತದೆ. ಕ್ರೀಡೆಗಳಲ್ಲಿ ಅತೀ ಹೆಚ್ಚು ಬಡಮಕ್ಕಳು ಭಾಗವಹಿಸುವವರು, ಅವರಿಗೆ ಹೆಚ್ಚು ಮಹತ್ವ ನೀಡಬೇಕು. ಮಕ್ಕಳು ಮತ್ತು ಯುವಜನರ ಕ್ರೀಡಾಸಕ್ತಿಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಈಗಾಗಲೇ ಸಾಕಷ್ಟು ಯೋಜನೆಗಳನ್ನು ಸರ್ಕಾರದಿಂದ ಹಮ್ಮಿಕೊಳ್ಳಲಾಗಿದೆ. ಸರ್ಕಾರವು ಸಾಕಷ್ಟು ಅನುದಾನ ನೀಡುವ ಮೂಲಕ ಹೆಚ್ಚಿನ ಪೋತ್ಸಾಹ ನೀಡುತ್ತಿದ್ದು ವಿದ್ಯಾರ್ಥಿಗಳು ಇದರ ಸದುಪಯೋಗ ಮಾಡಿಕೊಳ್ಳಬೇಕೆಂದರು.

ಹರಿಹರ ಶಾಸಕರಾದ ಬಿ.ಪಿ.ಹರೀಶ್ ಮಾತನಾಡಿ ಮಕ್ಕಳು ಪಾಠದ ಜತೆಗೆ ಕ್ರೀಡೆಗೂ ಮಹತ್ವ ನೀಡಬೇಕು. ಪ್ರಾಥಮಿಕ ಹಂತದಲ್ಲಿಯೇ ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕು. ಕ್ರೀಡೆಯಿಂದ ದೈಹಿಕ ಹಾಗೂ ಮಾನಸಿಕ ಸದೃಢತೆ ಬರಲಿದೆಲಿದೆ ಎಂದರು.

ಒಂದು ಕಾಲದಲ್ಲಿ ಕ್ರೀಡೆಗೆ ಅಷ್ಟು ಮಹತ್ವ ಇರಲಿಲ್ಲ, ಈಗ ಕಾಲ ಬದಲಾಗಿದೆ ಎಂದರು. ಆಟಗಳಲ್ಲಿ ಸೋಲು, ಗೆಲುವು ಮುಖ್ಯವಲ್ಲ. ಸೋಲೇ ಗೆಲುವಿನ ಮೆಟ್ಟಿಲು ಅಂದುಕೊಂಡು ಸ್ಪರ್ಧಾ ಮನೋಭಾವನೆಯಿಂದ ಆಟಗಳನ್ನು ಆಡಬೇಕು ಎಂದರು.

ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್ ಕ್ರೀಡಾಕೂಟದಲ್ಲಿ ಭಾಗವಹಿಸಿ ಕ್ರೀಡಾಪಟುಗಳ ಪರಿಚಯ ಮಾಡಿಕೊಂಡು ಪ್ರೋತ್ಸಾಹಿಸಿದರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಶ್ರೀ ಹರ್ಷ ಉಪಸ್ಥಿತರಿದ್ದರು.

## ಭಾರತೀಯ ರೈತ ಒಕ್ಕೂಟದಿಂದ ಭದ್ರೆಗೆ ಭಾಗೀನ ಅರ್ಪಣೆ



**ದಾವಣಗೆರೆ :** ಭಾರತೀಯ ರೈತ ಒಕ್ಕೂಟದಿಂದ ಸೋಮವಾರ ಬೆಳಗ್ಗೆ ಭದ್ರೆಗೆ ಭಾಗೀನ ಅರ್ಪಿಸಲಾಯಿತು.

ನೀರಾವರಿ ತಜ್ಞರಾದ ಪ್ರೊ. ನರಸಿಂಹಪ್ಪ, ಭಾರತೀಯ ರೈತ ಒಕ್ಕೂಟ ಅಧ್ಯಕ್ಷ ಎಚ್ ಆರ್ ಲಿಂಗರಾಜ್ ಶಾಮನೂರು, ಶಾನಭೋಗ ನಾಗರಾಜರಾವ್ ಕೊಂಡಜ್ಜಿ, ಎ ಎಂ ಮಂಜುನಾಥ್ ಶಿರಮಗೊಂಡನಹಳ್ಳಿ, ಎ ಆರ್ ಶಿವಪ್ಪ, ಸತ್ಯನಾರಾಯಣಮೂರ್ತಿ , ಬೆಳವನೂರು ವಿಶ್ವನಾಥ್, ಎಸ್ ಜಿ ರುದ್ರೇಶ್ ಟಿ ಬಸವರಾಜಪ್ಪ ಹಳೇ ಬಾತಿ ಗೋಪನಾಳ ಕರಿಬಸಪ್ಪ ಕಲ್ಪನಹಳ್ಳಿ ಉಜ್ಜಣ್ಣ ಕೃಷಿಕ ಸಮಾಜ, ಪ್ರೀಕಾರ್ಡ್ ಬ್ಯಾಂಕ್ ಪದಾಧಿಕಾರಿಗಳು , ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ದಾವಣಗೆರೆ ಬಸವರಾಜಪ್ಪ ಎಸ್ ಎ ವಿಜಯಣ್ಣ ಸಿರಮಗೊಂಡನಹಳ್ಳಿ ಕರಿಬಸಪ್ಪ ನೀರುಬಳಕೆ ಸಹಕಾರಿ ಸಂಘದ ಪದಾಧಿಕಾರಿಗಳು ಕಲ್ಪನಳ್ಳಿ ಚಂದ್ರಪ್ಪ ನಾಗನೂರ ಮಹೇಶ್ವರಪ್ಪ, ರಾಜಣ್ಣ, ಮಲ್ಲಿಕಾರ್ಜುನ ಗ್ರಾಮ ಪಂಚಾಯತ್ ಸದಸ್ಯರು ಚಂದ್ರು, ಪಾಲಾಕ್ಷಪ್ಪ, ಸಂದೀಪ್ ಎಸ್ ಜಿ ಹಳ್ಳಿ, ಕೊಂಡಜ್ಜಿ ಪ್ರಕಾಶ್ ಕೊಂಡಜ್ಜಿ ಜಗದೀಶ್ ಹಾಗೂ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿ ಪ್ರತೀ ವರ್ಷ ಇದೇರೀತಿ ತುಂಬಲಿ ಎಂದು ಪ್ರಾರ್ಥಿಸಿದರು.

## ರಾಜ್ಯದಿಂದ ನೋಡಲ್ ಅಧಿಕಾರಿಯಾಗಿ ಏಕ್ ರೂಪ್ ಕೌರ್ ನೇಮಕ



**ಬೆಂಗಳೂರು:** ಪ್ರತಿಷ್ಠಿತ ರಾಷ್ಟ್ರೀಯ ಕ್ವಾಂಟಮ್ ಮಿಷನ್ – NQM ನಲ್ಲಿ ರಾಜ್ಯದ ಭಾಗವಹಿಸುವಿಕೆಯನ್ನು ಸಂಯೋಜಿಸಲು ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಐಎಎಸ್ ಅಧಿಕಾರಿ ಏಕರೂಪ್ ಕೌರ್ ಅವರನ್ನು ನೋಡಲ್ ಅಧಿಕಾರಿಯಾಗಿ ನೇಮಿಸಿದ್ದಾರೆ.

ಇದರೊಂದಿಗೆ ದೇಶದ ಕ್ವಾಂಟಮ್ ಭವಿಷ್ಯವನ್ನು ರೂಪಿಸುವಲ್ಲಿ ಕರ್ನಾಟಕದ ಪಾತ್ರವನ್ನು ಖಚಿತಪಡಿಸಿಕೊಳ್ಳುವಲ್ಲಿ ಏಕರೂಪ್ ಕೌರ್ ಅವರು ಐಐಎಸ್'ಸಿಯೊಂದಿಗೆ ನಿಕಟವಾಗಿ ಕೆಲಸ ಮಾಡಲಿದ್ದಾರೆ.

ಆಗಸ್ಟ್ 11, 2025 ರಂದು ನಿಯಮ 377 ರ ಅಡಿಯಲ್ಲಿ ಲೋಕಸಭೆಯಲ್ಲಿ ಈ ವಿಚಾರದ ಕುರಿತು ಕುಮಾರ್ ನಾಯಕ್ ಅವರು ಧ್ವನಿ ಎತ್ತಿದ್ದರು.

## ಸೆ.13 ಮೂರನೇ ರಾಷ್ಟ್ರೀಯ ಲೋಕ ಅದಾಲತ್: ನ್ಯಾ.ರಾಜೇಶ್ವರಿ ಹೆಗಡೆ

**ಚಿಕ್ಕಮಗಳೂರು, ಸೆ.1:** ಈ ವರ್ಷದ ಮೂರನೇ ರಾಷ್ಟ್ರೀಯ ಲೋಕ ಅದಾಲತ್ ಅನ್ನು ಸೆಪ್ಟಂಬರ್ 13 ರಂದು ಹಮ್ಮಿಕೊಂಡಿರುವುದಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಅವರು ತಿಳಿಸಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ವಕೀಲರ ಸಂಘ, ನ್ಯಾಯಾಂಗ ಇಲಾಖೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದಲ್ಲಿ ಜಿಲ್ಲಾ ನ್ಯಾಯಾಲಯ ಸಂಕೀರ್ಣ ಸಭಾಂಗಣದಲ್ಲಿ ಇಂದು ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ವರ್ಷದಲ್ಲಿ ನಾಲ್ಕು ರಾಷ್ಟ್ರೀಯ ಲೋಕ ಅದಾಲತ್‌ಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಈಗಾಗಲೇ ಮಾರ್ಚ್




8, ಜುಲೈ 12 ರಂದು ಅದಾಲತ್‌ಗಳು ಯಶಸ್ವಿಯಾಗಿ ನಡೆದಿವೆ. ಇದೀಗ ಸೆಪ್ಟಂಬರ್ 13 ರಂದು ಅದಾಲತ್ ಅನ್ನು ಆಯೋಜಿಸಲಾಗಿದೆ ಎಂದರು.

ಪ್ರತಿಯೊಬ್ಬ ನಾಗರಿಕ ಕೂಡ ಗೌರವದಿಂದ, ಘನತೆಯಿಂದ ಬದುಕಬೇಕು ಎನ್ನುವುದು ನಮ್ಮ ಸಂವಿಧಾನದ ಆಶಯ. ಸಮಾಜದಲ್ಲಿರುವ ಎಷ್ಟೋ ಮಂದಿ ಬಡವರು, ಅನಕ್ಷರಸ್ಥರು, ಅಂಗವಿಕಲರು, ಮಹಿಳೆಯರು, ಮಕ್ಕಳು ಇವರಿಗೆಲ್ಲ ನ್ಯಾಯ ಸಿಗುವುದು ಕಠಿಣವಾಗಿದ್ದು, ಸುಲಭದಲ್ಲಿ ನ್ಯಾಯ ಒದಗಿಸುವ ಸಲುವಾಗಿ ಕಾನೂನು ಸೇವೆಗಳ ಪ್ರಾಧಿಕಾರ ಅಸ್ತಿತ್ವಕ್ಕೆ ಬಂದಿದ್ದು, ಅದರ ಕಾಯ್ದೆಯಡಿಯಲ್ಲಿ ಲೋಕ ಅದಾಲತ್ ಅನ್ನು ನಡೆಸಲಾಗುತ್ತಿದೆ. ಪ್ರತಿಯೊಬ್ಬರಿಗೂ ಅವರಿಗಿರುವ ಹಕ್ಕುಗಳ ಬಗ್ಗೆ ಅರಿವನ್ನು ಕೂಡ ಮೂಡಿಸಲಾಗುತ್ತಿದೆ. ಈಗಾಗಲೇ ಕಾನೂನು ಸೇವಾ ಪ್ರಾಧಿಕಾರದಿಂದ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ, ಮಕ್ಕಳು, ಮಹಿಳೆಯರು, ಅಂಗವಿಕಲರ ಹಕ್ಕುಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳ ಬಗ್ಗೆ ಅರಿವು ಮೂಡಿಸಲಾಗಿದೆ ಎಂದು ಹೇಳಿದರು.

ಜುಲೈ 12 ರಂದು ನಡೆದ ಲೋಕ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ಒಟ್ಟು 4,498 ಪ್ರಕರಣಗಳನ್ನು ಮಾತ್ರವಲ್ಲದೆ, ಸುಮಾರು 1,62,129 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ. ಲೋಕ ಅದಾಲತ್‌ನಿಂದ ಖರ್ಚಿಲ್ಲದೆ ಶೀಘ್ರ ನ್ಯಾಯ ದೊರೆಯುತ್ತದೆ. ಜೊತೆಗೆ ಸಮಯ ಉಳಿತಾಯವಾಗಲಿದ್ದು, ಕಕ್ಷಿದಾರರಲ್ಲಿ ಪರಸ್ಪರ ಬಾಂಧವ್ಯ ಕೂಡ ಉಳಿಯಲಿದೆ ಎಂದು ತಿಳಿಸಿದರು.

ಖಾಯಂ ಜನತಾ ನ್ಯಾಯಾಲಯದ ವ್ಯಾಪ್ತಿಗೆ ಸರಕು ಸಾಗಣೆ, ಭೂ ಸಾರಿಗೆ, ಜಲಸಾರಿಗೆ, ಅಂಚೆ ಮತ್ತು ತಂತಿ ವ್ಯವಸ್ಥೆ, ದೂರವಾಣಿ ಸೌಲಭ್ಯ, ವಿದ್ಯುತ್ ಮತ್ತು ನೀರು ಸರಬರಾಜು, ಸಾರ್ವಜನಿಕ ನೈರ್ಮಲ್ಯ, ಆಸ್ಪತ್ರೆ, ವಿಮಾ ಸೇವೆ, ಬ್ಯಾಂಕಿಂಗ್ ಮತ್ತು ಹಣಕಾಸು ಸಂಸ್ಥೆ, ಶಿಕ್ಷಣ ಮತ್ತು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದ ಸೇವೆ, ರಿಯಲ್ ಎಸ್ಟೇಟ್‌ಗಳಿಗೆ ಸಂಬಂಧಪಟ್ಟ ಸೇವೆಗಳು ಒಳಪಟ್ಟಿವೆ. ಸಂಬಂಧಿಸಿದ ವೆಬ್‌ಸೈಟ್ ಮೂಲಕ ಯಾವುದೇ ಶುಲ್ಕವಿಲ್ಲದೆ ಅರ್ಜಿ ಸಲ್ಲಿಸಿ ಪ್ರಕರಣ ಇತ್ಯರ್ಥಪಡಿಸಿಕೊಳ್ಳಬಹುದು ಎಂದರು.

## ಜಗಳೂರು : ಅತೀ ಮಳೆಯಿಂದ ಕೋಸು ಬೆಳೆದ ರೈತರ ಗೋಳು




**ಜಗಳೂರು:** ತಾಲ್ಲೂಕಿನಾದ್ಯಂತ ಸತತವಾಗಿ ಸುರಿಯುತ್ತಿರುವ ಮಳೆಯಿಂದಾಗಿ ರೈತರ ಫಸಲುಗಳು ರೋಗದಿಂದ ಹಾಳಾಗುತ್ತಿವೆ. ಬೆಳೆಯು ಕೈಗೆ ಸಿಗುತ್ತಿಲ್ಲ ಬೆಲೆಯೂ ಸಿಗುತ್ತಿಲ್ಲ ರೈತರ ಗೋಳು ಹೇಳತ್ತೀರದ್ದಾಗಿದೆ.

ತಾಲ್ಲೂಕಿನ ಕಾನನಕಟ್ಟೆ ಗ್ರಾಮದ ರೈತ ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಎಲೆ ಕೋಸು ಬೆಳೆದಿದ್ದರು ಆದರೆ ಸತತ ಮಳೆಯಿಂದ ರೋಗಕ್ಕೆ ತುತ್ತಾಗಿ ದರವು ಕುಸಿದ ಪರಿಣಾಮ ಬೇಸರಗೊಂಡ ರೈತ ಟ್ರ್ಯಾಕ್ಟರ್ ನಿಂದ ಹರಗಿ ಇಡೀ ಫಸಲನ್ನು ನಾಶ ಮಾಡಿ ಬೇಸರ ವ್ಯಕ್ತಪಡಿಸಿದ್ದಾರೆ. ರೈತ ಮಲ್ಲೇಶಪ್ಪ ಅವರು ಒಂದು ಎಕರೆಯಲ್ಲಿ ಸುಮಾರು ಒಂದು ಲಕ್ಷರೂ ಖರ್ಚು ಮಾಡಿ ಎಲೆಕೋಸು ಬೆಳೆದಿದ್ದರು. ಬೆಳೆ ಕಟಾವು ಹಂತಕ್ಕೆ ಬಂದ ಸಮಯದಲ್ಲಿ ಸತತ ಒಂದು ತಿಂಗಳಿಂದ ಮಳೆ ಸುರಿದು ಕೋಸು ಕಟಾವು ಮಾಡಲು ಸಾಧ್ಯವಾಗದೆ ವ್ಯಾಪಾರಸ್ಥರು ಸಹ ತಿರುಗಿ ನೋಡಲಿಲ್ಲ ಮಾರುಕಟ್ಟೆಯಲ್ಲಿ ಸೂಕ್ತ ಬೆಲೆಯೂ ಇಲ್ಲದ ಕಾರಣ ಬೇಸರಗೊಂಡು ಫಸಲನ್ನು ನಾಶಪಡಿಸಿದ್ದಾರೆ.

ಕೆಜಿಗೆ 10 ರಿಂದ 12ರೂ ಸಿಗುವ ನಿರೀಕ್ಷೆಯಲ್ಲಿ ಇಟ್ಟುಕೊಂಡು ಎಲೆಕೋಸನ್ನು ಬೆಳೆದ ರೈತರು ಬೆಳೆ ಕಟಾವಿಗೆ ಬರುವ ಅವಧಿಯಲ್ಲಿ ಮಳೆ ಹೆಚ್ಚಾಗಿ ದರವು ಕುಸಿತವಾಗಿದೆ. ಖರೀದಿಸಲು ಯಾರು ಮುಂದೆ ಬರದ ಕಾರಣ ಬೆಳೆಯನ್ನು ಹೊಲದಲ್ಲಿಯೇ ಕೊಚ್ಚಿ ಹಾಕಬೇಕಾಯಿತು ಎಂದು ರೈತ ಮಲ್ಲೇಶ್ ಬೇಸರದಿಂದ ತಿಳಿಸಿದರು.

## ಅನ್ನ ಕೆಲ ಕ್ಷಣದ ಹಸಿವನ್ನು ನೀಗಿಸುತ್ತದೆ, ಶಿಕ್ಷಣ ಜೀವಿತದ ಕಾಲಪೂರ್ತಿ ಕೈ ಹಿಡಿದು ನಡೆಸುತ್ತದೆ : ಆನಂದ್ ಕುಮಾರ್

**ಹೊನ್ನಾಳಿ :** ಅನ್ನ ಕೆಲ ಕ್ಷಣದ ಹಸಿವನ್ನು ನೀಗಿಸುತ್ತದೆ ಆದರೆ ಶಿಕ್ಷಣ ಜೀವಿತ ಕಾಲಪೂರ್ತಿ ಕೈ ಹಿಡಿದು ನಡೆಸುತ್ತದೆ ಎಂದು ಭಾರತೀಯ ವಿದ್ಯಾಸಂಸ್ಥೆ ಅಧ್ಯಕ್ಷ ಆನಂದ್ ಕುಮಾರ್ ಹೇಳಿದರು.

ಪಟ್ಟಣದ ಹೆಸರಾಂತ ವಿದ್ಯಾಸಂಸ್ಥೆಯಾದ ಭಾರತೀಯ ವಿದ್ಯಾಸಂಸ್ಥೆಯಲ್ಲಿ ಸೋಮವಾರ ನಡೆದ 2024–25ನೇ ಸಾಲಿನ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಸಂಸ್ಥೆ ತನ್ನ 39ನೇ ವರ್ಷಾಚರಣೆ ಆಚರಿಸುತ್ತಿದ್ದು, ಮಾತೃಭಾಷೆಯಲ್ಲಿಯೇ ಪ್ರಾಥಮಿಕ ಶಿಕ್ಷಣ ಇರಬೇಕು ಎಂಬ ಸದುದ್ದೇಶದಿಂದ ಮೂರು ದಶಕಗಳ ಹಿಂದೆಯೇ ಈ ಸಂಸ್ಥೆಯನ್ನು ಹಲವಾರು ಶಿಕ್ಷಣಾಸಕ್ತರು ಸೇರಿ ಹುಟ್ಟುಹಾಕಿದ್ದರು, ಇಂದು ಇದು ಹೆಮ್ಮರವಾಗಿ ಬೆಳೆದು ನಿಂತಿದೆ ಎಂದು ಹೇಳಿದರು.

ಈ ಸಂಸ್ಥೆ ಕೇವಲ ಕಂಠಪಾಠ ಮಾಡುವ ವಿದ್ಯಾರ್ಥಿಗಳನ್ನು ಸೃಷ್ಟಿಸದೇ ಶಿಕ್ಷಣದ ನೈಜ್ಯ ಮೌಲ್ಯಗಳನ್ನು ಮಕ್ಕಳ ಮನಸ್ಸಿನಲ್ಲಿ ಬಿತ್ತುವ ಕೆಲಸವನ್ನು ಮಾಡಿಕೊಂಡು ಬರುತ್ತಿದೆ ಇದೀಗ ಸಂಸ್ಥೆಯ ಎಲ್ಲಾ ಚಟುವಟಿಕೆಗಳನ್ನು ಎಲ್ಲರೂ ಕೂಡ ಆಂತರ್ಜಾಲದಲ್ಲಿ ವೀಕ್ಷಿಸುವಂತೆ ಇದರದ್ದೇ ಆದ ವೆಬ್ ಸೈಟ್ ಕೂಡ ಬಿಡುಗಡೆ ಮಾಡಿದೆ ಎಂದು ತಿಳಿಸಿದರು.

ಸಭೆಯ ಆರಂಭದಲ್ಲಿ ಈ ಸಂಸ್ಥೆಯ ಶಾಲೆಯಲ್ಲಿ ದೈಹಿಕ ಶಿಕ್ಷಣ ಶಿಕ್ಷಕರಾಗಿ ಉತ್ತಮ ಸೇವೆ ಸಲ್ಲಿಸಿ ನಿಧನರಾದ ರವಿಕುಮಾರ್ ಅವರ ಗೌರವಾರ್ಥ ಮೌನಾಚರಣೆ ಮಾಡಿ ನಂತರ ಸಂಸ್ಥೆಯ ನೌಕರರ ಕಲ್ಯಾಣ ನಿಧಿಯಿಂದ 25 ಸಾವಿರ ಹಾಗೂ ಸಂಸ್ಥೆಯ ನಿರ್ದೇಶಕರುಗಳು ಸೇರಿ ನಿಧಿಯನ್ನು ಸಂಗ್ರಹಿಸಿ ಮೃತ ಕುಟುಂಬಕ್ಕೆ




ನೀಡಿದರು. ಈ ಸಂದರ್ಭದಲ್ಲಿ ಕಾರ್ಯದರ್ಶಿ ಡಾ. ಎಚ್.ಪಿ.ರಾಜ್ ಕುಮಾರ್ ಅವರು ಸೇರಿದಂತೆ ಆಡಳಿತ ಮಂಡಳಿಯ ಕಾರ್ಯಕಾರಿ ಸಮಿತಿಯವರು ಹಾಗೂ ನಿರ್ದೇಶಕರು ದಿವಂಗತ ರವಿಕುಮಾರ್ ಕುರಿತು ಮಾತನಾಡಿದರು.

ಮಹಾಸಭೆಯಲ್ಲಿ ಸಂಸ್ಥೆಯ ಕಾರ್ಯದರ್ಶಿ ಡಾ. ಎಚ್.ಪಿ.ರಾಜ್ ಕುಮಾರ್ ಅವರು ಸಂಸ್ಥೆಯ ವಾರ್ಷಿಕ ವರದಿಯನ್ನು ಸಮಗ್ರವಾಗಿ ಓದಿದರು. ಜೊತೆಗೆ 2025–26 ನೇ ಸಾಲಿನ ಬಜೆಟ್ ನ್ನು ಮಂಡಿಸಿ ಅನುಮೋದನೆ ಪಡೆದು ಮಾತನಾಡಿ, ಪ್ರಸ್ತುತ ಸಂಸ್ಥೆಯ ಪ್ರಾಥಮಿಕ ಶಾಲೆ ಹಾಗೂ ಪ್ರೌಢ ಶಾಲೆಗಳಲ್ಲಿ 641ಕ್ಕೂ ಹೆಚ್ಚಿನ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಪಾಠಗಳ ಜೊತೆಗೆ ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ಸಂಸ್ಥೆಯ ಮಕ್ಕಳು ಸಾಧನೆಗಳನ್ನು ಮಾಡುತ್ತಿದ್ದಾರೆ ಎಂದ ಅವರು ಮುಂದಿನ ತಲೆಮಾರಿನ ಅಧುನಿಕ ಶೈಕ್ಷಣಿಕ ವ್ಯವಸ್ಥೆಗಳನ್ನು ಬಡ ಮತ್ತು ಮಧ್ಯಮ ವರ್ಗದ ಮಕ್ಕಳಿಗೆ ಕಲ್ಪಿಸಿ ಕೊಡುವ ಸಂಕಲ್ಪದೊಂದಿಗೆ ಸಂಸ್ಥೆಯ ಆಡಳಿತ ಮಂಡಳಿ, ನೌಕರ ವರ್ಗದವರು ಪ್ರಮಾಣಿಕವಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು

ಸಭೆಯಲ್ಲಿ ಖರ್ಚು–ವೆಚ್ಚಗಳ ವಿವರಗಳನ್ನು ಸಂಸ್ಥೆ ಖಜಾಂಚಿ ಸೋಮಶೇಖರ್ ಮಂಡಿಸಿದರು. ಸಂಸ್ಥೆಯ ಉಪಾಧ್ಯಕ್ಷ ಲಿಂಗಯ್ಯ, ಸಹಕಾರ್ಯದರ್ಶಿ ಗಣೇಶ್, ಹಾಲೇಶ್ ಕುಂಕೋದ್, ರೂಪ ಕರಿಸಿದ್ದಪ್ಪ, ಸಲಹಾ ಸಮಿತಿ ಸದಸ್ಯರುಗಳು, ಹಾಗೂ ನಿರ್ದೇಶಕರು ಸಭೆಯಲ್ಲಿ ಹಾಜರಿದ್ದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಕುತ್ತಿಗೆ / ಬೆನ್ನಿನಲ್ಲಿ ನಿರಂತರ ನೋವಿನಿಂದ ಬಳಲುವ ಸಾಧ್ಯತೆಯಿದೆ. ವಿಶೇಷವಾಗಿ ಇದರ ಜೊತೆ ಸಾಮಾನ್ಯ ದೌರ್ಬಲ್ಯವಿದ್ದಾಗ ಇದನ್ನು ನಿರ್ಲಕ್ಷಿಸದಿರಿ. ಇಂದು ವಿಶ್ರಾಂತಿ ಬಹಳ ಪ್ರಮುಖವಾಗಿರುತ್ತದೆ. ಆರ್ಥಿಕ ದೃಷ್ಟಿಯಿಂದ ಇಂದಿನ ದಿನ ಮಿಶ್ರವಾಗಿ ಉಳಿಯುತ್ತದೆ. ಇಂದು ನೀವು ಹಣದ ಪ್ರಯೋಜನವನ್ನು ಪಡೆಯಬಹುದು ಆದರೆ ಇದಕ್ಕಾಗಿ ನೀವು ಕಠಿಣ ಪರಿಶ್ರಮ ಮಾಡಬೇಕಾಗುತ್ತದೆ. ನೀವು ಬಯಸುವ ಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ

### ವೃಷಭ ರಾಶಿ

ಸ್ನೇಹಿತರಿಂದ ಒಂದು ವಿಶೇಷ ಅಭಿನಂದನೆ ಸಂತೋಷದ ಮೂಲವಾಗುತ್ತದೆ. ಇದೇಕೆಂದರೆ ನೀವು ನಿಮ್ಮ ಜೀವನವನ್ನು ಮರಗಳಂತೆ ಮಾಡಿಕೊಳ್ಳುತ್ತೀರಿ–ಅವುಗಳು ತಾವು ಸೂರ್ಯನಡಿ ನಿಂತು ಶಾಖದ ಬೇಗೆ ತಡೆದುಕೊಂಡು ಇತರರಿಗೆ ನೆರಳು ನೀಡುತ್ತವೆ. ಇಂದು, ಒಂದು ಪಾರ್ಟಿಯಲ್ಲಿ ನೀವು ಆರ್ಥಿಕ ಭಾಗವನ್ನು ಬಲಪಡಿಸಲು ಪ್ರಮುಖ ಸಲಹೆಯನ್ನು ನೀಡುವ ವ್ಯಕ್ತಿಯನ್ನು ಭೇಟಿ ಮಾಡಬಹುದು.

### ಮಿಥುನ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ.

### ಕರ್ಕ ರಾಶಿ

ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೆಗಿಂತ ಕೆಳಗೆ ಆಳವಾಗಿ ಕೆದಕಿ. ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ. ನಿಮ್ಮ ಕುಟುಂಬದೊಂದಿಗೆ ಸಾಮಾಜಿಕ ಚಟುವಟಿಕೆ ಎಲ್ಲರನ್ನೂ ಆರಾಮವಾಗಿ ಮತ್ತು ಆಹ್ಲಾದಕರ ಮನಸ್ಥಿತಿಯಲ್ಲಿಡುತ್ತದೆ. ನೀವು ನಿಮ್ಮ ಪ್ರೀತಿಪಾತ್ರರನ್ನು ನಿಮ್ಮ ಜೀವನ ಸಂಗಾತಿಯನ್ನಾಗಿ ಮಾಡಲು ಬಯಸುತ್ತಿದ್ದರೆ, ಇಂದು ನೀವು ಅವರೊಂದಿಗೆ ಮಾತನಾಡಬಹುದು.

### ಸಿಂಹ ರಾಶಿ

ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳೆರಡಕ್ಕೂ ಪ್ರಯೋಜನಕಾರಿಯಾಗುತ್ತದೆ. ಯಾರಿಂದಲೂ ಸಲಹೆಯನ್ನು ತೆಗದುಕೊಳ್ಳದೆ ನೀವು ಹಣವನ್ನು ಎಲ್ಲಿಯೂ ಹೂಡಿಕೆ ಮಾಡಬಾರದು. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ನೀವು ಹಂಚಿಕೊಂಡ ಉತ್ತಮ ಸಮಯವನ್ನು ನೆನಪಿಸಲು ನಿಮ್ಮ ಸ್ನೇಹವನ್ನು ನೆನಪು ಮಾಡಿಕೊಳ್ಳುವ ಸಮಯ. ನಿಮ್ಮ ಕನಸುಗಳು ಹಾಗೂ ವಾಸ್ತವವು ಪ್ರೀತಿಯ ಭಾವಪರವಶತೆಯಲ್ಲಿ ಇಂದು ಸೇರಿಹೋಗುತ್ತವೆ. ಇಂದು ಸಮಯದ ಸೌಂದರ್ಯವನ್ನು ನೋಡುತ್ತಾ, ನೀವು ನಿಮಗಾಗಿ ಸಮಯವನ್ನು ತೆಗೆಯಬಹುದು

### ಕನ್ಯಾ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ನಿಮ್ಮ ತೂಕದ ಮೇಲೆ ಹಿಡಿತ ಹೊಂದಿರಿ. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ನಿಮ್ಮ ಹಠಮಾರಿ ವರ್ತನೆ ನಿಮ್ಮ ಹತ್ತಿರದ ಸ್ನೇಹಿತರು ಹಾಗೂ ಮನೆಯಲ್ಲಿರುವವರಿಗೂ ನೋವುಂಟುಮಾಡುತ್ತದೆ.

### ತುಲಾ ರಾಶಿ

ನೀವು ಬಹಳ ವಿಚಿತ್ರವಾದ ಪರಿಸ್ಥಿತಿಯಲ್ಲಿ ಸಿಲುಕಿದರೂ ಅದನ್ನು ಎದುರಿಸಲು ನಿಮ್ಮ ಇಚ್ಛಾಶಕ್ತಿ ಇಂದು ಸಹಾಯ ಮಾಡಬಹುದು. ಒಂದು ಅತ್ಯಂತ ಭಾವನಾತ್ಮಕ ನಿರ್ಧಾರ ಕೈಗೊಳ್ಳುವಾಗ ನೀವು ಸ್ತಿಮಿತ ಕಳೆದುಕೊಳ್ಳಬಾರದು. ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ. ನೀವು ಕುಟುಂಬದ ಸದಸ್ಯರು ಮತ್ತು ಸ್ನೇಹಿತರ ಜೊತೆ ಕಳೆಯಲು ಸಾಕಷ್ಟು ಸಮಯ ಸಿಗುತ್ತದೆ.

### ವೃಶ್ಚಿಕ ರಾಶಿ

ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಬ್ಯಾಂಕ್ ವ್ಯವಹರಗಳಲ್ಲಿ ಕಾಳಜಿ ವಹಿಸಬೇಕು. ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಇಂದು ಪ್ರೀತಿಪಾತ್ರರಿಗೆ ನಿಮ್ಮ ವಿಚಿತ್ರ ವರ್ತನೆಯ ಜೊತೆ ಏಗಲು ಅತ್ಯಂತ ಕಷ್ಟವಾಗುತ್ತದೆ. ನುರಿತ ಜನರೊಡನೆ ಒಡನಾಟ ಹೊಂದಿ ಮತ್ತು ಅವರು ನಿಮಗೆ ಭವಿಷ್ಯದ ಪ್ರವೃತ್ತಿಗಳ ಬಗ್ಗೆ ಒಳನೋಟ ನೀಡಬಲ್ಲರು.

### ಧನು ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ಆಲೋಚಿಸದೆ ನೀವು ಯಾರಿಗೂ ತಮ್ಮ ಹಣವನ್ನು ಕೊಡಬಾರದು, ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ದೊಡ್ಡ ತೊದರೆಗೊಳಗಾಗಬಹುದು. ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ.

### ಮಕರ ರಾಶಿ

ನಿಮ್ಮ ಕಾಯಿಲೆ ಅತೃಪ್ತಿಯ ಕಾರಣವಾಗಿಬಹುದು. ಕುಟುಂಬದಲ್ಲಿ ಸಂತೋಷವನ್ನು ಪುನಃಸ್ಥಾಪಿಸಲು ನೀವು ಸಾಧ್ಯವಾದಷ್ಟೂ ಬೇಗ ಇದರಿಂದ ಹೊರಬರುವ ಅಗತ್ಯವಿದೆ. ಯಾರಿಂದಲೂ ಸಲಹೆಯನ್ನು ತೆಗದುಕೊಳ್ಳದೆ ನೀವು ಹಣವನ್ನು ಎಲ್ಲಿಯೂ ಹೂಡಿಕೆ ಮಾಡಬಾರದು. ನಿಮ್ಮ ನಿರೀಕ್ಷೆಗಳಿಗೆ ತಕ್ಕಂತೆ ಬದುಕಲು ನಿಮ್ಮ ಮಗುವನ್ನು ಪ್ರೇರೇಪಿಸಿ. ಆದರೆ ಅವನ ಪ್ರಯತ್ನದಿಂದ ಪವಾಡಗಳನ್ನು ನಿರೀಕ್ಷಿಸಬೇಡಿ.

### ಕುಂಭ ರಾಶಿ

ಒಬ್ಬ ಸಂತನ ಆಶೀರ್ವಾದದಿಂದ ಮನಶ್ಶಾಂತಿ. ನೀವು ವಿಧ್ಯಾರ್ಥಿಯಾಗಿದ್ದರೆ ಮತ್ತು ವಿದೇಶಕ್ಕೆ ಹೋಗಿ ಅಧ್ಯಯನ ಮಾಡಲು ಬಯಸುತ್ತಿದ್ದರೆ ಆರ್ಥಿಕ ಬಿಕ್ಕಟ್ಟು ಇಂದು ನಿಮ್ಮ ಹಣೆಯ ಮೇಲೆ ಸುಕ್ಕು ತರಬಹುದು. ಸಂಜೆ ಸ್ನೇಹಿತರೊಡನೆ ಹೋಗಿ, ಇದು ತುಂಬ ಒಳ್ಳೆಯದನ್ನು ಮಾಡುತ್ತದೆ. ಪ್ರಣಯ ನಿಮ್ಮ ಹೃದಯವನ್ನು ಆಳುತ್ತದೆ. ನಿಮ್ಮ ಯೋಜನೆಗಳ ಬಗ್ಗೆ ತುಂಬಾ ಮುಕ್ತತೆ ಹೊಂದಿದ್ದಲ್ಲಿ ನೀವು ಅವುಗಳನ್ನು ಹಾಳುಮಾಡಬಹುದು.

### ಮೀನ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ.

## ಗ್ಯಾರಂಟಿ ಯೋಜನೆಯಿಂದ ಜನರ ಬದುಕಿನಲ್ಲಿ ಮಂದಹಾಸ



**ಶಿವಮೊಗ್ಗ:** ಗ್ಯಾರಂಟಿ ಯೋಜನೆಗಳು ಜನ ಸಾಮಾನ್ಯರ ಬದುಕಿನಲ್ಲಿ ಮಂದಹಾಸ ಮೂಡಿಸುವುದರ ಜೊತೆಗೆ ಆರ್ಥಿಕ ಸ್ವಾವಲಂಬನೆಯನ್ನು ನೀಡಿದೆ ಎಂದು ತಾಲ್ಲೂಕು ಗ್ಯಾರಂಟಿ ಯೋಜನೆಯ ಅಧ್ಯಕ್ಷರಾದ ಮಧು ಹೆಚ್.ಎಂ. ತಿಳಿಸಿದರು.

ಶನಿವಾರ ನಗರದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಐದು ಗ್ಯಾರಂಟಿ ಯೋಜನೆಗಳು ಜಿಲ್ಲೆಯಲ್ಲಿ ಯಶಸ್ವಿಯಾಗಿ ಜಾರಿಯಾಗಿದ್ದು ಬಡವರ ಆಶಾಕಿರಣವಾಗಿರುವ ಅನ್ನಭಾಗ್ಯ ಯೋಜನೆಯು ಆಸರೆಯಾಗಿದೆ. ಹಾಗೂ ಹಸಿವು ಮುಕ್ತ ಭಾರತ ಮತ್ತು "ಸುಸ್ಥಿರ ಅಭಿವೃದ್ಧಿ ಗುರಿ–2030" ತಲುಪಲು ಸಹಕಾರಿಯಾಗಿದೆ ಎಂದರು.

ಗ್ಯಾರಂಟಿ ಯೋಜನೆಗಳಲ್ಲಿ ಬಹಳ ಪ್ರಸಿದ್ದಿಯಾಗಿರುವ ಗೃಹಲಕ್ಷ್ಮಿ ಯೋಜನೆಯ ಹಣವು 2025 ರ ಜೂನ್ ಮಾಹೆಯವರೆಗೆ ಬಿಡುಗಡೆಯಾಗಿರುತ್ತದೆ. 2044 ಐಟಿ/ಜಿಎಸ್‌ಟಿ ಫಲಾನುಭವಿಗಳು ಇದ್ದು, 298 ಮರಣ ಹೊಂದಿರುವ ಫಲಾನುಭವಿಗಳನ್ನು ಗುರುತಿಸಲಾಗಿದೆ. ಎನ್‌ಪಿಸಿಐ ಸಮಸ್ಯೆಯಿರುವ 90 ಫಲಾನುಭವಿಗಳಿಗೆ ಪರಿಹಾರ ಒದಗಿಸುವ ಕೆಲಸ ಮಾಡಲಾಗುತ್ತಿದೆ ಎಂದು ಶಿವಮೊಗ್ಗ ಸಿಡಿಪಿಓ ಗಂಗೂಬಾಯಿ ತಿಳಿಸಿದರು.

ರಾಜ್ಯ ಸರ್ಕಾರವು ಗೃಹಜ್ಯೋತಿ ಯೋಜನೆಯಡಿ 200 ಯುನಿಟ್ ವರೆಗೆ ವಿದ್ಯುತ್ ಬಳಕೆಯನ್ನು ಮಾಡುತ್ತಿರುವ ಗ್ರಾಹಕರುಗಳಿಗೆ ಯಾವುದೇ ಶುಲ್ಕವಿಲ್ಲದೆ ಉಚಿತ ವಿದ್ಯುತ್ ಸೌಲಭ್ಯವನ್ನು ಒದಗಿಸುತ್ತಿದ್ದು ಇದರಿಂದ ಜನ ಸಾಮಾನ್ಯರಿಗೆ ಬಹಳ ಅನುಕೂಲವಾಗುತ್ತಿದೆ. ಆರ್ಥಿಕವಾಗಿ ಅಭಿವೃದ್ಧಿಯಾಗಲು ಸಹಾಯವಾಗುತ್ತಿದೆ.

ಯುವನಿಧಿ ಯೋಜನೆಯಡಿ ಜಿಲ್ಲೆಯಲ್ಲಿ ಜೂನ್ 2025 ರವರೆಗೆ ರೂ.1,95,45,000 ಹಣ ಫಲಾನುಭವಿಗಳ ಖಾತೆಗೆ ಜಮೆಯಾಗಿರುತ್ತದೆ. ಶಿವಮೊಗ್ಗ ತಾಲ್ಲೂಕಿನಲ್ಲಿ ಜೂನ್ ಮಾಹೆಯ ವರೆಗೆ ರೂ.59,71,500 ಹಣ ಜಮೆಯಾಗಿರುತ್ತದೆ. ಯುವನಿಧಿ ಯೋಜನೆಯಡಿ ಈ ವರ್ಷ ಪದವಿ ಹಾಗೂ ಡಿಪ್ಲೋಮಾ ತೇರ್ಗಡೆಯಾಗಿರುವ ವಿದ್ಯಾರ್ಥಿಗಳನ್ನು ನೋಂದಣಿ ಮಾಡಿಸುವ ಕೆಲಸವನ್ನು ಮಾಡಬೇಕು ಎಂದರು.

ಶಕ್ತಿ ಯೋಜನೆಯಡಿ ಶಿವಮೊಗ್ಗ ತಾಲ್ಲೂಕಿನಲ್ಲಿ 20760257 ಮಹಿಳೆಯರು ಪ್ರಯಾಣಿಸಿದ್ದು, ಸಾರಿಗೆ ಇಲಾಖೆಗೆ ಶೇಕಡ 37 ರಷ್ಟು ಅಂದರೆ ರೂ.732880651 ಆದಾಯ ಗಳಿಕೆಯಾಗಿದೆ. ಕಾರ್ಯಕ್ರಮದಲ್ಲಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ತಾರಾ ಹಾಗೂ ತಾಲ್ಲೂಕು ಗ್ಯಾರಂಟಿ ಯೋಜನೆ ಸಮಿತಿಯ ಸದಸ್ಯರುಗಳು ಮತ್ತು ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಕಲಾಕುಂಚದಿಂದ "ಕರ್ನಾಟಕ ಸಿರಿಗನ್ನಡ ಸಿರಿ" ರಾಜ್ಯ ಪ್ರಶಸ್ತಿಗೆ ಆಹ್ವಾನ ಅವಧಿ ವಿಸ್ತರಣೆ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಆಶ್ರಯದಲ್ಲಿ 70ನೇ ವರ್ಷದ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ಶಿಕ್ಷಣ ಸೇರಿದಂತೆ ಕಲೆ, ಸಾಹಿತ್ಯ, ಸಂಗೀತ, ಸಮಾಜ ಸೇವೆ, ರಂಗಭೂಮಿಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ "ಕರ್ನಾಟಕ ಸಿರಿಗನ್ನಡ ಸಿರಿ" ರಾಜ್ಯ ಪ್ರಶಸ್ತಿಗೆ ಆಹ್ವಾನಿಸಲಾಗಿದೆ ಎಂದು ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ. ಈ ರಾಜ್ಯ ಪ್ರಶಸ್ತಿಗೆ ಆಯ್ಕೆಯಾದವರನ್ನು ಸಮಾರಂಭದ ಪ್ರತ್ಯೇಕ ವೇದಿಕೆಯಲ್ಲಿ ಕಲಾಕುಂಚದ ಮುತ್ತೈದೆಯರು ಕನ್ನಡ ತಿಲಕವಿಟ್ಟು, ಕನ್ನಡ ಕಂಕಣ ಕಟ್ಟಿ, ಕನ್ನಡಾರತಿ ಬೆಳಗಿ, ಪುಷ್ಪ ವೃಷ್ಟಿಯೊಂದಿಗೆ ಗೌರವಿಸುತ್ತಾರೆ. ನಂತರ ಅವರದೇ ಭಾವಚಿತ್ರವಿರುವ ಸನ್ಮಾನ ಪತ್ರ, ವೇದಿಕೆಯ ಸಿಂಹಾಸನದ ಮೇಲೆ ಕೂರಿಸಿ, ಕನ್ನಡ ಪೇಟಾದೊಂದಿಗೆ ಹಾರ, ಶಾಲು ಕನ್ನಡ ತಾಯಿ ಭುವನೇಶ್ವರಿಯ ಸ್ಮರಣಿಕೆ ಚಿನ್ನದ ಲೇಪನದ ಪದಕ ಕೊರಳಿಗೆ ಹಾಕಿ ಸನ್ಮಾನಿಸಲಾಗುವುದು ಎಂದು ಸಂಸ್ಥೆಯ ಅಧ್ಯಕ್ಷರಾದ ಕೆ.ಹೆಚ್. ಮಂಜುನಾಥ್ ಪ್ರಕಟಿಸಿದ್ದಾರೆ.
ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರು ಹೆಚ್ಚಿನ ಮಾಹಿತಿಗೆ 9538732777 ಈ ವಾಟ್ಸಪ್ ಸಂಖ್ಯೆಗೆ ಸಂಪರ್ಕಿಸಬುಹುದು ಎಂದು ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ. ಉಮೇಶ್ ವಿನಂತಿಸಿದ್ದಾರೆ.
ಕನ್ನಡ ತಾಯಿ ಭುವನೇಶ್ವರಿ ಸ್ಮರಣಿಕೆ, ಚಿನದನದ ಲೇಪನದ ಪದಕವಿಟ್ಟು ಪುಷ್ಪ ವೃಷ್ಟಿಯೊಂದಿಇಗೆ ನಾಡಿನ ಗಣ್ಯ ಮಾನ್ಯರ ಅಮೃತ ಹಸ್ತದಲ್ಲಿ ಸನ್ಮಾನಿಸಿ ಗೌರವಿಸಲಾಗುವುದು. ನವಂಬರ್ 23 ರಂದು ಭಾನುವಾರ ನಡೆಯುವ ಈ ರಾಜ್ಯ ಪ್ರಶಸ್ತಿಗೆ ಹೆಸರು ನೊಂದಾಯಿಸುವ ದಿನಾಂಕ 25–9–2025 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗೆ 953873277, 9945785170, 9743897578, 9448423683 ಈ ಸನೀಹ ವಾಣಿಗಳಿಗೆ ಸಂಪರ್ಕಿಸಬಹುದು ಎಂದು ಕಲಾಕುಂಚದ ಪ್ರಧಾನ ಕಾರ್ಯದರ್ಶಿ ಕೆ.ಸಿ. ಉಮೇಶ್ ವಿನಂತಿಸಿದ್ದಾರೆ.

## ದುಷ್ಟರಿಂದ ಧಾರ್ಮಿಕ ನಂಬಿಕೆ ನಾಶ ಪಡಿಸಲು ಅಸಾಧ್ಯ



**ಶಿವಮೊಗ್ಗ:** ಜಗತ್ತಿನಲ್ಲಿಯೇ ಅತ್ಯಂತ ಪುರಾತನವಾದ ಸನಾತನ ಧರ್ಮ, ಭಾರತೀಯ ಸಂಸ್ಕೃತಿ ಮತ್ತು ಧಾರ್ಮಿಕ ನಂಬಿಕೆಯನ್ನು ನಾಶ ಪಡಿಸಲು ಶತಶತಮಾನಗಳಿಂದಲೂ ನಿರಂತರ ಪ್ರಯತ್ನ ನಡೆಯುತ್ತಿದೆ. ಧರ್ಮಸ್ಥಳ ಪ್ರಕರಣ ಸಹ ಇಂತಹ ಹೊಸ ಪ್ರಯತ್ನಗಳಲ್ಲಿ ಒಂದಾಗಿದೆ. ಆದರೆ ದುಷ್ಟಶಕ್ತಿಗಳಿಂದ ಸನಾತನ ಧರ್ಮ, ಸಂಸ್ಕೃತಿ ಮತ್ತು ಧಾರ್ಮಿಕ ನಂಬಿಕೆಯನ್ನು ನಾಶ ಪಡಿಸಲು ಯಾರಿಂದಲೂ ಸಾಧ್ಯವಿಲ್ಲ ಎಂದು ರಾಷ್ಟ್ರಭಕ್ತ ಬಳಗದ ಕೆ.ಇ. ಕಾಂತೇಶ್ ಪ್ರತಿಪಾದಿಸಿದರು.

ಗುಂಡಪ್ಪ ಶೆಡ್, ಮಲ್ಲೇಶ್ವರ ನಗರ ಹಾಗೂ ರಾಮ್‌ರಾವ್ ಬಡಾವಣೆ ನಿವಾಸಿಗಳ ಸಂಘದ ವತಿಯಿಂದ ನಗರದ ಗುಂಡಪ್ಪ ಶೆಡ್‌ನ ಮುಸ್ಸಂಜೆ ಪಾರ್ಕ್‌ನಲ್ಲಿ 30–08–2025ರ ಶನಿವಾರ ಸಂಜೆ ಹಮ್ಮಿಕೊಂಡಿದ್ದ ಸದರಿ ಸಂಘದ 25ನೇ ವರ್ಷದ ವಾರ್ಷಿಕೋತ್ಸವ ಹಾಗೂ 13ನೇ ವರ್ಷದ ಗಣೇಶೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಆಧುನಿಕ ಕಾಲಮಾನದಲ್ಲಿ ಸನಾತನ ಧರ್ಮದ ಮೇಲೆ ದಾಳಿ ಮಾಡುವುದು ಫ್ಯಾಷನ್ ಆಗಿ ಮಾರ್ಪಟ್ಟಿದೆ. ಧರ್ಮಸ್ಥಳ ಪ್ರಕರಣ ಸೇರಿದಂತೆ ಧಾರ್ಮಿಕ ನಂಬಿಕೆ ಮತ್ತು ಸನಾತನ ಸಂಸ್ಕೃತಿಯ ಮೇಲೆ ನಡೆಯುತ್ತಿರುವ ದಾಳಿ ಆಕಸ್ಮಿಕವಲ್ಲ, ಬದಲಾಗಿ ಆಯ್ಕೆಯಿಂದ ನಡೆಯುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಆದರೆ ಭಾರತದ ಆತ್ಮವಾಗಿರುವ ಆಧ್ಯಾತ್ಮಿಕ ಶಕ್ತಿ ದಾಳಿಕೋರರರು ಹಾಗೂ ದುಷ್ಟಶಕ್ತಿಗಳನ್ನು ಹಿಮ್ಮೆಟ್ಟಿಸಿ ಭದ್ರವಾಗಿ ನಿಂತಿದೆ. ಭಾರತೀಯ ಸಂಸ್ಕೃತಿ ಮತ್ತು ಮೌಲ್ಯಗಳ ವಿರುದ್ಧ ಯಾವುದೇ ಉದ್ದೇಶಪೂರ್ವಕ ಸಂಚುಗಳನ್ನು ಸೋಲಿಸಲು ಒಟ್ಟಾಗಿ ಕೆಲಸ ಮಾಡುವುದು ನಮ್ಮ ರಾಷ್ಟ್ರೀಯ ಕರ್ತವ್ಯವಾಗಿದೆ ಎಂದು ಅವರು ಹೇಳಿದರು.

ಮೈಸೂರಿನ ಅರ್ಜುನ ಅವಧೂತರು, ಸಂಘದ ಅಧ್ಯಕ್ಷ ಜೋಡಿಯಾಕ್ ಪ್ರಕಾಶ್, ಫೋಟೋಗ್ರಾಫರ್ ಮೋಹನ್, ಅಚ್ಯುತ್ ರಾವ್, ಡಾ. ವರದರಾಜ್, ಟಿ.ವಿ. ನರಸಿಂಹಮೂರ್ತಿ, ಗಣೇಶಣ್ಣ, ಶಿವಾನಂದ್, ಜೀವನ್ ಕುಮಾರ್, ದೀಪಾ ಶ್ರೀಧರ್, ಕಾವೇರಿ ಬಿರಾದರ್, ಸಾರಥಿ ಶಿವಾನಂದ್, ಎನ್.ಎಂ. ಶ್ರೀಧರ್, ವೀರನಗೌಡ ಬಿರಾದರ್ ಮತ್ತಿತರರು ಭಾಗವಹಿಸಿದ್ದರು.

## ಉತ್ಕೃಷ್ಟವಾದ ಲೋಭದ ನಿವೃತ್ತಿಯೇ ಶೌಚಧರ್ಮ

**ಗದಗ :** ಭೋಗೋಪಭೋಗ ವಸ್ತುಗಳಲ್ಲಿ ಅತ್ಯಾಸಕ್ತಿಯೇ ಲೋಭವಾಗಿದ್ದು, ಅತಿಯಾಸೆ, ಜಿಪುಣತನ ತೊರೆದು ಉದಾರ ಗುಣಗಳಿಂದ ದಾನ, ಧರ್ಮ, ಪರೋಪಕಾರದೊಂದಿಗೆ ಉತ್ತಮ ಜೀವನ ನಡೆಸುವುದೇ ಶೌಚಧರ್ಮದ ಪಾಲನೆಯಾಗಿದೆ ಎಂದು ಮಂಜುನಾಥ ಬೋಗಾರ ಹೇಳಿದರು. ಅವರು ಗದಗ ಜಿಲ್ಲಾ ದಿಗಂಬರ ಜೈನ ಸಂಘವು 'ದಶಲಕ್ಷಣ ಪರ್ವಾಚರಣೆ ಮತ್ತು ಸಮಾಜ ಸಂಪರ್ಕ ಸಭೆ' ಪ್ರಯುಕ್ತ ರೋಣದ ಪಾರ್ಶ್ವನಾಥ ಬಸದಿಯಲ್ಲಿ ಹಮ್ಮಿಕೊಂಡಿದ್ದ 'ಉತ್ತಮ ಶೌಚಧರ್ಮ' ಕುರಿತು ಮಾತನಾಡುತ್ತ, ಈ ವ್ರತನಿಯಮಕ್ಕೆ ಪ್ರತಿಜ್ಞಾಬದ್ಧರಾಗಿರುವರು ತಮಗೆ ಪ್ರಾಪ್ತವಾದ ವಸ್ತುಗಳಲ್ಲೇ ತೃಪ್ತರಾಗಿ ಸಂತುಷ್ಟರಾಗಿತ್ತಾರೆಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ನೇಮಿನಾಥ ಮುತ್ತಿನ ಅವರು ಮನುಷ್ಯನು ಅತಿ ಲಾಲಸೆಗಳು, ಭೋಗಭಾಗ್ಯಗಳ ಅಪೇಕ್ಷೆ, ಲೋಭ ಇತ್ಯಾದಿಗಳ ಕಾರಣದಿಂದ ದುಃಖಿಯಾಗಿ ಅಧಃಪತನದತ್ತ ಸಾಗುತ್ತಿದ್ದು, ಲೋಲುಪತೆಯನ್ನು ತ್ಯಾಗ ಮಾಡಿದವನು ಮಾತ್ರ ಅಂತರಂಗದಲ್ಲಿ ಶುಚಿರ್ಭೂತನಾಗುತ್ತಾನೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ಪಿ.ಎ. ಕುಲಕರ್ಣಿ, ಕಾರ್ಯದರ್ಶಿ ಪ್ರಕಾಶ ಮುತ್ತಿನ, ಉದ್ಯಮಿ ಅಭಿನಂದನ ಗೋಗಿ ಮತ್ತು ಸ್ಥಳೀಯ ಜೈನ ಸಮಾಜದ ಪದಾಧಿಕಾರಿಗಳು, ಹಿರಿಯರು, ಸುತ್ತಮುತ್ತಲಿನ ಗ್ರಾಮಗಳ ಶ್ರಾವಕರು, ಶ್ರಾವಿಕೆಯರು ಉಪಸ್ಥಿತರಿದ್ದರು.






**ಹರಿಹರ :** ರಿಂಗ್ ರೋಡ್ ಕಾ ರಾಜ್": ನಗರದ ರಿಂಗ್ ರಸ್ತೆಯಲ್ಲಿರುವ ಎಲ್ಲಮ್ಮ ನಗರದ 4ನೇ ಮೇನ್ 7ನೇ ಕ್ರಾಸ್ ಗಜಾನನ ಫ್ರೆಂಡ್ಸ್ ಗ್ರೂಪ್ ವತಿಯಿಂದ ಬುಧವಾರ ರಾತ್ರಿ ಕಗ್ಗತ್ತಲ ವೇಳೆ ಗಣಪನಿಗೆ ಮುಂಬೈ ಶೈಲಿಯಲ್ಲಿ ದಾವಣಗೆರೆಯಲ್ಲಿ ಮೊಟ್ಟ ಮೊದಲ ಬಾರಿಗೆ ಇತಿಹಾಸ ಸೃಷ್ಟಿಸಿ ಅದ್ದೂರಿ ಸ್ವಾಗತ ಕೋರಲಾಯಿತು ಗಣಪತಿಯ ಮೊದಲ ದರ್ಶನ ಪಡೆಯಲು ಸಾವಿರಾರು ಜನರು ಭಾಗಿಯಾಗಿದ್ದರು.

## ಪ್ರಬಂಧ ಸ್ಪರ್ಧೆ

**ಹಾಸನ :** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕಇಲಾಖೆಯ ವತಿಯಿಂದರಾಷ್ಟ್ರಪಿತ ಮಹಾತ್ಮಗಾಂಧೀಜಿಯವರ 156ನೇ ಜಯಂತಿಯ ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿ ಹಾಗೂ ಯುವಜನರಲ್ಲಿ ಮಹಾತ್ಮಗಾಂಧೀಜಿಯವರ ಬದುಕು. ಸ್ವಾತಂತ್ರ್ಯ ಚಳುವಳಿ, ಸರಳತೆ, ಅಹಿಂಸ ಮಾರ್ಗ, ಸಹಬಾಳ್ವೆ. ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಇತ್ಯಾದಿ ವಿಚಾರಗಳ ಬಗ್ಗೆ " ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ / ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನುಜಿಲ್ಲಾ ಮಟ್ಟದಲ್ಲಿ ಹಮ್ಮಿಕೊಳ್ಳಲಾಗಿದೆ.ಪ್ರೌಢ ಶಾಲಾ ವಿಭಾಗದಲ್ಲಿ :– 1) ಸ್ವಚ್ಚತೆಯ ಪಾಠ – ಗಾಂಧೀಜಿಯವರ ಸಂದೇಶ, 2) ಮಕ್ಕಳ ಭವಿಷ್ಯ ನಿರ್ಮಾಣದಲ್ಲಿಗಾಂಧೀಜಿಯವರ ಪಾತ್ರ. 3) ಗಾಂಧೀಜಿಯವರ ಸ್ವಾತಂತ್ರ್ಯದ ಕನಸು – ನನ್ನಕಲ್ಪನೆ. ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂಒಂದು ವಿಷಯಕುರಿತು 700 ರಿಂದ 800 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು.ಪದವಿ ಪೂರ್ವ ಶಿಕ್ಷಣ ವಿಭಾಗದಲ್ಲಿ :– 1) ಅಸ್ಪೃಶ್ಯತೆ ನಿವಾರಣೆಯಲ್ಲಿಗಾಂಧೀಜಿಯವರ ಹೋರಾಟ, 2) ಇಂದಿನ ಸಮಾಜದಲ್ಲಿ ಸರ್ವೋದಯ ಮತ್ತುಅಂತ್ಯೋದಯದ ಪ್ರಾಸಂಗಿಕತೆ, 3) ಬದಲಾವಣೆ ನನ್ನಿಂದಲೇಆರಂಭ – ಗಾಂಧೀಜಿಯವರ ಪಾಠ, ಪದವಿ ಪೂರ್ವ ಶಿಕ್ಷಣ ವಿಭಾಗದ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂಒಂದು ವಿಷಯಕುರಿತು 900 ರಿಂದ 1000 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು.

## ಸಹಕಾರದ ಮೂಲತತ್ವವನ್ನು ಬಾಲ್ಯದಿಂದಲೇ ಅಳವಡಿಸಿಕೊಳ್ಳಿ



**ಹಾಸನ:** ಸಹಕಾರದ ಮೂಲತತ್ವವಾದ ಒಬ್ಬರಿಗಾಗಿ ಎಲ್ಲರೂ, ಎಲ್ಲರಿಗಾಗಿ ಒಬ್ಬರು ಎಂಬುದನ್ನು ಚಿಕ್ಕಂದಿನಿಂದಲೇ ಕಲಿಯಬೇಕು ಎಂದು ಸರ್ಕಾರೀ ಕಲಾ, ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜಿನ ಪ್ರಾಂಶುಪಾಲರಾದ ಡಾ..ಇರ್ಷಾದ್ ಕರೆ ನೀಡಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಹಾಸನ ಜಿಲ್ಲಾ ಸಹಕಾರ ಒಕ್ಕೂಟ, ಹಾಸನ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಹಾಸನ ಸಹಕಾರ ಹಾಲು ಒಕ್ಕೂಟ ಸರ್ಕಾರೀ ಕಲಾ, ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜು, ಹಾಸನ ಮತ್ತು ಸಹಕಾರ ಇಲಾಖೆ ಸಂಯುಕ್ತಾಶ್ರಯದಲ್ಲಿ ಹಾಸನ ಜಿಲ್ಲಾ ಸಹಕಾರ ಒಕ್ಕೂಟದ ಸಹಕಾರ ಭವನದಲ್ಲಿ ಇಂದು ನಡೆದ "ಸಹಕಾರ" ಕುರಿತಂತೆ ಜಿಲ್ಲಾ ಮಟ್ಟದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರಬಂಧ ಮತ್ತು ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಚರ್ಚಾ ಸ್ಪರ್ಧೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದು ವಿವಿಧ ರೀತಿಯ ಸಹಕಾರ ಸಂಘಗಳಿದ್ದು ಯವಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಅದರ ಸದುಪಯೋಗ ಪಡೆಯಬೇಕೆಂದರು. ಸಹಕಾರ ಸಂಘದ ಮೂಲ ತತ್ವವಾದ ಒಬ್ಬರಿಗಾಗಿ ಎಲ್ಲರೂ ಎಲ್ಲರಿಗಾಗಿ ಒಬ್ಬರು ಎಂಬಂತೆ ಮನುಷ್ಯ ತನಗಾಗಿ ಬದುಕುವುದು ಸಹಜ ಇರುವಂತಹ ಸಮಯದಲ್ಲಿ ಇತರರಿಗಾಗಿ ಸ್ವಲ್ಪ ಸಮಯವನ್ನು ಮೀಸಲಿರಿಸುವುದು ಅವರ ಕಷ್ಟ ಕಾರ್ಪಣ್ಯಗಳಲ್ಲಿ ಸಹಕರಿಸುವುದು ಮುಖ್ಯವಾಗಿರುತ್ತದೆ.ಈ ದಿಸೆಯಲ್ಲಿ ಯುವಜನರು ಗಮನ ಹರಿಸಿ ಮುಂದುವರೆಯಬೇಕೆಂದರು.

ಅಧ್ಯಕ್ಷತೆಯನ್ನು ವಹಿಸಿದ್ದ ಹಾಸನ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಎಸ್.ಎನ್. ಪ್ರಕಾಶ್ ಮಾತನಾಡಿ, ಪ್ರಸ್ತುತ ವಿವಿಧ ರೀತಿಯ ಸಹಕಾರ ಸಂಘಗಳು ಕಾರ್ಯನಿರ್ವಹಿಸುತ್ತಿದ್ದು, ರೈತರು, ಸಹಕಾರಿಗಳು ಅರ್ಥಿಕ ಅಭಿವೃದ್ಧಿ ಹೊಂದಲು ಸಹಕಾರ ಸಂಘಗಳು ತುಂಬ ಉಪಯುಕ್ತವಾಗಿದೆ. ಜಿಲ್ಲೆಯಲ್ಲಿರುವ ವಿವಿಧ ರೀತಿಯ ಸಹಕಾರ ಸಂಘಗಳಿಂದ ಆಗುತ್ತಿರುವ ಅನೂಕೂಲಗಳ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು.

ಇಂತಹ ಸಹಕಾರ ಕುರಿತ ಸ್ಪರ್ಧೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳು ಪಾಲ್ಗೊಂಡು ಪ್ರಸ್ತುತ ಕಾಲಘಟ್ಟದಲ್ಲಿ ಉತ್ತಮ ಸಹಕಾರಿಗಳಾಗಿ ಸಹಕಾರ ಕ್ಷೇತ್ರದಲ್ಲಿ ಪಾಲ್ಗೊಳ್ಳಲು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಹಾಸನ ಜಿಲ್ಲಾ ಸಹಕಾರ ಒಕ್ಕೂಟದ ನಿರ್ದೇಶಕ ವಿ.ಎನ್. ರಾಜಣ್ಣ.

ಒಕ್ಕೂಟದ ಉಪಾಧ್ಯಕ್ಷ ಸೋಮೇಗೌಡ, ನಿರ್ದೇಶಕರಾದ ವಿ.ಎನ್. ರಾಜಣ್ಣ, ನಾಗರಾಜು, ಪುಟ್ಟಸ್ವಾಮಿಗೌಡ, ಪದ್ಮರಾಜು, ಸೋಮಣ್ಣ ಇತರರು ಬಾಗವಹಿಸಿದ್ದರು.

## ನಿಧನ ಸುದ್ದಿಗಳು

### ಹಳೆಬಾತಿ ಶ್ರೀ ದಾಸರ ಹಾಲಮ್ಮ ನಿಧನ

**ದಾವಣಗೆರೆ :** ತಾಲ್ಲೂಕು ಮತ್ತು ಜಿಲ್ಲೆ ಹಳೆಬಾತಿ ಗುಡ್ಡದ ಕ್ಯಾಂಪ್ ವಾಸಿ ದಿ. ಶ್ರೀ ದಾಸರ ಹನುಮಂತಪ್ಪನವರ ಧರ್ಮಪತ್ನಿ ಶ್ರೀಮತಿ ದಾಸರ ಹಾಲಮ್ಮ ಅವರು, ದಿನಾಂಕ 31.08.2025ರ ಭಾನುವಾರ ಮಧ್ಯಾಹ್ನ 1.05 ಕ್ಕೆ ನಿಧನರಾದರು. ಅವರಿಗೆ 90 ವರ್ಷ ವಯಸ್ಸಾಗಿತ್ತು. ನಾಲ್ವರು ಪುತ್ರರು, ಓರ್ವ ಪುತ್ರಿ, ಸೊಸೆಯಂದಿರು, ಅಳಿಯ, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ : 01.09.2025ರ ಸೋಮವಾರ ಮಧ್ಯಾಹ್ನ 12 ಗಂಟೆಗೆ ಹಳೇಬಾತಿ ರುದ್ರಭೂಮಿಯಲ್ಲಿ ನೆರವೇರಿದೆ.

### ಕುಂಬಳೂರು ಗ್ರಾಮದ ಬಿ.ಜೆ. ಗುರುದತ್ ನಿಧನ

**ಹರಿಹರ :** ತಾಲ್ಲೂಕು ಕುಂಬಳೂರು ಗ್ರಾಮದ ವಕೀಲರಾದ ಬಿ. ಭದ್ರೇಶ್ ಅವರ ಸಹೋದರರಾದ ಬಿ. ಜಗದೀಶ್ ಇವರ ಪುತ್ರಬಿ.ಜೆ ಗುರುದತ್ (34 ) ಇವರು, ದಿನಾಂಕ 31–08–2025 8 ಭಾನುವಾರ ರಾತ್ರಿ 9–30 ಕ್ಕೆ ಬೆಂಗಳೂರಿನ ಆಸ್ಪತ್ರೆಯಲ್ಲಿ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ.ತಂದೆ–ತಾಯಿ, ದೊಡ್ಡಪ್ಪ–ದೊಡ್ಡಮ್ಮ, ಸಹೋದರ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 01–09–2025 ರ ಸೋಮವಾರ ಮಧ್ಯಾಹ್ನ 1 ಗಂಟೆಗೆ ಕುಂಬಳೂರಿನ ವೀರಶೈವ ರುದ್ರಭೂಮಿಯಲ್ಲಿ ನೆರವೇರಿದೆ.

## ನೈಸರ್ಗಿಕ ವಿಕೋಪಕ್ಕೆ ಮೋದಿ ಕಳವಳ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಮನ್ ಕಿ ಬಾತ್ ಕಾರ್ಯಕ್ರಮದ 125 ನೇ ಸಂಚಿಕೆಯಲ್ಲಿ ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ್ದಾರೆ. ಅವರು ಹಲವು ಪ್ರಮುಖ ವಿಷಯಗಳ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡಿದ್ದಾರೆ. ಕಾಶ್ಮೀರದಲ್ಲಿ ನಡೆದ ಕ್ರಿಕೆಟ್ ಪಂದ್ಯ, ಯುಪಿಎಸ್‌ಸಿ ಪರೀಕ್ಷೆಗೆ ಸಂಬಂಧಿಸಿದ ಹೊಸ ಉಪಕ್ರಮಗಳು, ನೈಸರ್ಗಿಕ ವಿಕೋಪಗಳ ಪರಿಹಾರ ಪ್ರಯತ್ನಗಳು ಮತ್ತು ಕ್ರೀಡಾಪಟುಗಳ ಅಭಿವೃದ್ಧಿಯಿಂದ ಹಿಡಿದು ದೇಶದ ಐತಿಹಾಸಿಕ ಕಾರ್ಯಾಚರಣೆಯವರೆಗೆ ಹಲವು ವಿಷಯಗಳನ್ನು ಚರ್ಚಿಸಲಾಗಿದೆ.

ಪ್ರಧಾನಿ ಮೋದಿ ಈ ಕಾರ್ಯಕ್ರಮವನ್ನು ನೈಸರ್ಗಿಕ ವಿಕೋಪಗಳೊಂದಿಗೆ ಪ್ರಾರಂಭಿಸಿದರು. ಪರ್ವತಗಳಲ್ಲಿ ಭಾರೀ ಮಳೆ ಮತ್ತು ಭೂಕುಸಿತಗಳಿಂದ ಉಂಟಾಗುವ ಸಮಸ್ಯೆಗಳ ಬಗ್ಗೆ ಅವರು ಕಳವಳ ವ್ಯಕ್ತಪಡಿಸಿದ್ದಾರೆ. ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ತಂಡಗಳೊಂದಿಗೆ ಭದ್ರತಾ ಪಡೆಗಳು ಸಂತ್ರಸ್ತ ಜನರಿಗೆ ಸಹಾಯ ಮಾಡಲು ಹಗಲಿರುಳು ಶ್ರಮಿಸುತ್ತಿವೆ ಎಂದು ಪ್ರಧಾನಿ ಹೇಳಿದ್ದಾರೆ. ವಿಪತ್ತುಗಳ ಸಮಯದಲ್ಲಿ ಜಾಗರೂಕರಾಗಿರಿ ಮತ್ತು ಸ್ಥಳೀಯ ಆಡಳಿತದ ಸೂಚನೆಗಳನ್ನು ಪಾಲಿಸುವಂತೆ ಅವರು ಸಾರ್ವಜನಿಕರಿಗೆ ಮನವಿ ಮಾಡಿದ್ದಾರೆ.

ಜಮ್ಮು ಮತ್ತು ಕಾಶ್ಮೀರದಲ್ಲಿ ಕ್ರೀಡಾ ಅಭಿವೃದ್ಧಿಯನ್ನು ಪ್ರಧಾನಿ ಮೋದಿ ಎತ್ತಿ ತೋರಿಸಿದ್ದು ಪುಲ್ವಾಮಾ ಕ್ರೀಡಾಂಗಣದಲ್ಲಿ ದಾಖಲೆ ಸಂಖ್ಯೆಯ ಜನರು ಭಾಗವಹಿಸಿದ್ದರು ಮತ್ತು ಇಲ್ಲಿ ಹಗಲು–ರಾತ್ರಿ ಕ್ರಿಕೆಟ್ ಪಂದ್ಯವನ್ನು ನಡೆಸಲಾಯಿತು ಎಂದು ಅವರು ಹೇಳಿದ್ದಾರೆ. ಈ ಪಂದ್ಯವು ರಾಯಲ್ ಪ್ರೀಮಿಯರ್ ಲೀಗ್‌ನ ಭಾಗವಾಗಿತ್ತು. ಇದು ಮೊದಲು ಸಾಧ್ಯವಾಗಿರಲಿಲ್ಲ, ಆದರೆ ಈಗ ಭಾರತ ಬದಲಾಗುತ್ತಿದೆ ಎಂದು ಪ್ರಧಾನಿ ತಿಳಿಸಿದ್ದಾರೆ.

ಇದಲ್ಲದೆ, ಶ್ರೀನಗರದ ದಾಲ್ ಸರೋವರದಲ್ಲಿ ನಡೆದ ಭಾರತದ ಮೊದಲ ಖೇಲೋ ಇಂಡಿಯಾ ಜಲ ಕ್ರೀಡಾ ಉತ್ಸವವನ್ನು ಶ್ರೀ ಮೋದಿ ಪ್ರಸ್ತಾಪಿಸಿದರು. ಭಾರತದಾದ್ಯಂತ 800 ಕ್ಕೂ ಹೆಚ್ಚು ಕ್ರೀಡಾಪಟುಗಳು ಇದರಲ್ಲಿ ಭಾಗವಹಿಸಿದ್ದರು. ಕ್ರೀಡೆಯ ಮೂಲಕ ಏಕ್ ಭಾರತ್ ಶ್ರೇಷ್ಠ ಭಾರತ್ ನ ಮನೋಭಾವ ಮತ್ತು ದೇಶದ ಏಕತೆ ಬಲಗೊಳ್ಳುತ್ತದೆ ಎಂದು ಪ್ರಧಾನಿ ಹೇಳಿದರು. ಜೋ ಖೇಲಾ ಹೈ ವಹಿ ಖಿಲ್ತಾ ಹೈ ಎಂದೂ ಅವರು ಹೇಳಿದರು.

ನಾಗರಿಕ ಸೇವಾ ಪರೀಕ್ಷೆಗೆ ಸಂಬಂಧಿಸಿದಂತೆ ಪ್ರಧಾನಿ ಮೋದಿ, ಕಠಿಣ ಪರಿಶ್ರಮದ ಹೊರತಾಗಿಯೂ ಅನೇಕ ಅರ್ಹ ಯುವಕರು ಅಂತಿಮ ಪಟ್ಟಿಗೆ ಬರಲು ಸಾಧ್ಯವಾಗುತ್ತಿಲ್ಲ ಎಂದು ಹೇಳಿದ್ದಾರೆ.

## ವಿಮಾನ ತುರ್ತು ಭೂಸ್ಪರ್ಶ ತಪ್ಪಿದ ಅನಾಹುತ



**ನವದೆಹಲಿ:** ನಗರದಿಂದ ಇಂದೋರ್‌ಗೆ ಹೊರಟಿದ್ದ ಏರ್ ಇಂಡಿಯಾ ವಿಮಾನವು ಟೇಕ್ ಆಫ್ ಆದ ಸ್ವಲ್ಪ ಸಮಯದಲ್ಲಿ ಅನಾಹುತದ ಮುನ್ಸೂಚನೆ ದೊರೆತು ತುರ್ತು ಭೂಸ್ಪರ್ಶ ಮಾಡಲಾಗಿದೆ.

ಪೈಲಟ್‌ಗೆ, ವಿಮಾನದ ಬಲ ಎಂಜಿನ್‌ನಲ್ಲಿ "ಬೆಂಕಿಯ ಸೂಚನೆ" ದೊರೆತಿದ್ದರಿಂದ ಎಂಜಿನ್ ಆಫ್ ಮಾಡಿ ತುರ್ತು ಭೂಸ್ಪರ್ಶ ಮಾಡಲಾಗಿದ್ದು, ಪೈಲಟ್ ಸಮಯಪ್ರಜ್ಞೆಯಿಂದ ಭಾರೀ ಅನಾಹುತ ತಪ್ಪಿದೆ.

ಟೇಕ್‌ಆಫ್ ಆದ ಕೆಲವೇ ನಿಮಿಷಗಳಲ್ಲಿ ಎಂಜಿನ್‌ನಲ್ಲಿ ಬೆಂಕಿಯ ಸೂಚನೆ ಸೇರಿ ತಾಂತ್ರಿಕ ದೋಷ ಕಂಡುಬಂದಿದೆ. ಇದನ್ನು ಗಮನಿಸಿದ ಪೈಲಟ್‌ಗಳು ತಕ್ಷಣವೇ ದೆಹಲಿಯ ವಿಮಾನ ನಿಲ್ದಾಣಕ್ಕೆ ವಾಪಸ್ ಆಗಿ ತುರ್ತು ಭೂಸ್ಪರ್ಶ ಮಾಡಿದ್ದಾರೆ.

ವಿಮಾನವನ್ನು ತಪಾಸಣೆಗಾಗಿ ಸ್ಥಗಿತಗೊಳಿಸಲಾಗಿದ್ದು, ಪ್ರಯಾಣಿಕರನ್ನು ಪರ್ಯಾಯ ವಿಮಾನದಲ್ಲಿ ಸ್ಥಳಾಂತರಿಸಲಾಗುತ್ತಿದೆ, ಅದು ಇಂದೋರ್‌ಗೆ ಹಾರಾಟ ನಡೆಸಲಿದೆ.ತುರ್ತು ಪರಿಸ್ಥಿತಿಯಲ್ಲಿ ಸಿಬ್ಬಂದಿಯ ವೃತ್ತಿಪರತೆಗೆ ಧನ್ಯವಾದಗಳನ್ನು ಅರ್ಪಿಸುತ್ತಾ, ಪ್ರಯಾಣಿಕರಿಗೆ ಉಂಟಾದ ಅನಾನುಕೂಲತೆಗೆ ತೀವ್ರ ವಿಷಾದ ವ್ಯಕ್ತಪಡಿಸುವುದಾಗಿ ವಿಮಾನಯಾನ ಸಂಸ್ಥೆ ತಿಳಿಸಿದೆ.

ಆಗಸ್ಟ್ 31 ರಂದು ದೆಹಲಿಯಿಂದ ಇಂದೋರ್‌ಗೆ ಹಾರಾಟ ನಡೆಸುತ್ತಿದ್ದ ಎಐ2913 ವಿಮಾನವು, ಕಾಕ್‌ಪಿಟ್ ಸಿಬ್ಬಂದಿಗೆ ಸರಿಯಾದ ಎಂಜಿನ್‌ಗಾಗಿ ಬೆಂಕಿಯ ಸೂಚನೆಯನ್ನು ಪಡೆದ ಕಾರಣ, ಟೇಕ್ ಆಫ್ ಆದ ಸ್ವಲ್ಪ ಸಮಯದ ನಂತರ ದೆಹಲಿಗೆ ಮರಳಿತು" ಎಂದು ಏರ್ ಇಂಡಿಯಾ ತಿಳಿಸಿದೆ.

## ಉಕ್ರೇನ್‌ಗೆ ಡೀಸೆಲ್ ಪೂರೈಕೆಯಲ್ಲಿ ಭಾರತ ನಂ.1

**ಹೊಸದಿಲ್ಲಿ:** ಯುದ್ಧ ಪೀಡಿತ ಉಕ್ರೇನ್‌ಗೆ ಭಾರತ ದೊಡ್ಡ ಪ್ರಮಾಣದಲ್ಲಿ ಡೀಸೆಲ್ ಪೂರೈಸುತ್ತಿದ್ದು, ಕಳೆದ ಜುಲೈನಲ್ಲಿ 83,000 ಟನ್ ಡೀಸೆಲ್ ಸರಬರಾಜು ಮಾಡಿದೆ.

ಭಾರತ ಆಮದು ಮಾಡಿಕೊಳ್ಳುತ್ತಿರುವ ಕಚ್ಚಾ ತೈಲವನ್ನು ಸಂಸ್ಕರಿಸಿ ದಿನಕ್ಕೆ ಸರಾಸರಿ 2,700 ಟನ್ ರಫ್ತು ಮಾಡುತ್ತಿದೆ. ಉಕ್ರೇನ್ ರಾಜಧಾನಿ ಕೀವ್‌ಗೆ ಬರುವ ಮಾಸಿಕ ಡೀಸೆಲ್‌ನಲ್ಲಿ ಶೇ. 15.5ರಷ್ಟು ಭಾರತದ ಪೂರೈಕೆಯೇ ಆಗಿದೆ.

ಕಳೆದ ವರ್ಷ ಜುಲೈನಲ್ಲಿ ರಫ್ತು ಪ್ರಮಾಣ ಶೇ. 1.9ರಷ್ಟಿತ್ತು. ಈ ಮಾಹಿತಿಯನ್ನು ಕೀವ್ ಮೂಲದ ತೈಲ ಮಾರುಕಟ್ಟೆ ವಿಶ್ಲೇಷಣಾ ಸಂಸ್ಥೆ ನಾಫ್ಟೊ ರೈನೋಕ್ ಹೊರಗೆಡವಿದೆ

**ಅಮೆರಿಕ –ಭಾರತ ಉದ್ವಿಗ್ನತೆಯಲ್ಲಿರುವ ವ್ಯಂಗ್ಯ!**

ರಾಜಕೀಯವಾಗಿ ತುಂಬ ಕ್ಷೋಭೆಗಳಿರುವ ಕಾಲಘಟ್ಟದಲ್ಲಿ ಈ ಸಂಗತಿ ಅನಾವರಣಗೊಂಡಿದೆ. ಇತ್ತೀಚೆಗೆ ಅಮೆರಿಕ, ಭಾರತದ ಮೇಲೆ ಶೇ. 25ರಷ್ಟು ಪ್ರತಿಸುಂಕವನ್ನು ವಿಧಿಸಿತು. ರಷ್ಯಾದಿಂದ ತೈಲವನ್ನು ಖರೀದಿಸಿ, ಉಕ್ರೇನ್ ಸಮರಕ್ಕೆ ಹಣಕಾಸು ನೆರವು ನೀಡುತ್ತಿದೆ. ರಷ್ಯಾದಿಂದ ಕಚ್ಚಾ ತೈಲ ಆಮದನ್ನು ತಕ್ಷಣ ನಿಲ್ಲಿಸಬೇಕು. ಇಲ್ಲಿದ್ದರೆ ಶೇ. 25 ಹೆಚ್ಚುವರಿ ಪ್ರತಿಸುಂಕವನ್ನು ದಂಡದ ರೂಪದಲ್ಲಿ ಪಾವತಿಸಿ ಎಂದು ಗುಡುಗಿತು.

ಈಗ ತನ್ನ ದೇಶಕ್ಕೆ ಅಡಿ ಇರಿಸುವ ಭಾರತದ ಬಹುತೇಕ ಉತ್ಪನ್ನಗಳ ಮೇಲೆ ಶೇ. 50ರಷ್ಟು ಸುಂಕದ ಭಾರ ಹೊರಿಸಿದೆ. ವಾಸ್ತವ ಎಂದರೆ ರಷ್ಯಾದಿಂದ ತೈಲವನ್ನು ತರಿಸಿಕೊಂಡು ಅದನ್ನು ಸಂಸ್ಕರಿಸಿ ಅದನ್ನು ಉಕ್ರೇನ್‌ಗೆ ರಫ್ತು ಮಾಡುತ್ತಿದೆ. ಇದರ ಮೂಲಕ ಉಕ್ರೇನ್ ಆರ್ಥಿಕತೆಯ ಸುಸ್ಥಿರತೆಗೆ ಬೇಕಾದ 'ಇಂಧನ'ವನ್ನು ಒದಗಿಸುತ್ತಿದೆ.

ನಾಫ್ಟೊ ರೈನೋಕ್ ಪ್ರಕಾರ ಭಾರತದ ಡೀಸೆಲ್ ಹಲವು ಚಾನಲ್‌ಗಳ ಮೂಲಕ ಉಕ್ರೇನ್‌ಗೆ ತಲುಪುತ್ತಿದೆ. ಹೆಚ್ಚಿನ ಪಾಲು ರೊಮೇನಿಯಾದ ಮೂಲಕ ಸಾಗಣೆಯಾಗಿ ಡ್ಯಾನುಬೆ ಬಂದರುಗಳ ಮೂಲಕ ಪ್ರವೇಶ ಪಡೆಯುತ್ತದೆ.

ಮತ್ತೊಂದು ಮಾರ್ಗ ಒಪೆಟ್ (ಒಪಿಇಟಿ) ನಿರ್ವಹಣೆ ಮಾಡುವ ನಿರ್ವಹಿಸುವ ಟರ್ಕಿಯ ಮರ್ಮರ ಎರೆಗ್ಲಿಸಿ ಟರ್ಮಿನಲ್ ಅನ್ನು ಬಳಸುತ್ತದೆ, ಇದು ಭಾಗಶಃ ನಿರ್ಬಂಧಗಳ ಹೊರತಾಗಿಯೂ ಸಕ್ರಿಯವಾಗಿದೆ. ಈ ವರ್ಷದ ಜನವರಿ ಮತ್ತು ಜುಲೈ ನಡುವೆ ಭಾರತವು ಉಕ್ರೇನ್ ಡೀಸೆಲ್ ಆಮದಿನ ಶೇ. 10.2ರಷ್ಟು ಪೂರೈಸಿದೆ.

## ಧರ್ಮಾಂಧರು ಮಾತ್ರ ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಹೆಸರನ್ನು ವಿರೋಧಿಸುತ್ತಾರೆ: ಸಿಎಂ ಸಿದ್ದರಾಮಯ್ಯ



**ಮೈಸೂರು:** ದಸರಾ ಉದ್ಘಾಟನೆಯನ್ನು ಬೂಕರ್ ಪ್ರಶಸ್ತಿ ವಿಜೇತ ಬಾನು ಮುಷ್ತಾಕ್ ನಡೆಸುವುದನ್ನು ವಿರೋಧಿಸುತ್ತಿರುವ ಬಿಜೆಪಿಗೆ ಸಿಎಂ ಸಿದ್ದರಾಮಯ್ಯ ತಿರುಗೇಟು ನೀಡಿ–ದ್ದಾರೆ. ಧರ್ಮಾಂಧರು ಮಾತ್ರ ಬಾನು ಮುಷ್ತಾಕ್ ಹೆಸರನ್ನ ವಿರೋಧಿಸುತ್ತಾರೆ.

ಮೈಸೂರಿನಲ್ಲಿ ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಮಾತನಾಡಿ, ಕನ್ನಡಾಂಬೆಯ ಬಗ್ಗೆ ಬಾನು ಮುಷ್ತಾಕ್ ನೀಡಿರುವ ಹಳೇ ಹೇಳಿಕೆಗೂ. ದಸರಾ ಉದ್ಘಾಟನೆಗೂ ಏನು ಸಂಬಂಧ ಎಂದು ಪ್ರಶ್ನಿಸಿದ್ದಾರೆ. ಅಲ್ಲದೆ ಬಿಜೆಪಿ ಕುಂಟು ನೆಪ ಹುಡುಕುತ್ತಿದ್ದಾರೆ ಅಷ್ಟೇ. ಯಾವತ್ತು ಏನೋ ಹೇಳಿದ್ದಾರೆ ಎಂದು ಅದನ್ನ ಇಲ್ಲಿದೆ ಲಿಂಕ್ ಮಾಡುವುದು ಎಷ್ಟು ಸರಿ. ಧರ್ಮಾಂದರು ಮಾತ್ರ ಬಾನು ಮುಷ್ತಾಕ್ ಹೆಸರನ್ನ ವಿರೋಧಿಸುತ್ತಾರೆ ಎಂದರು.

ಬೆರಳಣಿಕೆ ಮಂದಿಗೆ ಮಾತ್ರ ಬೂಕರ್ ಪ್ರಶಸ್ತಿ ಬಂದಿದೆ ಹೀಗಾಗಿ ನಾನೇ ಅವರ ಹೆಸರನ್ನ ಆಯ್ಕೆ ಮಾಡಿದ್ದೇನೆ. ಉದ್ಘಾಟಕರು ದನ ತಿನ್ನುವುದನ್ನ ಬಿಜೆಪಿಯವರು ನೋಡಿ–ದ್ದಾರಾ. ಅವರು ವಿರೋಧಿಸಲೇಬೇಕೆಂದು ವಿರೋಧ ಮಾಡುತ್ತಿದ್ದಾರೆ ಎಂದರು.

ಅಲ್ಲದೆ ದಸರಾ ಸಾಂಸ್ಕೃತಿಕ ಹಬ್ಬ. ಇದು ಧರ್ಮಾತೀತವಾದ ಹಬ್ಬ. ಇದು ಎಲ್ಲಾ ಜಾತಿ ಧರ್ಮಕ್ಕೆ ಸೇರಿದ್ದು. ನಿಸಾರ್ ಅಹಮದ್ ಕೂಡ ದಸರಾ ಉದ್ಘಾಟನೆ ಮಾಡಿದ್ದಾರೆ. ಟಿಪ್ಪು ಹೈದಾರಲಿ ಕೂಡ ದಸರಾ ನಡೆಸಿದ್ದಾರೆ. ದಿವಾನ್ ಮಿರ್ಜಾ ಇಸ್ಮಾಯಿಲ್ ಕೂಡ ದಸರಾ ನಡೆಸಿದ್ದಾರೆ. ಧರ್ಮಸ್ಥಳದ ಮೇಲೆ ಅನುಮಾನ ತೂಗುಕತ್ತಿ ಇದೆ. ಅದನ್ನು ನಿವಾರಿಸಲು ತನಿಖೆ ಮಾಡುತ್ತಿದ್ದೇವೆ. ಉನ್ನತಮಟ್ಟದ ತನಿಖೆ ಸಂಸ್ಥೆಯ ಅಗತ್ಯ ಇಲ್ಲ ಎಂದು ಸಿಎಂ ಸಿದ್ದರಾಮಯ್ಯ ಮೈಸೂರಲ್ಲಿ ಹೇಳಿದ್ದಾರೆ.

ಎಸ್‌ಐಟಿ ತನಿಖೆಯನ್ನ ಧರ್ಮಾಧಿಕಾರಿಗಳೇ ಸ್ವಾಗತ ಮಾಡಿದ್ದಾರೆ. ಬಿಜೆಪಿ ಕೂಡ ಸ್ವಾಗತ ಮಾಡಿತ್ತು. ತನಿಖೆ ನಡೆಯುವ ಈ ಹಂತದಲ್ಲಿ ಧರ್ಮದ ಯಾತ್ರೆ ಮಾಡಿದರೆ ಅದರಲ್ಲಿ ಅರ್ಥ ಇದೆಯಾ. ಬಿಜೆಪಿ ರಾಜಕೀಯಕ್ಕೆ ಈ ಯಾತ್ರೆ ಮಾಡುತ್ತಿದೆ. ಬಿಜೆಪಿಯವರು ಡೋಂಗಿಗಳು. ಡೋಂಗಿಗಳು ಮಾತ್ರ ತಮಗೆ ಬೇಕಾದಾಗ ಬೇಕಾದ ರೀತಿ ಮಾತನಾಡುತ್ತಾರೆ. ನಾವು ಎಸ್‌ಐಟಿ ತನಿಖೆಯಲ್ಲಿ ಮಧ್ಯ ಪ್ರವೇಶ ಮಾಡುವುದಿಲ್ಲ. ಯಾವ ಒತ್ತಡವನ್ನ ಸಹ ನಾವು ತಬಿಖೆ ಮೇಲೆ ಹೇರಿಲ್ಲ, ತನಿಖೆಗೆ ಸಮಯ ನಿಗದಿ ಮಾಡಿಲ್ಲ. ಯಾರು ಏನು ಬೇಕಾದರೂ ಯಾತ್ರೆ ಮಾಡಿಕೊಳ್ಳಲಿ. ನಮಗೆ ಅದಕ್ಕು ಸಂಬಂಧ ಇಲ್ಲ. ಬಿಜೆಪಿಯವರಿಗೆ ಧರ್ಮವೂ ಗೊತ್ತಿಲ್ಲ, ಜಾತಿಯೂ ಗೊತ್ತಿಲ್ಲ. ಬರಿ ರಾಜಕಾರಣ ಮಾಡುತ್ತಿದ್ದಾರೆ ಎಂದರು.

ಇನ್ನು ರಾಜ್ಯದಲ್ಲಿ ಆಸ್ತಿ ಮುದ್ರಾಂಕ ಶುಲ್ಕ ಹೆಚ್ಚಳ ವಿಚಾರ ಪ್ರತಿಕ್ರಿಯೆ ನೀಡಿ, ಶುಲ್ಕ ಹೆಚ್ಚಳವನ್ನು ಸಿಎಂ ಸಮರ್ಥಿಸಿಕೊಂಡರು. 1% ಮುದ್ರಾಂಕ ಶುಲ್ಕ ಹೆಚ್ಚು ಮಾಡಿದ್ದೇವೆ. ಬೇರೆ ರಾಜ್ಯಗಳಲ್ಲಿ ಈ ತೆರಿಗೆ ಈಗಾಗಲೇ ಇದೆ. ಅದರ ಅನುಸಾರ ಹೆಚ್ಚಳ ಮಾಡಿದ್ದೇವೆ ಎಂದಿದ್ದಾರೆ. ಪ್ರತಾಪ್ ಸಿಂಹ ಹೇಳಿಕೆಗೆ ಎಂಬಿ ಪಾಟೀಲ್ ಕಿಡಿ.

ಈ ಬಾರಿಯ ಬೂಕರ್ ಪ್ರಶಸ್ರಿ ವಿಜೇತೆ ಬಾನು ಮುಷ್ತಾಕ್ ದಸರಾ ಉದ್ಘಾಟನೆ ಮಾಡುವುದಕ್ಕೆ ಬಿಜೆಪಿ ವಿರೋಧ ಮಾಡುತ್ತಿದೆ. ಮಾಜಿ ಸಂಸದ ಪ್ರತಾಪಸಿಂಹ್ ಬಾನು ಮುಷ್ತಾಕ್ ದಸರಾ ಉದ್ಘಾಟನೆಗೆ ಹಣೆಗೆ ಕುಂಕುಮ ಹಚ್ಚಿಕೊಂಡು ಬರಬೇಕೆಂದು ಹೇಳಿಕೆ ನೀಡಿದ್ದು ಇದಕ್ಕೆ ಕೈಗಾರಿಕಾ ಸಚಿವ ಎಂ ಬಿ ಪಾಟೀಲ್ ವಿರೋಧ ಮಾಡಿದ್ದಾರೆ.

ವಿಜಯಪುರ ನಗರದಲ್ಲಿ ಮಾತನಾಡಿದ ಸಚಿವ ಎಂ ಬಿ ಪಾಟೀಲ್ ಮಾಜಿ ಸಂಸದ ಪ್ರತಾಪಸಿಂಹ ಹೇಳಿಕೆಗೆ ಟಾಂಗ್ ಕೊಟ್ಟರು. ಬಾನು ಮುಷ್ತಾಕ್ ಅವರ ಧರ್ಮದಲ್ಲಿ ಹಣೆಗೆ ಹಚ್ಚಿಕೊಳ್ಳಲ್ಲಾ, ಬದಲಾಗಿ ಕತ್ತಿಗೆ ಹಚ್ಚಿಕೊಳ್ಳುತ್ತಾರೆ. ಚಾಮುಂಡಿ ತಾಯಿ ನನ್ನ ಕರೆಸಿಕೊಳ್ಳುತ್ತಿದ್ದಾರೆಂದು ಈಗಾಗಲೇ ಬಾನು ಮುಷ್ತಾಕ್ ಹೇಳಿದ್ದಾರೆ. ತಾಯಿಗಿಂತ ಹೆಚ್ಚಿಂದು ಆಯ್ತಾ ಇವರಿಗೆ? ರಾಜಕಾರಣವೇ ಮುಖ್ಯ ಇವರಿಗೆ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು. ಬಿಜೆಪಿಯವರದ್ದು ಇದೇ ಕೆಲಸವಾಗಿದೆ. ವಿವಾದ ಮಾಡುವುದೇ ಕೆಲಸವಾಗಿದೆ ಎಂದು ಕೈಗಾರಿಕಾ ಸಚಿವ ಎಂ ಬಿ ಪಾಟೀಲ್ ಟಾಂಗ್ ಕೊಟ್ಟರು.

## ಮೋದಿ ಜತೆಗಿನ ಉದ್ವಿಗ್ನತೆ: ಭಾರತ ಭೇಟಿ ಕೈಬಿಟ್ಟ ಟ್ರಂಪ್!



**ವಾಷಿಂಗ್ಟನ್:** ಈ ವರ್ಷದ ಕೊನೆಯಲ್ಲಿ ಕ್ವಾಡ್ ಶೃಂಗಸಭೆಗಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತಕ್ಕೆ ಭೇಟಿ ನೀಡುವ ಯೋಜನೆಯಿಂದ ಹಿಂದೆ ಸರಿಯುವ ನಿರ್ಧಾರ ಕೈಗೊಂಡಿದಾರೆ ಎಂದು ದಿ ನ್ಯೂಯಾರ್ಕ್ ಟೈಮ್ಸ್ ವರದಿ ಮಾಡಿದೆ. ಆದರೆ, ಈ ಬಗ್ಗೆ ಶ್ವೇತಭವನದಿಂದ ಯಾವುದೇ ಅಧಿಕೃತ ಪ್ರಕಟಣೆ ಬಂದಿಲ್ಲ.

ದಿ ನೊಬೆಲ್ ಪ್ರೈಸ್ ಆಯಂಡ್ ಎ ಟೆಸ್ಟಿ ಫೋನ್ ಕಾಲ್ ಹೌ ದ ಟ್ರಂಪ್ ಮೋದಿ ರಿಲೇಶನ್‌ಷಿಪ್ ಅನ್‌ರಾವೆಲ್ಡ್' ಎಂಬ ಶೀರ್ಷಿಕೆಯಡಿ ಪ್ರಕಟವಾದ ವರದಿಯಲ್ಲಿ ಈ ವಿಷಯವನ್ನು ಪ್ರಸ್ತಾಪಿಸಲಾಗಿದೆ.

ಕಳೆದ ಕೆಲವು ತಿಂಗಳಿನಿಂದ ಅಮೆರಿಕ ಮತ್ತು ಭಾರತ ನಡುವೆ ಹದಗೆಡುವುತ್ತಿರುವ ದ್ವಿಪಕ್ಷೀಯ ಸಂಬಂಧದ ಬಗ್ಗೆ ಈ ವರದಿ ವಿವರಿಸಿದೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜೂ.17 ರಂದು ಭಾರತದ ಪ್ರಧಾನಿ ನರೇಂದ್ರ ಮೋದಿ ಜತೆ ಮಾತನಾಡಿದಾಗ ನವೆಂಬರ್‌ನಲ್ಲಿ ಕ್ವಾಡ್ ಶೃಂಗಕ್ಕಾಗಿ ಭಾರತಕ್ಕೆ ಬರುವೆ ಎಂದಿದ್ದರು. ಆದರೆ ಸಂಬಂಧ ಹಳಸಿದ ಕಾರಣ ಭಾರತ ಭೇಟಿ ಕೈಬಿಟ್ಟಿದ್ದಾರೆ ಎಂದು ನ್ಯೂಯಾರ್ಕ್ ಟೈಮ್ಸ್ ವರದಿ ಮಾಡಿದೆ.

ಡೊನಾಲ್ಡ್ ಟ್ರಂಪ್ ಹಾಗೂ ನರೇಂದ್ರ ಮೋದಿ ಅವರ ಸಂಬಂಧ ಹಳಸಲು ಟ್ರಂಪ್ ಅವರ ನೊಬೆಲ್ ಶಾಂತಿ ಪ್ರಶಸ್ತಿಯ ಆಸೆಯೇ ಕಾರಣ ಎಂಬ ಅಂಶ ಬಹಿರಂಗವಾಗಿದೆ. 'ಕೆನಡಾದಲ್ಲಿ ನಡೆದ ಜಿ7 ಶೃಂಗದ ಬಳಿಕ ಮೋದಿ ಹಾಗೂ ಟ್ರಂಪ್ ನಡುವೆ ಜೂ.17ರಂದು ಫೋನ್ ಸಂಭಾಷಣೆ ನಡೆದಿತ್ತು. ಆಗ 'ಭಾರತ–ಪಾಕ್ ಯುದ್ಧ ನಿಲ್ಲಿಸಲು ನಾನು ಕಾರಣ' ಎಂದು ಟ್ರಂಪ್ ಹೇಳಿದ್ದರು.

ಹಾಗೂ ಪಾಕಿಸ್ತಾನ ಈ ಬಗ್ಗೆ ತಮ್ಮನ್ನು ನೊಬೆಲ್ ಶಾಂತಿ ಪ್ರಶಸ್ತಿಗೆ ನಾಮಾಂಕನ ಮಾಡಿದೆ ಎಂದಿದ್ದರು. ಇದಕ್ಕೆ ಮೋದಿ ಒಪ್ಪಲಿಲ್ಲ. 'ಕದನವಿರಾಮ ದ್ವಿಪಕ್ಷೀಯ ಒಪ್ಪಂದ' ಎಂದು ಹೇಳಿದರು ಹಾಗೂ ಪಾಕ್‌ನಂತೆ ನೊಬೆಲ್ ಪ್ರಶಸ್ತಿಗೆ ನಾಮನಿರ್ದೇಶನ ಮಾಡಲು ಹಿಂಜರಿದರು. ಇದು ಉಭಯ

## ಶೀಘ್ರದಲ್ಲೇ ಕೈಲಾಸ ಮಾನಸ ಸರೋವರ ಯಾತ್ರೆ ಪುನರಾರಂಭ: ಪ್ರಧಾನಿ ಮೋದಿ



**ಟಿಯಾನ್‌ಜಿನ್ (ಚೀನಾ):** ಭಾನುವಾರ ಶಾಂಘೈ ಸಹಕಾರ ಸಂಘಟನೆಯ ಶೃಂಗಸಭೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಬಳಿಕ ಮಾತನಾಡಿದ ಮೋದಿ, "ಕೈಲಾಸ ಮಾನಸ ಸರೋವರ ಯಾತ್ರೆ" ಪುನರಾರಂಭಗೊಂಡಿದೆ ಎಂದರು. ಜತೆಗೆ ಎರಡೂ ದೇಶಗಳ ನಡುವೆ ನೇರ ವಿಮಾನಯಾನವೂ ಆರಂಭವಾಗುತ್ತಿದೆ. ನಮ್ಮ ರಾಷ್ಟ್ರಗಳ ನಡುವಿನ ಸಹಕಾರದೊಂದಿಗೆ, 2.8 ಶತಕೋಟಿ ಜನರ ಹಿತಾಸಕ್ತಿಗಳು ಸಂಬಂಧ ಹೊಂದಿವೆ. ಇದು ಮಾನವೀಯತೆಗೆ ಅಗತ್ಯವಾಗಿದೆ ಎಂದು ಹೇಳಿದರು.
ಸುಮಾರು ಒಂದು ಗಂಟೆ ಕಾಲ ನಡೆದ ಈ ಸಭೆಯ ಸಂದರ್ಭದಲ್ಲಿ ಭಾರತದ ಕಡೆಯಿಂದ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮತ್ತು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಕೂಡ ಹಾಜರಿದ್ದರು. ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ ಸಭೆಯಲ್ಲಿ ಭಾಗವಹಿಸಿದ್ದರು.

ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರೊಂದಿಗಿನ ಭೇಟಿಯ ಸಂದರ್ಭದಲ್ಲಿ ಪ್ರಧಾನಿ ಮೋದಿ, "ಪರಸ್ಪರ ನಂಬಿಕೆ, ಗೌರವ ಮತ್ತು ಸೂಕ್ಷ್ಮತೆಯ ಆಧಾರದ ಮೇಲೆ ನಮ್ಮ ಸಂಬಂಧವನ್ನು ಮುಂದಕ್ಕೆ ಕೊಂಡೊಯ್ಯಲು ನಾವು ದೃಢನಿಶ್ಚಯ ಹೊಂದಿದ್ದೇವೆ. ಶೃಂಗಸಭೆಯ ಯಶಸ್ವಿ ಆತಿಥ್ಯಕ್ಕಾಗಿ ನಾವು ನಮ್ಮ ಶುಭಾಶಯಗಳನ್ನು ಸಲ್ಲಿಸುತ್ತೇವೆ ಮತ್ತು ಈ ಭೇಟಿ ಮತ್ತು ಈ ಸಭೆಗೆ ಆಹ್ವಾನಕ್ಕಾಗಿ ನಾನು ನಿಮಗೆ(ಜಿನ್‌ಪಿಂಗ್) ಧನ್ಯವಾದ ಸಲ್ಲಿಸುತ್ತೇನೆ ಎಂದು ಮೋದಿ ಹೇಳಿದರು. 2019ರ ಗಲ್ವಾನ್ ಸಂಘರ್ಷದ ಬಳಿಕ ಭಾರತ– ಚೀನಾ ಸಂಬಂಧ ಪೂರ್ಣ ಹಳಸಿತ್ತು. ಪರಿಸ್ಥಿತಿ ಯುದ್ಧದವರೆಗೂ ತಲುಪಿತ್ತು. ಬಳಿಕ ಉಭಯ ದೇಶಗಳು ನೇರ ವಿಮಾನ, ಪ್ರವಾಸಿ ವೀಸಾ ವಿತರಣೆ ಸ್ಥಗಿತಗೊಳಿಸಿದ್ದವು. ಅಗತ್ಯ ವಸ್ತು ಪೂ–ರೈಕೆ ರದ್ದಾಗಿತ್ತು. ಇದೀಗ ಉಭಯ ರಾಷ್ಟ್ರಗಳ ನಡುವೆ ಮತ್ತೆ ಹಿಂದಿನಂತೆ ವ್ಯಾಪಾರ ಸಂಬಂಧ ಪುನರಾರಂಭಗೊಂಡಿದೆ.

## ರಾಜ್ಯಕ್ಕೆ ಡಿಕೆಶಿ ಸೇವೆ ಸಿಗಲಿ; ಪರೋಕ್ಷವಾಗಿ ಸಿಎಂ ಆಗಲಿ ಎಂದು ಹರಸಿದ ಪುತ್ತಿಗೆ ಶ್ರೀ





**ಉಡುಪಿ:** ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಉಡುಪಿಗೆ ಭೇಟಿ ನೀಡಿದ್ದು ಉಡುಪಿಯ ಪುತ್ತಿಗೆ ಮಠಕ್ಕೆ ಭೇಟಿ ನೀಡಿ ಶ್ರೀ ಸುಗುಣೇಂದ್ರ ತೀರ್ಥ ಸ್ವಾಮೀಜಿ ಆಶೀರ್ವಾದ ಪಡೆದುಕೊಂಡರು. ಈ ವೇಳೆ ಸ್ವಾಮೀಜಿ ಅವರು ಡಿಸಿಎಂಗೆ ಆಶೀರ್ವದಿಸಿದ್ದಾರೆ. ರಾಜ್ಯಕ್ಕೆ ದೇಶಕ್ಕೆ ಅವರ ಸೇವೆ ದೊರಕಲಿ. ಭಗವದ್ಗೀತೆ ಪುಸ್ತಕ ಪಡೆದಿದ್ದಾರೆ, ಅವರ ಮನಸ್ಸಿನ ಇಚ್ಛೆ ಫಲಿಸಲಿ ಎಂದು ಉಡುಪಿಯ ಪುತ್ತಿಗೆ ಮಠದ ಶ್ರೀ ಸುಗುಣೇಂದ್ರ ತೀರ್ಥ ಸ್ವಾಮೀಜಿ ಆಶೀರ್ವಾದ ಮಾಡಿದ್ದಾರೆ. ಡಿ.ಕೆ ಶಿವಕುಮಾರ್ ಓಪನ್ ಆಗಿ ಭಗವದ್ಗೀತೆ ಪಠಿಸುವ ಏಕೈಕ ರಾಜಕಾರಣಿ ಎಂದು ಅವರು ಹೇಳಿದ್ದಾರೆ.ಡಿಕೆಶಿ ಜೊತೆ ಪುತ್ತಿಗೆ ಮಠಕ್ಕೆ 35 ವರ್ಷದ ಸಂಬಂಧವಿದೆ. ಡಿಕೆ ಜೈಲ್ ಮಂತ್ರಿ ಆಗಿದ್ದರು, ಕೃಷ್ಣ ಹುಟ್ಟಿದ್ದು ಜೈಲಿನಲ್ಲೇ. ಅವರು ಶ್ರೀಕೃಷ್ಣನ ದೊಡ್ಡ ಭಕ್ತ, ಭಗವದ್ಗೀತೆಯನ್ನು ಬಹಳ ಅನುಸರಿಸುತ್ತಾರೆ ಎಂದು ಮಠದ ರಾಜಾಂಗಣದಲ್ಲಿ ನಡೆದ ತಮ್ಮ ಜನ್ಮ ನಕ್ಷತ್ರ ಕಾರ್ಯಕ್ರಮದಲ್ಲಿ ಡಿ.ಕೆ ಶಿವಕುಮಾರ್ ಮುಂದೆಯೇ ಮಾತನಾಡಿದರು. ಶ್ರೀ ಮಧ್ವಾಚಾರ್ಯರ ಭಾವಚಿತ್ರವಿರುವ ಅಂಚೆ ಚೀಟಿ ಬಿಡುಗಡೆ ಮಾಡಿದ್ದು, ಶ್ರೀ ಮಧ್ವಾಚಾರ್ಯರಿಗೆ ಬಂಡೆಕಲ್ಲು ಇಷ್ಟ. ಅವರು ಹನುಮನ ಅಪರಾವತಾರ. ಡಿಕೆಶಿ ಕನಕಪುರದ ಬಂಡೆ. ಅವರು ರಾಕ್ ಸ್ಟಾರ್ ರಾಜಕಾರಣಿ. ಮಠದಲ್ಲಿ ಕೋಟಿ ಗೀತಾ ಲೇಖನ ಪುಸ್ತಕ ಪಡೆದಿದ್ದಾರೆ. ಅವರು ಪುಸ್ತಕ ಬರೆದು ಮುಗಿಸುವುದರೊಳಗೆ ಅವರ ಮನಸ್ಸಿನ ಇಚ್ಛೆ ಫಲಿಸಲಿ ಎಂದು ಡಿಕೆಶಿ ಮುಖ್ಯಮಂತ್ರಿ ಆಗಲಿ ಎಂದು ಪುತ್ತಿಗೆ ಸ್ವಾಮೀಜಿ ಆಶೀರ್ವದಿಸಿದರು. ರಾಜಕಾರಣಿಗಳು ಆಸ್ತಿಕರಾಗುವುದು ಬಹಳ ಮುಖ್ಯ. ರಾಜಕಾರಣಿಗಳು ಆಸ್ತಿಕರಾದರೆ ಮಾತ್ರ ಜಗತ್ತು ಕ್ಷೇಮವಾಗಿರಲು ಸಾಧ್ಯ ಎಂದರು.

ಕೃಷ್ಣಮಠದ ರಾಜಾಂಗಣದಲ್ಲಿ ಪುತ್ತಿಗೆ ಮಠದ ಶ್ರೀ ಸುಗುಣೇಂಜ್ರ ತೀರ್ಥ ಸ್ವಾಮೀಜಿ 64ನೇ ಜನ್ಮನಕ್ಷತ್ರಾಚರಣೆ ಸಂದರ್ಭದಲ್ಲಿ ಮಣಿಪಾಲ ಮಾಹೆಯು ಅಂಚೆ ಇಲಾಖೆ ಮೂಲಕ ಹೊರತಂದಿರುವ ಆಚಾರ್ಯ ಮಧ್ವರ ಅಂಚೆ ಚೀಟಿ ಬಿಡುಗಡೆ ಸಮಾರಂಭ ನಡೆಯಿತು. ಅದರಲ್ಲಿ ಡಿಸಿಎಂ ಪಾಲ್ಗೊಂಡಿದ್ದರು. ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಾನು ಏನು ಮಾತನಾಡಿದರೂ ಅದರಲ್ಲಿ ತಪ್ಪು ಹುಡುಕುತ್ತಾರೆ.

ಅದು ಸುಲಭದ ಕೆಲಸ, ಆದ್ದರಿಂದ ಕೃಷ್ಣ ನನ್ನ ಬಾಯಿಂದ ಯಾವುದೇ ತಪ್ಪು ಮಾಡಿಸಬೇಡ ಎನ್ನುತ್ತಲೇ ಮಾತು ಆರಂಭಿಸಿದ ಡಿ.ಕೆ.ಶಿವಕುಮಾರ್, ಮಾತಿನುದ್ದಕ್ಕೂ ತತ್ವಜ್ಞಾನವನ್ನಾಡಿದರು.

ಉಡುಪಿಯಲ್ಲಿ ಶ್ರೀಕೃಷ್ಣನ ದರ್ಶನ ಪಡೆದ ಡಿಸಿಎಂ ಡಿಕೆಶಿ; ಶ್ರೀ ಸುಗಣೇಂದ್ರತೀರ್ಥ ಶ್ರೀಪಾದರ 64ನೇ ಜನ್ಮನಕ್ಷತ್ರೋತ್ಸವದಲ್ಲಿ ಭಾಗಿ ಧರ್ಮ, ಪೂಜೆ ಆಚರಣೆ ಪ್ರದರ್ಶನದ ವಸ್ತುಗಳಲ್ಲ, ಅವು ಅಂತರಂಗದಲ್ಲಿರಬೇಕು.

ದೇವನೊಬ್ಬನೇ ನಾಮ ಹಲವು, ಜೀವನದಲ್ಲಿ ಧರ್ಮರಾಯನ ಧರ್ಮನಿಷ್ಠೆ, ಅರ್ಜುನನ ಗುರಿ, ಭೀಮನ ಬಲ, ವಿ?ಧುರನ ನೀತಿ ಜೊತೆಗೆ ಕೃಷ್ಣನ ತಂತ್ರಗಾರಿಕೆಯೂ ಬೇಕು ಎಂದು ಕೋಟ ಶ್ರೀನಿವಾಸ ಪೂಜಾರಿ ಅವರನ್ನು ಕರೆದು ಹೇಳಿದರು.ಪ್ರಯತ್ನ ವಿಫಲವಾಗಬಹುದು, ಆದರೆ ಪ್ರಾರ್ಥನೆ ವಿಫಲವಾಗುವುದಿಲ್ಲ ಎಂದು ಹೇಳಿದ್ದಾರೆ.

## ಸೆಪ್ಟೆಂಬರ್‌ನಲ್ಲಿ ಮಣಿಪುರಕ್ಕೆ ಪ್ರಧಾನಿ ಮೋದಿ ಭೇಟಿ ಸಾಧ್ಯತೆ



**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಸೆಪ್ಟೆಂಬರ್ ಎರಡನೇ ವಾರದಲ್ಲಿ ಮಣಿಪುರಕ್ಕೆ ಭೇಟಿ ನೀಡುವ ಸಾಧ್ಯತೆಯಿದೆ.

ಎರಡು ವರ್ಷಗಳ ಹಿಂದೆ ರಾಜ್ಯದಲ್ಲಿ ಜನಾಂಗೀಯ ಹಿಂಸಾಚಾರ ಭುಗಿಲೆದ್ದ ನಂತರ ಇದೇ ಮೊದಲ ಬಾರಿಗೆ ಭೇಟಿ ನೀಡಲಿದ್ದಾರೆ ಎಂದು ಸರ್ಕಾರಿ ಮೂಲಗಳು ತಿಳಿಸಿವೆ. ಮೇ 2023 ರಲ್ಲಿ ಅಶಾಂತಿ ಭುಗಿಲೆದ್ದ ನಂತರ ಪ್ರಧಾನಿಯವರು ಮಣಿಪುರಕ್ಕೆ ಭೇಟಿ ನೀಡಿಲ್ಲವಾದ್ದರಿಂದ, ಆ ಭೇಟಿಯು ಪ್ರಮುಖ ರಾಜಕೀಯ ಮತ್ತು ಸಾಂಕೇತಿಕ ಮಹತ್ವವನ್ನು ಹೊಂದಿದೆ. ಮೋದಿ, ಹಿಂಸಾಚಾರ ಪೀಡಿತ ರಾಜ್ಯದ ಇಂಫಾಲ್ ಮತ್ತು ಚುರಚಂದ್‌ಪುರ ಜಿಲ್ಲೆಗಳಿಗೆ ಭೇಟಿ ನೀಡುವ ಸಾಧ್ಯತೆಯಿದೆ. ಅಲ್ಲಿ ಜನಾಂಗೀಯ ಸಂಘರ್ಷದಿಂದಾಗಿ ತಮ್ಮ ಮನೆಗಳಿಂದ ಸ್ಥಳಾಂತರಗೊಂಡ ಜನರನ್ನು ಭೇಟಿ ಮಾಡುವ ನಿರೀಕ್ಷೆಯಿದೆ. ಅವರ ಭೇಟಿಯ ಸಮಯದಲ್ಲಿ, ಅವರು ಈ ಪ್ರದೇಶಕ್ಕೆ ಪ್ರಮುಖ ಮೂಲಸೌಕರ್ಯ ಯೋಜನೆಗಳನ್ನು ಘೋಷಿಸುವ ಮತ್ತು ಕೆಲವು ಯೋಜನೆಗಳನ್ನು ಉದ್ಘಾಟಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

ಮಣಿಪುರ ಪ್ರವಾಸ ದೃಢಪಟ್ಟರೆ, ಪ್ರಧಾನಿಯವರ ಭೇಟಿ ಸುಮಾರು ನಾಲ್ಕು ಗಂಟೆಗಳ ಕಾಲ ನಡೆಯುವ ನಿರೀಕ್ಷೆಯಿದೆ ಎಂದು ಮೂಲಗಳು ತಿಳಿಸಿವೆ. ಅವರು ಮೈಟೈ ಮತ್ತು ಕುಕಿ ಪ್ರಾಬಲ್ಯವಿರುವ ಎರಡೂ ಪ್ರದೇಶಗಳಿಗೆ ಪ್ರವಾಸ ಮಾಡುವ ಮತ್ತು ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸುವ ಸಾಧ್ಯತೆಯಿದೆ. ಫೆಬ್ರುವರಿ 13ರಂದು ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆ ಹೇರಲಾಗಿತ್ತು.

## ಧರ್ಮಸ್ಥಳದ ಪ್ರಕರಣ : ಬಿಜೆಪಿಗೆ ಸತೀಶ್ ಜಾರಕಿಹೊಳಿ ತಿರುಗೇಟು



**ಬೆಂಗಳೂರು, ಆ.29–** ಧರ್ಮಸ್ಥಳದ ವಿಚಾರಕ್ಕೆ ಸಂಬಂಧ ಪಟ್ಟಂತೆ ತನಿಖೆ ನಡೆಸಲು ನ್ಯಾಯಾಲಯದ ಅದೇಶದ ಮೇರೆಗೆ ಎಸ್‌ಐಟಿ ರಚನೆ ಮಾಡಲಾಗಿದೆ. ಅದನ್ನು ತಪ್ಪು ಎನ್ನುವುದಾದರೆ, ನ್ಯಾಯಾಲಯದಲ್ಲೇ ಪ್ರಶ್ನೆ ಮಾಡಬೇಕಿತ್ತು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿರುಗೇಟು ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯವರಿಗೆ ರಾಜ್ಯಸರ್ಕಾರವನ್ನು ಟೀಕಿಸಲು ಸರಿಯಾದ ವಿಚಾರಗಳಿಲ್ಲ. ಹೀಗಾಗಿ ಅನಗತ್ಯವಾಗಿ ವಿವಾದ ಸೃಷ್ಟಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಲೇವಡಿ ಮಾಡಿದರು.

ಮೊದಲೆಲ್ಲಾ ಗ್ಯಾರಂಟಿ ಯೋಜನೆಗಳ ವಿರುದ್ಧ ಟೀಕೆ ಮಾಡುವ ಪ್ರಯತ್ನ ಮಾಡಿದರು. ಅದನ್ನು ಯಾರೂ ಕೇಳಲಿಲ್ಲ. ಅನಂತರ ಬೇರೆ ಬೇರೆ ವಿಚಾರಗಳನ್ನು ಪ್ರಸ್ತಾಪಿಸಿ ಟೀಕೆ ಮಾಡುವ ಪ್ರಯತ್ನ ಮಾಡಿದರು. ಅದರಿಂದ ಯಾವುದೇ ಪ್ರಯೋಜನವಾಗ ದಿದ್ದಾಗ, ಈಗ ಧರ್ಮಸ್ಥಳದ ವಿಚಾರ ಹಿಡಿದು ಕೊಂಡಿದ್ದಾರೆ ಎಂದರು.

ಇದರಲ್ಲಿ ಕಾಂಗ್ರೆಸ್‌ನ ಪಾತ್ರ ಏನೂ ಇಲ್ಲ. ರಾಜ್ಯಸರ್ಕಾರಕ್ಕೆ ಇದರಿಂದ ಲಾಭವೂ ಇಲ್ಲ, ನಷ್ಟವೂ ಇಲ್ಲ. ದೂರು ಬಂದ ಹಿನ್ನೆಲೆಯಲ್ಲಿ ನ್ಯಾಯಾಲಯ ಆದೇಶ ನೀಡಿದೆ. ಅದರ ಆಧಾರದ ಮೇಲೆ ಎಸ್‌ಐಟಿ ತನಿಖೆ ನಡೆಸಲಾಗುತ್ತಿದೆ. ಬಿಜೆಪಿಯವರು ದಿಕ್ಕು ತಪ್ಪಿಸಲು ರಾಜಕೀಯ ಮಾಡುತ್ತಿದ್ದಾರೆ ಎಂದು ಹೇಳಿದರು.

ಬೂಕರ್ ಪ್ರಶಸ್ತಿ ಪಡೆದಿದ್ದ ಬಾನು ಮುಷ್ತಾಕ್ ರನ್ನು ಗೌರವಿಸಲು ದಸರಾ ಉದ್ಘಾಟನೆಗೆ ಆಹ್ವಾನಿಸಲಾಗಿದೆ. ಬಿಜೆಪಿ ಯವರು ಎಲ್ಲವನ್ನೂ ವಿರೋಧಿಸುವ ಮೂಲಕ ರಾಜಕೀಯ ಮಾಡುತ್ತಿದ್ದಾರೆ. ಈ ಹಿಂದೆಲ್ಲಾ ಹಲವಾರು ಸಾಹಿತಿಗಳು, ಚಿಂತಕರು ಹಾಗೂ ಪ್ರಶಸ್ತಿ ವಿಜೇತರನ್ನು ಆಹ್ವಾನಿಸಿ ದಸರಾವನ್ನು ಉದ್ಘಾಟಿಸಲಾಗಿದೆ. ಅದರಂತೆ ಈ ಬಾರಿಯೂ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಸಮರ್ಥಿಸಿಕೊಂಡರು.

ವಿಧಾನಮಂಡಲದಲ್ಲಿ ಆರ್‌ಎಸ್‌ಎಸ್‌ನ ಪ್ರಾರ್ಥನ ಗೀತೆ ಹಾಡಿದ ಕಾರಣಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಕ್ಷಮೆ ಕೇಳಿರುವುದು ಪಕ್ಷದ ಹಿತ ದೃಷ್ಟಿಯಿಂದ ಒಳ್ಳೆಯದು. ಇಲ್ಲವಾದರೆ ಅದು ಬೇರೆ ಬೇರೆ ರೀತಿಯ ವ್ಯಾಖ್ಯಾನ, ಚರ್ಚೆಗಳಿಗೆ ಕಾರಣವಾಗಿ ಗೊಂದಲಗಳಾಗುತ್ತಿದ್ದವು. ಕ್ಷಮೆ ಕೇಳುವ ಮೂಲಕ ಎಲ್ಲವೂ ಬಗೆ ಹರಿದಿದೆ ಎಂದರು.

ರಾಜಣ್ಣ ಅವರ ವಿಚಾರಕ್ಕೆ ಸಂಬಂಧಪಟ್ಟಂತೆ ಹೈಕಮಾಂಡ್ ಯಾವುದೇ ನಿರ್ಧಾರ ತೆಗೆದುಕೊಂಡರೂ ಅದಕ್ಕೆ ತಮ ಸಹಮತ ಇದೆ. ಡಿ.ಕೆ. ಶಿವಕುಮಾರ್ ಅವರಿಗೆ ಅವಕಾಶ ಕೊಟ್ಟಂತೆ, ರಾಜಣ್ಣ ಅವರಿಗೂ ಅವಕಾಶ ನೀಡಬೇಕು ಎಂಬ ಬೇಡಿಕೆಗಳ ಬಗ್ಗೆ ತಾವು ಯಾವುದೇ ಪ್ರತಿಕ್ರಿಯೆ ನೀಡಲು ಬಯಸುವುದಿಲ್ಲ ಎಂದು ಹೇಳಿದರು.

## ಟ್ರಂಪ್ ಭಾರತ ಪ್ರವಾಸ ರದ್ದು



**ನವದೆಹಲಿ:** ಅಮೆರಿಕ ಮತ್ತು ಭಾರತದ ನಡುವಿನ ಸಂಬಂಧಗಳಲ್ಲಿನ ಕಹಿ ಕೆಲವು ಸಮಯದಿಂದ ಸ್ಪಷ್ಟವಾಗಿ ಗೋಚರಿಸುತ್ತಿದೆ. ಏತನ್ಮಧ್ಯೆ, ಭಾರತದ ಮೇಲೆ ಶೇಕಡಾ 50 ರಷ್ಟು ಸುಂಕ ವಿಧಿಸಿದ ನಂತರ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೂಡ ತಮ್ಮ ಭಾರತ ಪ್ರವಾಸವನ್ನು ರದ್ದುಗೊಳಿಸಿದ್ದಾರೆ.

ನ್ಯೂಯಾರ್ಕ್ ಟೈಮ್ಸ್‌ನ ಇತ್ತೀಚಿನ ವರದಿಯ ಪ್ರಕಾರ, ಅಮೆರಿಕ ಅಧ್ಯಕ್ಷರು ಕ್ವಾಡ್ ಶೃಂಗಸಭೆಗಾಗಿ ಭಾರತಕ್ಕೆ ಭೇಟಿ ನೀಡುವ ಯಾವುದೇ ಯೋಜನೆಯನ್ನು ಹೊಂದಿಲ್ಲ. ಅಮೆರಿಕನ್ ಪತ್ರಿಕೆಯಲ್ಲಿ ಪ್ರಕಟವಾದ ಈ ವರದಿಯು ಟ್ರಂಪ್ ಅವರ ಕಾರ್ಯಕ್ರಮಕ್ಕೆ ಸಂಬಂಧಿಸಿದ ಮೂಲಗಳನ್ನು ಉಲ್ಲೇಖಿಸಿದೆ.

ವರದಿಯ ಪ್ರಕಾರ, ಟ್ರಂಪ್ ಈ ಹಿಂದೆ ಭಾರತದ ಪ್ರಧಾನಿ ನರೇಂದ್ರ ಮೋದಿಯವರಿಗೆ ಈ ವರ್ಷದ ಕೊನೆಯಲ್ಲಿ ಭಾರತಕ್ಕೆ ಭೇಟಿ ನೀಡುವುದಾಗಿ ತಿಳಿಸಿದ್ದರು, ಆದರೆ ಈಗ ಅವರು ಈ ಯೋಜನೆಯನ್ನು ರದ್ದುಗೊಳಿಸಿದ್ದಾರೆ. ಈ ವರದಿಯಲ್ಲಿ ಮಾಡಲಾದ ಹೇಳಿಕೆಗೆ ಅಮೆರಿಕ ಮತ್ತು ಭಾರತ ಸರ್ಕಾರಗಳಿಂದ ಯಾವುದೇ ಅಧಿಕೃತ ಪ್ರತಿಕ್ರಿಯೆ ಬಂದಿಲ್ಲ.

ಭಾರತವು ಈ ವರ್ಷದ ಕೊನೆಯಲ್ಲಿ ಕ್ವಾಡ್ ಶೃಂಗಸಭೆಯನ್ನು ಆಯೋಜಿಸಲಿದೆ. ಇದಕ್ಕೂ ಮೊದಲು, ಟ್ರಂಪ್ ತಮ್ಮ ಎರಡನೇ ಅಧ್ಯಕ್ಷೀಯ ಅವಧಿಯನ್ನು ಪ್ರಾರಂಭಿಸಿದ ಜನವರಿಯಲ್ಲಿ ಟ್ರಂಪ್ ಆಡಳಿತವು ಕ್ವಾಡ್ ವಿದೇಶಾಂಗ ಮಂತ್ರಿಗಳ ಸಭೆಯನ್ನು ನಡೆಸಿದೆ.

ವ್ಯಾಪಾರ ಉದ್ವಿಗ್ನತೆಗಳ ನಡುವೆ ಟ್ರಂಪ್ ಮತ್ತು ಮೋದಿ ನಡುವಿನ ಸಂಬಂಧಗಳು ಹದಗೆಡಲು ಪ್ರಾರಂಭಿಸಿವೆ ಎಂದು ವರದಿ ಹೇಳುತ್ತದೆ. ನಿರ್ದಿಷ್ಟವಾಗಿ ಹೇಳುವುದಾದರೆ, ಟ್ರಂಪ್ ಅವರ ಪುನರಾವರ್ತಿತ ಹೇಳಿಕೆಗಳು ಪರಿಸ್ಥಿತಿಯನ್ನು ಮತ್ತಷ್ಟು ಜಟಿಲಗೊಳಿಸಿವೆ. ಮೇ ತಿಂಗಳಲ್ಲಿ ಭಾರತ ಮತ್ತು ಪಾಕಿಸ್ತಾನ ನಡುವಿನ ನಾಲ್ಕು ದಿನಗಳ ಮಿಲಿಟರಿ ಸಂಘರ್ಷವನ್ನು ಪರಿಹರಿಸಲು ತಾನು ಸಹಾಯ ಮಾಡಿದ್ದೇನೆ ಎಂದು ಟ್ರಂಪ್ ನಿರಂತರವಾಗಿ ಹೇಳಿಕೊಳ್ಳುತ್ತಿದ್ದಾರೆ. ಆದಾಗ್ಯೂ, ಭಾರತ ಈ ಹೇಳಿಕೆಯನ್ನು ಸ್ಪಷ್ಟವಾಗಿ ತಿರಸ್ಕರಿಸಿದೆ.

## ಡಿಜೆ ನಿರ್ಬಂಧಕ್ಕೆ ಬಿವೈವಿ ಆಕ್ರೋಶ

**ಬೆಂಗಳೂರು:** ಗಣೇಶೋತ್ಸವದಲ್ಲಿ ಡಿಜೆ ನಿರ್ಬಂಧಿಸಿರುವ ರಾಜ್ಯಸರ್ಕಾರದ ತೀರ್ಮಾನಕ್ಕೆ ಆಕ್ರೋಶ ವ್ಯಕ್ತಪಡಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ರಾಜ್ಯಸರ್ಕಾರ ಸಾಂಸ್ಕೃತಿಕ ಚಟುವಟಿಕೆಗಳನ್ನು ಹತ್ತಿಕ್ಕುತ್ತಿದೆ ಎಂದು ದೂರಿದ್ದಾ–ರೆ. ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ರಾಜ್ಯದಲ್ಲಿ ಪೊಲೀಸ್ ವ್ಯವಸ್ಥೆ ಸಂಪೂರ್ಣ ದಿಕ್ಕುತಪ್ಪುತ್ತಿದೆ. ಹಿಂದೂ ಉತ್ಸವಗಳು, ಧಾರ್ಮಿಕ ಆಚರಣೆಗಳನ್ನು ಅಪಮಾನಿಸುತ್ತಿರುವ ಪ್ರಕರಣಗಳು ಮೇಲಿನಿಂದ ಮೇಲೆ ವರದಿಯಾಗುತ್ತಿವೆ ಎಂದು ಅವರು ತಿಳಿಸಿದ್ದಾರೆ.

ಗಣೇಶೋತ್ಸವದ ಸಾಂಪ್ರದಾಯಿಕ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಹೆಚ್ಚುವರಿ ಅವಧಿಯನ್ನು ವಿಸ್ತರಿಸಬೇಕು ಎಂದು ಕಳೆದ ವಿಧಾನಸಭಾ ಅಧಿವೇಶನದಲ್ಲಿಯೇ ಚರ್ಚೆಯಾಗಿ ಸರ್ಕಾರ ಸಮ್ಮತಿಯನ್ನೂ ವ್ಯಕ್ತಪಡಿಸಿದೆ. ಆದರೂ ಪೊಲೀಸರು ಗಣೇಶೋತ್ಸವದ ಮೇಲೆ ಕೆಂಗಣ್ಣು ಬೀರುತ್ತಿರುವುದು ಅತ್ಯಂತ ಖಂಡನೀಯ ಎಂದಿದ್ದಾರೆ.

ದಕ್ಷಿಣ ಕನ್ನಡ ಜಿಲ್ಲೆಯ ಪಾಣೆ ಮಂಗಳೂರಿನಲ್ಲಿ ನಿಗದಿತ ಸಮಯಕ್ಕೆ ಮುನ್ನವೇ ಪರಂಪರೆಯಿಂದ ನಡೆದು ಬಂದ ಯಕ್ಷಗಾನ ಪ್ರದರ್ಶನವನ್ನು ನಿಲ್ಲಿಸುವ ಮೂಲಕ ಹಿಂದೂ ಧಾರ್ಮಿಕ ಶ್ರದ್ಧೆ ಹಾಗೂ ಸಂಸ್ಕೃತಿಯ ಮೇಲೆ ದೌರ್ಜನ್ಯ ನಡೆಸಿದೆ ಎಂದು ದೂರಿದ್ದಾರೆ.

## ಧರ್ಮಸ್ಥಳ ಪ್ರಕರಣ, ತನಿಖೆ ನಂತರ ವರದಿ

**ಬೆಂಗಳೂರು:** ಧರ್ಮಸ್ಥಳದ ಬಗ್ಗೆ ನಡೆದಿರುವ ಎಸ್‌ಐಟಿ ತನಿಖೆಗೆ ಕಾಲಮಿತಿ ವಿಧಿಸಿಲ್ಲ. ಈ ವಾರದಲ್ಲೇ ತನಿಖೆ ಮುಗಿಸಿ ವರದಿ ಕೊಡಿ ಎಂದು ಹೇಳಲು ಆಗಲ್ಲ. ತನಿಖೆ ಪೂರ್ಣಗೊಂಡ ನಂತರ ಎಸ್‌ಐಟಿ ವರದಿ ನೀಡುತ್ತೆ ಎಂದು ಗಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.

ರಾಜಭವನದಲ್ಲಿಂದು ರಾಷ್ಟ್ರಪಿ ಪದಕಕ್ಕೆ ಭಾಜನರಾಗಿರುವ ಪೊಲೀಸ್ ಅಧಿಕಾರಿಗಳಿಗೆ ಪದಕ ಪ್ರದಾನ ಸಮಾರಂಭದ ನಂತರ ಸುದ್ದಿಗಾರರೊಮದಿಗೆ ಮಾತನಾಡಿದ ಅವರು, ಧರ್ಮಸ್ಥಳದ ಎಸ್‌ಐಟಿ ತನಿಖೆ ಎಲ್ಲಿಗೆ ಹೋಗುತ್ತದೆ ಎಂದು ಹೇಳಲು ಸಾಧ್ಯವಿಲ್ಲ. ಒಂದು ತಾರ್ಕಿಕ ಅಂತ್ಯ ಕಾಣುವವರೆಗೂ ವಿಚಾರಣೆಗಳು ನಡೆಯಲಿವೆಎಂದರು.

ಎಸ್‌ಐಟಿ ಮುಖ್ಯಸ್ಥರಾದ ಡಿಜಿಪಿ ಪ್ರಣವ್‌ಮೊಹಾಂತಿ ಇಂದು ತಮ್ಮನ್ನು ಭೇಟಿ ಮಾಡಿ ಚರ್ಚಿಸಿದ್ದಾರೆ. ಚರ್ಚೆಯ ವಿವರಗಳನ್ನು ಬಹಿರಂಗಪಡಿಸಲು ಆಗಲ್ಲ. ಎಸ್‌ಐಟಿಯವರಿಗೆ ಈಗಾಗಲೇ ಮಾರ್ಗಸೂಚಿ ನೀಡಿದ್ದೇವೆ. ಅದರಂತೆ ತನಿಖೆ ನಡೆದಿದೆ ಎಂದರು.

ಎಸ್‌ಐಟಿ ಉತ್ಖನನ ಸಂದರ್ಭದಲ್ಲಿ ದೊರೆತಿರುವ ಹಲವು ವಸ್ತುಗಳನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಿದೆ. ಎಲ್ಲವನ್ನೂ ವೈಜ್ಞಾನಿಕವಾಗಿ

ಪರಿಶೀಲಿಸಿ ಅಗತ್ಯಕ್ರಮ ಆಗಬೇಕಾದ್ದರಿಂದ ಎಸ್‌ಐಟಿ ಮೇಲೆ ವರದಿ ಕೊಡಿ ಎಂದು ಒತ್ತಡ ಹೇರಲಿ ಆಗಲ್ಲ.



ರಾಜ್ಯಸರ್ಕಾರ ಆ ರೀತಿ ಯಾವುದೇ ನಿರ್ದೇಶನ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ತನಿಖೆ ಉತ್ತಮವಾಗಿ ನಡೆಯುತ್ತಿದೆ. ಎಲ್ಲ ಆಯಾಮದಿಂದಲೂ ತನಿಖೆ ನಡೆದಿದೆ. ಯಾರನ್ನು ಬಂಧಿಸಬೇಕು, ಯಾರನ್ನು ವಿಚಾರಣೆಗೆ ಒಳಪಡಿಸಬೇಕು ಎಲ್ಲವನ್ನೂ ಎಸ್‌ಐಟಿ ಅಧಿಕಾರಿಗಳೇ ನಿರ್ಧರಿಸುತ್ತಾರೆ ಎಂದರು.

## ಬ್ಯಾಕ್‌ಲಾಗ್ ಹುದ್ದೆ 24 ವರ್ಷದಿಂದ ಬಾಕಿ, ಭರ್ತಿಗಿಲ್ಲ ಇಚ್ಛಾಶಕ್ತಿ!



**ಕಲಬುರಗಿ :** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಆಡಳಿತ ನಡೆಸುವ ಸರಕಾರಗಳು ಮುತುವರ್ಜಿ ತೋರದಿರುವುದರಿಂದ 24 ವರ್ಷಗಳಿಂದ 1032 ಹುದ್ದೆಗಳ ಭರ್ತಿಗೆ ಮುಕ್ತಿಯೇ ಸಿಕ್ಕಿಲ್ಲ.

ರಾಜ್ಯದ ಹಲವು ಇಲಾಖೆಗಳಲ್ಲಿ ಸರಕಾರ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸುತ್ತದೆ. ಈ ಹುದ್ದೆಗಳ ಭರ್ತಿಗೆ ಆಡಳಿತಕ್ಕೆ ಬರುವ ಯಾವುದೇ ಸರಕಾರಗಳು ಕಾಳಜಿವಹಿಸುತ್ತಿಲ್ಲ. ನಾಮಕೇವಾಸ್ತೆಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಪರ ಸರಕಾರ ಎಂದು ಮಾತಿನಲ್ಲಿ ಹೇಳುವ ಸರಕಾರಗಳು ವಾಸ್ತವಕ್ಕೆ ಬಂದಾಗ ಮಾತ್ರ ನಿಯಮಗಳನ್ನು ಜಾರಿ ಮಾಡುವಲ್ಲಿ ಎಡವುತ್ತಿವೆ. ಇದರಿಂದಲೇ ಕಳೆದ 24 ವರ್ಷಗಳಿಂದ ಗುರುತಿಸಲಾದ ಬ್ಯಾಕ್‌ಲಾಗ್ ಹುದ್ದೆಗಳನ್ನೇ ಭರ್ತಿ ಮಾಡದಿರುವುದು ಎಸ್ಸಿ, ಎಸ್ಟಿ ಬಗ್ಗೆ ಸರಕಾರಗಳಿಗಿರುವ ಕಾಳಜಿಯನ್ನು ತೋರಿಸುತ್ತದೆ.

2001 ರವರೆಗೆ ಪರಿಶಿಷ್ಟ ಜಾತಿಗೆ ಗುರುತಿಸಲಾದ ಬ್ಯಾಕ್‌ಲಾಗ್ ಹುದ್ದೆಗಳು 14,624, ಪರಿಶಿಷ್ಟ ವರ್ಗಕ್ಕೆ 4,491 ಸೇರಿ ಒಟ್ಟು 19,115 ಹುದ್ದೆಗಳನ್ನು ಗುರುತಿಸಲಾಗಿದೆ. ಇದರಲ್ಲಿಈಗಾಗಲೇ ಪಜಾ ದಲ್ಲಿ13,514 ಪಪಂದಲ್ಲಿ4,057 ಸೇರಿ ಒಟ್ಟು 17,571 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಆದರೆ, ಇನ್ನೂ 1,110 ಪಜಾ, 434 ಪಪಂ ಸೇರಿ ಒಟ್ಟು 1,544 ಹುದ್ದೆಗಳನ್ನು ಇನ್ನೂ ಭರ್ತಿ ಮಾಡಿಲ್ಲ.

## ತಮ್ಮ ಅನಾರೋಗ್ಯದ ವರದಿಗಳ ಬಗ್ಗೆ ಇದೇ ಮೊದಲ ಬಾರಿಗೆ ಮಾತನಾಡಿದ ಟ್ರಂಪ್!



**ವಾಷಿಂಗ್ಟನ್:** ಅಮೆರಿಕಾಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಅನಾರೋಗ್ಯದಿಂದ ನರಳುತ್ತಿದ್ದಾರೆ. ಅದನ್ನು ಟ್ರಂಪ್ ಕುಟುಂಬ ಹಾಗೂ ಅಮೆರಿಕ ಸರ್ಕಾರ ಗೌಪ್ಯವಾಗಿರಿಸಿವೆ. ದಿನದಿಂದ ದಿನಕ್ಕೆ ಅವರ ದೇಹಾರೋಗ್ಯ ಹದಗೆಡುತ್ತಿದೆ? ಎಂದು ಜಗತ್ತಿನಾದ್ಯಂತ ಹರಡಿರುವ ವದಂತಿಗಳನ್ನು ಖುದ್ದು ಟ್ರಂಪ್ ಅವರೇ ತಳ್ಳಿಹಾಕಿದ್ದಾರೆ. ಈ ಕುರಿತಂತೆ ತಮ್ಮದೇ ಸ್ವಂತ ಸಾಮಾಜಿಕ ಜಾಲತಾಣವಾದ ಟ್ರುಥ್ ನಲ್ಲಿ ತಮ್ಮ ಅಭಿಪ್ರಾಯವನ್ನು ಹಂಚಿಕೊಂಡಿರುವ ಅವರು, ನಾನು ಈವರೆಗಿನ ಜೀವನದಲ್ಲಿ ಇಷ್ಟೊಂದು ಸೌಖ್ಯವಾಗಿ ಎಂದೂ ಇರಲಿಲ್ಲ. ಅಷ್ಟು ಸೌಖ್ಯದಿಂದ ಇದ್ದೇನೆ? ಎಂದು ಹೇಳುವ ಮೂಲಕ ಅವರು ತಾವು ಆರೋಗ್ಯವಾಗಿದ್ದೇವೆಂದು ದೃಢಪಡಿಸಿದ್ದಾರೆ.

ಇತ್ತೀಚೆಗೆ, ಅಮೆರಿಕದ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ಅವರು ಅಮೆರಿಕ ಅಧ್ಯಕ್ಷರಾದ ಡೊನಾಲ್ಡ್ ಟ್ರಂಪ್ ಅವರಿಗೆ ಏನಾದರೂ ಹೆಚ್ಚೂಕಡಿಮೆಯಾದರೆ ದೇಶವನ್ನು ಸಮರ್ಥವಾಗಿ ನಡೆಸಲು ನಾನು ಸಿದ್ಧ ಎಂದಿದ್ದರು. ಈ ಮಾತು ಇಡೀ ಜಗತ್ತಿನಾದ್ಯಂತ ಮಿಂಚಿನಂತೆ ಸಂಚರಿಸಿತು. ಅನೇಕ ಮಾಧ್ಯಮಗಳು ಟ್ರಂಪ್ ಅವರಿಗೆ ಸಿಐವಿ ಎಂಬ ಕಾಯಿಲೆಯಿರಬಹುದು ಎಂದೆಲ್ಲಾ ವರದಿಗಳನ್ನು ಮಾಡಿದವು. ಆ ಬಗ್ಗೆ ಸ್ಪಷ್ಟನೆ ನೀಡಿರುವ ಟ್ರಂಪ್, ತಮಗೇನೂ ಆಗಿಲ್ಲ ಎಂದು ಟ್ರುಥ್ ಸೋಷಿಯಲ್ ಮೀಡಿಯಾದಲ್ಲಿ ಹೇಳಿಕೊಂಡಿದ್ದಾರೆ.

## ಮತಗಳ್ಳತನದ ಹೈಡ್ರೋಜನ್ ಬಾಂಬ್ ಹೊರತರುತ್ತೇವೆ': ರಾಹುಲ್ ಗಾಂಧಿ



**ಪಾಟ್ನಾ:** ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿಯವರ 17 ದಿನಗಳ ಕಾಲ ನಡೆದ ಮತಾಧಿಕಾರ ಯಾತ್ರೆ ಪಾಟ್ನಾದಲ್ಲಿ ಮುಕ್ತಾಯವಾಯಿತು. ಈ ಮಧ್ಯೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವೋಟ್ ಚೋರ್, ಗದ್ದಿ ಚೋಡ್(ಮತಗಳ್ಳತನ, ಕುರ್ಚಿ ಬಿಡು). ಚೀನಾ ಹಾಗೂ ಅಮೆರಿಕದ ಜನರು ಈ ಘೋಷಣೆ ಕೂಗುತ್ತಿದ್ದಾರೆ. ಜೊತೆಗೆ ಮತಗಳ್ಳತನದ ಹೈಡ್ರೋಜನ್ ಬಾಂಬ್ ಹೊರತರುವ ಬಗ್ಗೆ ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿ ಮಾತನಾಡಿದರು.

17 ದಿನಗಳ ಕಾಲ ನಡೆದ ಮತ ಅಧಿಕಾರ ಯಾತ್ರೆಯು 1,300 ಕಿ.ಮೀ ದೂರವನ್ನು ಕ್ರಮಿಸಿ ಬಿಹಾರದ 25 ಜಿಲ್ಲೆಗಳನ್ನು ತಲುಪಿತು. ಚುನಾವಣಾ ಆಯೋಗವು ಮತದಾರರ ಪಟ್ಟಿಯಲ್ಲಿ ತಪ್ಪುಗಳನ್ನು ಮಾಡಿದೆ ಎಂದು ಆರೋಪಿಸಿ ಮತ ಅಧಿಕಾರ ಯಾತ್ರೆಯನ್ನು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ಪ್ರಾರಂಭಿಸಲಾಗಿತ್ತು. ಮುಂಬರುವ ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಇಂಡಿಯಾ ಒಕ್ಕೂಟ ಜನರ ಬೆಂಬಲ ಗಳಿಸುವ ವಿಚಾರವಾಗಿಯೂ ಈ ಯಾತ್ರೆಗೆ ಚಾಲನೆ ನೀಡಿತ್ತು.

ಬಿಹಾರ ಕ್ರಾಂತಿಕಾರಿ ರಾಜ್ಯ. ಸಂವಿಧಾನ ಕೊಲೆ ಮಾಡಲು ಇಂಡಿಯಾ ಒಕ್ಕೂಟ ಬಿಡೋದಿಲ್ಲ. ಹೀಗಾಗಿ ನಾವು ಮತ ಅಧಿಕಾರ ಯಾತ್ರೆ ಕೈಗೊಂಡಿದ್ದು. ಬಿಜೆಪಿ ನಾಯಕರೇ ಪರಮಾಣು ಬಾಂಬ್‌ಗಿಂತ ದೊಡ್ಡ ಬಾಂಬ್ ಬಗ್ಗೆ ಕೇಳಿದ್ದೀರಾ? ಅದು ಹೈಡ್ರೋಜನ್ ಬಾಂಬ್. ಇನ್ಮುಂದೆ ಬಿಜೆಪಿ ನಾಯಕರು ಸಿದ್ಧರಾಗಿರಬೇಕು ಹೈಡ್ರೋಜನ್ ಬಾಂಬ್ ಹೊರಬರಲಿದ್ದು, ಜನರು ಶೀಘ್ರದಲ್ಲೇ ಮತಕಳ್ಳತನದ ವಾಸ್ತವತೆ ಅರಿಯುತ್ತಾರೆ. ಹೈಡ್ರೋಜನ್ ಬಾಂಬ್ ಹೊರಬಿದ್ದ ಬಳಿಕ ದೇಶದ ಜನರಿಗೆ ಪ್ರಧಾನಿ ನರೇಂದ್ರ ಮೋದಿ ಮುಖ ತೋರಿಸಲು ಅಸಾಧ್ಯ ಎಂದು ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿ ಹೇಳಿದರು.

# ಚುನಾವಣೆ ಸಮೀಪಿಸುತ್ತಿದ್ದಂತೆ ಬಿಹಾರದಲ್ಲಿ ಹೆಚ್ಚುತ್ತಿರುವ ಹಿಂಸಾತಾಂಡವ: ಬುದ್ಧನ ನೆಲದಲ್ಲೇನು ಸದ್ದು?

ಚುನಾವಣೆಗೂ ಹಿಂಸಾಚಾರಕ್ಕೂ ಅದೇನು ಸಂಬಂಧವೋ? ಬುದ್ಧನ ನೆಲ ಎಂದು ಕರೆಸಿಕೊಂಡ ಬಿಹಾರವೂ ಈ ಪ್ರಶ್ನೆಗೆ ಹೊರತಲ್ಲ. ಈಗಾಗಲೇ ಚುನಾವಣೆಗೆ ತೋರಣ ಕಟ್ಟಿರುವ ಈ ರಾಜ್ಯ ಸಮಾಜವಾದಿ ನೆಲ, ಶಾಂತಿ ಮತ್ತು ಕ್ರಾಂತಿ ಎರಡಕ್ಕೂ ಸಾಕ್ಷಿಯಾದ ನೆಲ ಕೂಡ. ವಿಧಾನಸಭೆ ಚುನಾವಣೆ ಹೊಸ್ತಿಲಲ್ಲಿ ಗುಂಡಿನ ಮೊರೆತ ಕೇಳಿಬರುತ್ತಿರುವುದು, ನಿತೀಶ್‌ಗೆ ಕಾನೂನು ಸುವ್ಯವಸ್ಥೆ ಮತ್ತೊಂದು ಸವಾಲಾಗಿ ಪರಿಣಮಿಸಿದೆ.




ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯುರೋ ಪ್ರಕಾರ, ಗರಿಷ್ಠ ಅಪರಾಧಿ ಕೃತ್ಯಗಳ ಟಾಪ್ 5 ರಾಜ್ಯಗಳ ಪಟ್ಟಿಯಲ್ಲಿ ಬಿಹಾರ ಅಗ್ರಸ್ಥಾನದಲ್ಲಿದೆ. ಜುಲೈನಲ್ಲಿ 14 ದಿನದೊಳಗೆ 50 ಜನರ ಕೊಲೆಯಾಗಿದೆ. ಇನ್ನು ಚುನಾವಣೆ ಸಮೀಪಿಸುತ್ತಿದ್ದಂತೆ ಇನ್ನಷ್ಟು ರಾಜಕೀಯ ಪ್ರೇರಿತ ಹಿಂಸಾಕೃತ್ಯಗಳು ಹೆಚ್ಚಿದರೂ ಆಶ್ಚರ್ಯವಿಲ್ಲ. ಲಾಲೂಪ್ರಸಾದರ ಅವಧಿಯನ್ನು 'ಜಂಗಲ್ ರಾಜ್' ಎನ್ನುತ್ತಿದ್ದವರು ಸಾಧಿಸಿದ್ದಾದರೂ ಏನು ಎಂದು ತೇಜಸ್ವಿ ಯಾದವ್ ಮತ್ತು ಚಿರಾಗ್ ಪಾಸ್ವಾನ್ ನಿತೀಶ್‌ರನ್ನು ಪ್ರಶ್ನಿಸುವಂತಾಗಿದೆ.

ಗಾಂಧೀಜಿ ಅಹಿಂಸಾ ಸತ್ಯಾಗ್ರಹ ಕೈಗೊಂಡಿದ್ದ ಈ ನೆಲದಲ್ಲಿ 'ಜಂಗಲ್ ರಾಜ್' ಕುಖ್ಯಾತಿ ಇನ್ನೂ ಅಳಿದಿಲ್ಲ. ಪೊಲೀಸ್ ಇಲಾಖೆ ಅಷ್ಟೊಂದು ನಿಷ್ಕ್ರಿಯವಾಗಿದೆಯೇ? ಕೊಲೆಗಾರರಿಗೆ ಯಾರ ಭಯವೇ ಇಲ್ಲವೇ? ಎನ್ನುವ ಪ್ರಶ್ನೆ ಉದ್ಭವಿಸುವುದು ಸಹಜ. 20 ವರ್ಷಗಳ ಹಿಂದೆ ಹೋಲಿಸಿದರೆ ಅಪರಾಧಕೃತ್ಯಗಳ ಪ್ರಮಾಣ ಸ್ವಲ್ಪ ಕ್ಷೀಣಿಸಿದೆ ಹೊರತು ಸಂಪೂರ್ಣ ನಿಂತಿಲ್ಲ. ಈ ವರ್ಷ ವರೆಗೆ 1.55 ಲಕ್ಷ ಅಪರಾಧ ಪ್ರಕರಣ ದಾಖಲಾಗಿವೆ. ಕಳೆದ 8 ತಿಂಗಳಲ್ಲಿ 2024ರಲ್ಲಿ ಸಂಭವಿಸಿದ ಅಪರಾಧ ಕೃತ್ಯಗಳ ಅರ್ಧದಷ್ಟು ಸಂಖ್ಯೆ ದಾಟಿದೆ. ಈ ಪೈಕಿ ಬಹುತೇಕ ಹಿಂಸಾ ಘಟನೆಗಳು ರಾಜಕೀಯ ಸ್ವರೂಪ ಪಡೆದುಕೊಳ್ಳುತ್ತಿರುವುದು ದುರಂತ.

2015ರಿಂದ 2025 ರವರೆಗಿನ ಅಂಕಿ-ಅಂಶ ನೋಡಿದರೆ, ಸರಾಸರಿ ಶೇ.80 ರಷ್ಟು ಅಪರಾಧ ಕೃತ್ಯಗಳ ಹೆಚ್ಚಳ ಸ್ಪಷ್ಟ. ಪ್ರತಿ ತಿಂಗಳು ಸರಾಸರಿ 229 ಕೊಲೆಗಳು ಇಲ್ಲಿ ನಡೆಯುತ್ತವೆ. ಬಿಹಾರದ ಶೇ.48ರಷ್ಟು ಸಂಸದರು ಹಾಗೂ ಶೇ.62ರಷ್ಟು ಶಾಸಕರ ಮೇಲೆ ಕ್ರಿಮಿನಲ್ ದೂರುಗಳಿವೆ. ಉದ್ಯಮಿಗಳು, ರಾಜಕಾರಣಿಗಳ ಕೊಲೆ ಇಲ್ಲಿ ಸಾಮಾನ್ಯವಾಗಿದೆ. ಜುಲೈನಲ್ಲಿ ಪಟನಾದ ಪಾರಸ್ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಾಗಿದ್ದ ಗ್ಯಾಂಗ್‌ಸ್ಟರ್ ಚಂದನ ಮಿಶ್ರಾನನ್ನು ಹಾಡಹಗಲೇ ಐವರು ಬಂದೂಕುಧಾರಿಗಳು ಬಂದು ಕೊಂದ ಘಟನೆ ಒಂದು ಉದಾಹರಣೆಯಷ್ಟೇ. ಇದಲ್ಲದೇ ಖ್ಯಾತ ಮರಳು ವ್ಯಾಪಾರಿ ರಮಾಕಾಂತ ಯಾದವ್ ಮತ್ತು ಬ್ಯುಸಿನೆಸ್‌ಮನ್ ಗೋಪಾಲ ಖೇಮಕಾ ಅವರ ಕಗ್ಗೊಲೆ ನಡೆಯಿತು. ಇಂದಿಗೂ ಕೊಲೆಗಾರರ ಪತ್ತೆಯಿಲ್ಲ. ಎಷ್ಟೇ ಹೈಪ್ರೊಫೈಲ್ ವ್ಯಕ್ತಿಗಳಾದರೂ ಇಲ್ಲಿ ಜೀವಭಯ ಮಾತ್ರ ತಪ್ಪಿದ್ದಲ್ಲ.

ಈ ರಾಜ್ಯದಲ್ಲಿ ಮೂಲಸೌಕರ್ಯಗಳ ಕೊರತೆಯಿಂದಾಗಿ ಯಾವುದೇ ಹೂಡಿಕೆದಾರರು ಬರುವುದಿಲ್ಲ. ಕಾರ್ಖಾನೆಗಳು ತೆರೆದಿಲ್ಲ. ಶಿಕ್ಷಣವೂ ಅಷ್ಟಕ್ಕಷ್ಟೇ. ಬಡತನ ಹೆಚ್ಚು. ದುಡ್ಡಿನ ಆಸೆಗೆ ಅಪರಾಧ ಕೃತ್ಯಕ್ಕೆ ಮುಂದಾಗುವವರೇ ಹೆಚ್ಚು. 500, 1000 ರೂ.ಗೆ ಅಪಹರಣಕ್ಕೆ ಮುಂದಾಗುವ ಯುವ ಸಮುದಾಯಕ್ಕೆ ಉದ್ಯೋಗದ ಭರವಸೆ ಇಲ್ಲ. ಇನ್ನು ಈ ಯುವಕರನ್ನು ತಮ್ಮ ಉದ್ದೇಶಗಳಿಗೆ ಬಳಸುವ ರಾಜಕಾರಣಿಗಳು ಪ್ರಭಾವಿಯಾಗಿದ್ದರಿಂದ ಇವರ ಬಂಧನ ಮರೀಚಿಕೆಯಾಗಿದೆ. ರಾಜಾರೋಷವಾಗಿ ಓಡಾಡಿಕೊಂಡಿರುವ ಅಪರಾಧಿಗಳಿಗೆ ಒಂದಿಲ್ಲಒಂದು ಪಕ್ಷದ ನಾಯಕರ ಅಭಯಹಸ್ತವಿದೆ, ಶ್ರೀ ರಕ್ಷೆಯಿದೆ.

ಇನ್ನು ಅನಧಿಕೃತವಾಗಿ ಶಸ್ತ್ರಾಸ್ತ್ರಗಳನ್ನು ಹೊಂದಿದವರೇ ಇಲ್ಲಿ ಹೆಚ್ಚು. ಶಸ್ತ್ರಾಸ್ತ್ರ ಪೂರೈಸುವ ದೊಡ್ಡ ಜಾಲವೇ ಇಲ್ಲಿರುವುದು ಪೊಲೀಸರಿಗೆ ತಲೆನೋವಾಗಿದೆ.

1990ರಲ್ಲಿ ಲಾಲೂಪ್ರಸಾದ್ ಯಾದವ್ ಆಡಳಿತವಿದ್ದಾಗ ಇಲ್ಲಿಅಪರಾಧ ವಿಜೃಂಭಿಸಿತ್ತು. ಭುಜಬಲ ಇದ್ದವರು ಅಪರಾಧ ಕೃತ್ಯಗಳನ್ನು ವ್ಯಾವಹಾರಿಕವಾಗಿ ಬಳಸಿದರು. ರಾಜಕೀಯ ಪುಢಾರಿಗಳು ಕೈಯಲ್ಲಿ ಬಂದೂಕು ಹಿಡಿದು-ಕೊಂಡು ಓಡಾಡುವುದು ಸಾಮಾನ್ಯವಾಗಿತ್ತು. ಗನ್‌ಗಳನ್ನು ಇಟ್ಟುಕೊಂಡು ತಿರುಗುವುದು ಪ್ರತಿಷ್ಠೆಯ ವಿಷಯವಾಗಿತ್ತು. ಈ ಮಧ್ಯೆ ಜಾತಿ ಸಂಘರ್ಷ ಕಾರಣಕ್ಕೆ ರಕ್ತಪಾತ ಪರಾಕಾಷ್ಠೆ ತಲುಪಿತ್ತು. 1994ರಲ್ಲಿ ಗೋಪಾಲಗಂಜ್ ಜಿಲ್ಲೆಯ ನ್ಯಾಯಾಧೀಶ ಜಿ. ಕೃಷ್ಣಯ್ಯಾರ ಕೊಲೆ, 1997ರಲ್ಲಿ ಸಿವಾನ್‌ನಲ್ಲಿ ನಡೆದ ವಿದ್ಯಾರ್ಥಿ ನಾಯಕ ಚಂದ್ರಶೇಖರ್ ಕೊಲೆ ಹೀಗೆ ಅನೇಕ ಉದಾಹರಣೆಗಳು ನಮ್ಮೆದುರಿವೆ. 1994ರಿಂದ 2005 ರವರೆಗಿನ ಈ ಅವಧಿಯಲ್ಲಿಕ್ರೈಂ ಅಬ್ಬರಿಸಿತ್ತು. ಅಧಿಕಾರದಲ್ಲಿರುವವರ ಮಾತಿಗೆ ತಕ್ಕಂತೆ ನಡೆಯಬೇಕಾದ ಅನಿವಾರ್ಯತೆಗೆ ಹಿರಿಯ ಪೊಲೀಸ್ ಅಧಿಕಾರಿಗಳ ಅಸಹಾಯಕತೆಯೂ ಅಪರಾಧ ಕೃತ್ಯಗಳ ಹೆಚ್ಚಳಕ್ಕೆ ಒಂದು ಕಾರಣ. ಅಪರಾಧ ಕೃತ್ಯವೆಸಗಿ ಜೈಲಿನಿಂದ ಜಾಮೀನಿನ ಮೇಲೆ ಹೊರಬಂದವರು ನಾನು ಈ ಬಾರಿ ಚುನಾವಣೆಗೆ ಸ್ಪರ್ಧಿಸುತ್ತೇನೆ. ಗೆದ್ದು ಬಂದ ಮೇಲೆ ನಿಮ್ಮನ್ನು ನೋಡಿಕೊಳ್ಳುತ್ತೇನೆ ಎಂದಾಡುವ ಪುಢಾರಿಗಳ ಬೆದರಿಕೆ ಮಾತುಗಳಿಗೆ ಪೊಲೀಸರಿಂದ ಮೌನವೇ ಉತ್ತರವಾಗಿತ್ತು.

# ಆಶಾದಾಯಕ ರಿಪೋರ್ಟ್ ನಡುವೆ, ಹೀಗೊಂದು ಬಿಜೆಪಿಗೆ 'ಧರ್ಮ ಸಂಕಟ'!

**ಪಾಟ್ನಾ:** ಚುನಾವಣೆಯ ಹೊಸ್ತಿಲಲ್ಲಿ ಇರುವ ಬಿಹಾರದಲ್ಲಿ ಸಾಕಷ್ಟು ರಾಜಕೀಯ ಬೆಳವಣಿಗೆಗಳು ಕ್ಷಿಪ್ರಗತಿಯಲ್ಲಿ ನಡೆಯುತ್ತಿದೆ. ಮುಂಬರುವ ನವೆಂಬರ್ ತಿಂಗಳೊಳಗೆ ಅಲ್ಲಿ ಚುನಾವಣೆ ನಡೆಯಬೇಕಿದೆ. ಹಾಲೀ ವಿಧಾನಸಭೆಯ ಅವಧಿ ನವೆಂಬರ್ ಹದಿನಾರಕ್ಕೆ ಮುಕ್ತಾಯಗೊಳ್ಳಲಿದೆ.



ಬಿಹಾರದಲ್ಲಿ ರಾಹುಲ್ ಗಾಂಧಿ ಮತ್ತು ತೇಜಸ್ವಿ ಯಾದವ್ ನೇತೃತ್ವದ ವೋಟರ್ ಅಧಿಕಾರ್ ಯಾತ್ರೆ ನಡೆಯುತ್ತಿದೆ. ಇದಕ್ಕೆ, ಜನಸ್ಪಂದನೆಯೂ ಉತ್ತಮವಾಗಿ ವ್ಯಕ್ತವಾಗುತ್ತಿದೆ. ಆದರೆ, ಈಗ ಹೊರಬಿದ್ದಿರುವ ಸಮೀಕ್ಷೆಯೊಂದರ ಪ್ರಕಾರ, ವೋಟ್ ಚೋರಿ ಆರೋಪಕ್ಕೆ ಮತದಾರ ಅಷ್ಟು ಸೊಪ್ಪು ಹಾಕಿದಂತಿಲ್ಲ. ಒಂದು ಕಡೆ, ಎನ್‌ಡಿಎ ಮೈತ್ರಿಕೂಟ ಅಧಿಕಾರವನ್ನು ಉಳಿಸಿಕೊಳ್ಳಲು ಪ್ರಯತ್ನವನ್ನು ಮಾಡುತ್ತಿದೆ. ಅದಕ್ಕಾಗಿ, ಈಗಿಂದಲೇ ಬಿಜೆಪಿ - ಜೆಡಿಯು - ಲೋಕಜನಶಕ್ತಿ ಪಾರ್ಟಿ ಸೀಟು ಹೊಂದಾಣಿಕೆಯ ಮಾತುಕತೆಯಲ್ಲಿ ತೊಡಗಿಸಿಕೊಂಡಿದೆ. ಇನ್ನೊಂದು ಕಡೆ, ಮಹಾಘಟಬಂಧನ್ ಕೂಡಾ, ಮತ್ತೆ ಬಿಹಾರದಲ್ಲಿ ಸರ್ಕಾರ ನಡೆಸಬೇಕು ಎನ್ನುವ ಛಲ ಹೊತ್ತು ಹೊರಟಿದೆ.

ಟೈಮ್ಸ್ ನೌ ಮತ್ತು ಜೆವಿಸಿ ಜಂಟಿಯಾಗಿ ಸಮೀಕ್ಷೆಯೊಂದನ್ನು ನಡೆಸಿದೆ. ಸಮೀಕ್ಷೆಯ ಫಲಿತಾಂಶ ಆಶಾದಾಯಕವಿದ್ದರೂ, ಬಿಜೆಪಿಗೆ ಇಲ್ಲಿ ತಲೆನೋವು ಹೆಚ್ಚಾಗಿದೆ. ಅದೇನಂದರೆ, ಬಿಜೆಪಿಯ ಮಿತ್ರ ಪಕ್ಷವಾದ ಜೆಡಿಯು, ನಿರೀಕ್ಷಿತ ಪ್ರಮಾಣದಲ್ಲಿ ಸೀಟ್ ಗೆಲ್ಲಲು ಸಾಧ್ಯವಾಗದೇ ಇರುವುದು.

ಬಿಹಾರದಲ್ಲಿ ಮತ್ತೆ ಎನ್‌ಡಿಎ ಮೈತ್ರಿಕೂಟ ಅಧಿಕಾರವನ್ನು ಉಳಿಸಿಕೊಳ್ಳಲಿದೆ, ಅಂ-ದರೆ ಮತ್ತೆ ಸಮ್ಮಿಶ್ರ ಸರ್ಕಾರ ರಚಿಸುವ ಸಾಧ್ಯತೆಯಿದೆ. ಟೈಮ್ಸ್ ನೌ, ಸಮೀಕ್ಷೆಯ ಪ್ರಕಾರ, ಎನ್‌ಡಿಎ ಮೈತ್ರಿಕೂಟ 243 ಸೀಟುಗಳ ಪೈಕಿ, 136 ಸ್ಥಾನವನ್ನು ಗೆಲ್ಲಲಿದೆ. ಇನ್ನೊಂದು ಕಡೆ, ತೇಜಸ್ವಿ ಯಾದವ್ ನೇತೃತ್ವದ ಮಹಾಘಟಬಂಧನ್ 75 ಸ್ಥಾನಗಳಿಗೆ ಸೀಮಿತವಾಗಬಹುದು ಎಂದು ಸಮೀಕ್ಷೆಯಲ್ಲಿ ಹೇಳಲಾಗಿದೆ. ಸರಳ ಬಹುಮತಕ್ಕೆ 122 ಸ್ಥಾನ ಗೆಲ್ಲಲಿದೆ.

ಕಳೆದ ಬಾರಿಯ ಅಂದರೆ 2020ರ ಅಸೆಂಬ್ಲಿ ಚುನಾವಣೆಯಲ್ಲಿ ಬಿಜೆಪಿ, 74 ಸ್ಥಾನವನ್ನು ಗೆದ್ದಿತ್ತು. ಸಮೀಕ್ಷೆಯ ಪ್ರಕಾರ, ಈ ಬಾರಿ ಅದು 81 ಸೀಟ್ ಗೆಲ್ಲುವ ಸಾಧ್ಯತೆಯಿದೆ. ಆದರೆ, ಕಳೆದ ಬಾರಿ 43 ಸ್ಥಾನ ಗೆದ್ದಿದ್ದ ನಿತೀಶ್ ಕುಮಾರ್ ಅವರ ಜೆಡಿಯು ಈ ಬಾರಿ ಕೇವಲ 29 ಸೀಟ್ ಮಾತ್ರ ಗೆಲ್ಲಲಿದೆ ಎಂದು ಸಮೀಕ್ಷೆಯಲ್ಲಿ ಹೇಳಲಾಗಿದೆ. ಈ ಸಮೀಕ್ಷೆ, ನಿಜವಾದಲ್ಲಿ, ಜೆಡಿಯು ದುರ್ಬಲಗೊಳ್ಳುತ್ತಾ ಸಾಗುತ್ತಿದೆ ಎನ್ನುವುದಕ್ಕೆ ಉದಾಹರಣೆಯಾಗಬಲ್ಲದು.

ಕಳೆದ ಚುನಾವಣೆಯಲ್ಲಿ 75 ಸ್ಥಾನವನ್ನು ಗೆಲ್ಲುವ ಮೂಲಕ ಖಿಎಳ ದೊಡ್ಡ ಪಾರ್ಟಿಯಾಗಿ ಹೊರಹೊಮ್ಮಿತ್ತು. ಸಮೀಕ್ಷೆಯ ಪ್ರಕಾರ, ತೇಜಸ್ವಿ ಯಾದವ್ ಅವರ ಪಾರ್ಟಿ, 52 ಸ್ಥಾನವನ್ನು ಗೆಲ್ಲಬಹುದು. ಇನ್ನು, ಹತ್ತೊಂಬತ್ತು ಸ್ಥಾನವನ್ನು ಗೆದ್ದಿದ್ದ ಕಾಂಗ್ರೆಸ್ ಹತ್ತು ಸ್ಥಾನವನ್ನು ಗೆಲ್ಲಬಹುದು ಎಂದು ಸಮೀಕ್ಷೆಯಲ್ಲಿ ಹೇಳಲಾಗಿದೆ.

ಇನ್ನು, ಪ್ರಶಾಂತ್ ಕಿಶೋರ್ ಅವರ ಜನ್ ಸೂರಜ್ ಪಾರ್ಟಿ ಎರಡು, ಎಐಎಂಐಎಂ ಮೂರು, ಬಹುಜನ ಸಮಾಜ ಪಾರ್ಟಿ ಒಂದು ಸ್ಥಾನವನ್ನು ಗೆಲ್ಲಬಹುದು ಎಂದು ಸಮೀಕ್ಷೆಯಲ್ಲಿ ಉಲ್ಲೇಖವಾಗಿದೆ. ಸೀಮಾಂಚಲ ಪ್ರದೇಶದಲ್ಲಿ ಮುಸ್ಲಿಮರ ಪ್ರಾಬಲ್ಯ ಹೆಚ್ಚಿರುವುದರಿಂದ, ಅದು ಓವೈಸಿ ಮತ್ತು ತೇಜಸ್ವಿ ಯಾದವ್ ಪಾರ್ಟಿಗೆ ಅನುಕೂಲವಾಗಬಹುದು.

ಸಮೀಕ್ಷೆಯಲ್ಲಿ ಒಟ್ಟಾರೆಯಾಗಿ ಗಮನಿಸಬೇಕಾದ ಅಂಶವೇನಂದರೆ, ಜೆಡಿಯು ದುರ್ಬಲಗೊಳ್ಳುತ್ತಿರುವುದು ಒಂದು ಕಡೆ. ಇನ್ನೊಂದು ಕಡೆ, ನಿತೀಶ್ ಕುಮಾರ್ ಅವರು ಜನಪ್ರಿಯ ಮುಖ್ಯಮಂತ್ರಿಯಾಗಿ ಉಳಿದಿಲ್ಲ. ಇದುವೇ, ಬಿಜೆಪಿಗೆ ಆತಂಕಕ್ಕೆ ಕಾರಣವಾಗಿರುವುದು. ಯಾಕೆಂದರೆ, ಪ್ರಸಕ್ತವೇ, ಹೆಚ್ಚು ಸ್ಥಾನ ಗೆದ್ದಿದ್ದರೂ, ಬಿಜೆಪಿ ಸಿಎಂ ಹುದ್ದೆಯ ತ್ಯಾಗವನ್ನು ಮಾಡಿತ್ತು. ಇನ್ನು, ಈ ಬಾರಿ ಮತ್ತೆ ಸೀಟ್ ಕಮ್ಮಿ ಬಂದರೆ, ಅವರನ್ನು ಸಿಎಂ ಅಭ್ಯರ್ಥಿ ಎಂದು ಗುರುತಿಸುವುದು ಬಿಜೆಪಿಗೆ ಉಭಯ ಸಂಕಟವಾಗಬಹುದು ಎಂದು ವಿಶ್ಲೇಷಿಸಲಾಗುತ್ತಿದೆ.

# ಬಾನು ಮುಷ್ತಾಕ್‌ರಿಂದ ದಸರಾ ಉದ್ಘಾಟನೆ ತೀವ್ರಗೊಂಡ ಅಸಮಾಧಾನ

**ಬೆಂಗಳೂರು,ಆ.29–** ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಸಿದ್ಧತೆಗಳು ಒಂದೆಡೆ ಭರದಿಂದ ಸಾಗಿದ್ದ-ರೆ ಮತ್ತೊಂದೆಡೆ ದಸರಾ ಉದ್ಘಾಟನೆಗೆ ಬೂಕರ್ ಪ್ರಶಸ್ತಿ ಪುರಸ್ಕೃತರಾದ ಸಾಹಿತಿ ಬಾನು ಮುಷ್ತಾಕ್ ಅವರಿಗೆ ಆಹ್ವಾನ ನೀಡಲಾಗಿದೆ. ಇದು ಬಹುಸಂಖ್ಯಾತರ ಅಸಮಾಧಾನಕ್ಕೆ ಎಡೆಮಾಡಿ ಕೊಟ್ಟಿರುವುದಲ್ಲದೆ ಕೆಲವರ ವಿರೋಧಕ್ಕೂ ಆಸ್ಪದ ನೀಡಿದೆ.



ಮುಖ್ಯಮಂತ್ರಿಯವರು ದಸರಾ ಉದ್ಘಾಟನಾಕಾರರ ಹೆಸರು ಪ್ರಕಟಿಸಿದ ಬೆನ್ನಲ್ಲೇ ಅಸಮಾಧಾನದ ಹೊಗೆಯಾಡತೊಡಗಿದ್ದು, ಇನ್ನೂ ನಿಂತಿಲ್ಲ. ಹಿಂದೂ ಧರ್ಮದ ಪಂಚಾಂಗದ ಪ್ರಕಾರ ದಸರಾ ಉದ್ಘಾಟನೆಗೆ ಮುಹೂರ್ತ, ಸಮಯ, ಘಳಿಗೆ ನಿಗದಿ ಮಾಡಲಾಗುತ್ತದೆ. ಹಿಂದೂ ಪಂಚಾಂಗದಂತೆ ಮುಹೂರ್ತ:ಈ ಬಾರಿ ಸೆ.22ರಿಂದ ದಸರಾ ಉತ್ಸವ ವಿದ್ಯುಕ್ತವಾಗಿ ಆರಂಭಗೊಳ್ಳಲಿದೆ.

ಅಂದು ಮೈಸೂರಿನ ಚಾಮುಂಡಿ ಬೆಟ್ಟದ ಮೇಲಿರುವ ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸಲಾಗುತ್ತದೆ. ದಸರಾ ಆಚರಣೆಗಾಗಿ ತರುವ ಚಾಮುಂಡೇಶ್ವರಿ ದೇವಿಯ ಉತ್ಸವ ಮೂರ್ತಿಗೆ ಉದ್ಘಾಟನಾಕಾರರು ಪುಷ್ಪಾರ್ಚನೆ ಮಾಡುವುದು ಇದುವರೆಗೂ ನಡೆದು ಬಂದಿರುವ ಸಾಂಪ್ರದಾಯಿಕ ರೂಢಿ.

ರಾಜಮನೆತನದಿಂದ ನಡೆಯುತ್ತಿದ್ದ ದಸರಾ ಉತ್ಸವವು ರಾಜ್ಯ ಸರ್ಕಾರದ ವತಿಯಿಂದ ನಡೆಯಲು ಆರಂಭವಾದ ಮೇಲೆ ಜನತಾ ದಸರಾವಾಗಿ ಮಾರ್ಪಟ್ಟಿತು. ವರ್ಷದಿಂದ ವರ್ಷಕ್ಕೆ ದಸರಾ ವೈಭೋಗವೂ ಹೆಚ್ಚುತ್ತಾ ಬಂದಿದೆ. ಧಾರ್ಮಿಕ ಆಚರಣೆಗಳ ಜೊತೆ ಜೊತೆಯಲ್ಲೇ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು, ಕ್ರೀಡೆಗಳು, ವಸ್ತುಪ್ರದರ್ಶನಗಳು ನಡೆದು ದಸರಾದ ಉತ್ಸವವನ್ನು ಇಮಡಿಗೊಳಿಸುತ್ತವೆ.

ಈ ಬಾರಿ ಬಾನು ಮುಷ್ತಾಕ್ ಅವರು ದಸರಾ ಉದ್ಘಾಟಿಸಬೇಕಿದೆ. ಅವರು ತಮ ಸ್ವಧರ್ಮದ ನಂಬಿಕೆಗೆ ವಿರುದ್ಧವಾಗಿ ದಸರಾ ಉದ್ಘಾಟನೆಗೂ ಮುನ್ನ ಚಾಮುಂಡೇಶ್ವರಿ ಮೂರ್ತಿಗೆ ಪೂಜೆ ಸಲ್ಲಿಸಲಿದ್ದಾರೆಯೇ ಎಂಬುದು ಬಹು ಚರ್ಚೆಗೆ ಗ್ರಾಸವಾಗಿರುವ ವಿಚಾರವಾಗಿದೆ. ಏಕೆಂದರೆ, ಅವರು ಕನ್ನಡಾಂಬೆ ಭುವನೇಶ್ವರಿ ಪ್ರತಿಮೆ ವಿಚಾರದಲ್ಲಿ ಈ ಹಿಂದೆ ಮಾತನಾಡಿರುವ ವಿಚಾರಕ್ಕೆ ಹಲವರ ವಿರೋಧ ವ್ಯಕ್ತವಾಗಿದೆ.

ಸಾಹಿತಿಗಳ ಬಗ್ಗೆ ಗೌರವ: ಸಾಹಿತಿಯಾದವರನ್ನು ಈ ನಾಡು ಬಹಳ ಗೌರವದಿಂದ ಸನಾಸಿ, ಸತ್ಕರಿಸುತ್ತಾ ಬಂದಿದೆ. ಅವರನ್ನು ಸಾಹಿತ್ಯ ಸಮೇಳನದ ಅಧ್ಯಕ್ಷ ಸ್ಥಾನದಂತಹ ಗೌರವಕ್ಕೆ ಆಯ್ಕೆ ಮಾಡಿದ್ದರೆ ಯಾರೂ ತಕರಾರು ತೆಗೆಯುತ್ತಿರಲಿಲ್ಲ. ಆದರೆ ಧಾರ್ಮಿಕ ಶ್ರದ್ಧೆಯ ವಿಚಾರವಾಗಿರುವ ದಸರಾ ಮಹೋತ್ಸವ ಉದ್ಘಾಟನೆಗೆ ಇವರನ್ನು ಆಹ್ವಾನಿಸುತ್ತಿರುವುದು ಬಹುಸಂಖ್ಯಾತರ ಅಸಹನೆಗೆ ಕಾರಣವಾಗಿದೆ. ಹೀಗಾಗಿ ಒಂದೆಡೆ ತೀವ್ರ ವಿರೋಧವು ವ್ಯಕ್ತವಾಗುತ್ತಿದೆ.

ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸಿ ದಸರಾ ಮಹೋತ್ಸವಕ್ಕೆ ಪುಷ್ಪಾರ್ಚನೆ ಮೂಲಕ ಚಾಲನೆ ನೀಡುವ ಸಂಪ್ರದಾಯವಿದೆ. ನಿರಂತರವಾಗಿ ನಡೆದುಕೊಂಡು ಬಂದಿರುವ ಸಂಪ್ರದಾಯ, ಪರಂಪರೆ, ನಂಬಿಕೆಗಳಿಗೆ ವಿರುದ್ಧವಾಗಿ ಅವರನ್ನು ದಸರಾ ಉದ್ಘಾಟನಕಾರರನ್ನಾಗಿ ಮಾಡಿರುವುದು ಬಹಳಷ್ಟು ಜನರ ಅಸಮಾಧಾನಕ್ಕೆ ಅವಕಾಶ ಕಲ್ಪಿಸಿದೆ.

ವಿಜಯನಗರದ ಅರಸರು ಆರಂಭಿಸಿದ ದಸರಾ ಮಹೋತ್ಸವವನ್ನು ಅನಂತರ ಮೈಸೂರಿನ ಅರಸರು ಮುಂದುವರೆಸುತ್ತಾ ಬಂದಿದ್ದಾರೆ. ಈಗಲೂ ಅರಸು ಮನೆತನದವರು ಪ್ರತಿ ವರ್ಷ ಖಾಸಗಿಯಾಗಿ ದಸರಾ ಮಹೋತ್ಸವವನ್ನು ಮೈಸೂರು ಅರಮನೆಯಲ್ಲಿ ನೆರವೇರಿಸುತ್ತಾರೆ.

ಲಭ್ಯವಿರುವ ಮಾಹಿತಿ ಪ್ರಕಾರ ನಾಲ್ಕು ದಶಕಗಳಿಗೂ ಹೆಚ್ಚು ಕಾಲದಿಂದಲೂ ರಾಜ್ಯ ಸರ್ಕಾರದಿಂದ ದಸರಾ ಆಚರಿಸುತ್ತಿದ್ದು, ಇದು ನಾಡಹಬ್ಬವಾಗಿದೆ. ಈಗಲೂ ದಸರಾ ಆಚರಣೆಯ ಮಹಾನವಮಿ ದಿಬ್ಬವನ್ನು ವಿಜಯನಗರ ಸಾಮ್ರಾಜ್ಯದ ಹಂಪಿಯಲ್ಲಿ ಕಾಣಬಹುದಾಗಿದೆ. ಇದೇ ಮೊದಲಲ್ಲ:ದಸರಾ ಉತ್ಸವದ ಉದ್ಘಾಟನೆಗೆ ರಾಜ್ಯ ಸರ್ಕಾರ ಸಾಹಿತಿಯೊಬ್ಬರನ್ನು ಆಹ್ವಾನಿಸಿರುವುದು ಇದೇ ಮೊದಲೇನಲ್ಲ. ಈ ಹಿಂದೆ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರಾದ ಡಾ.ಚಂದ್ರಶೇಖರ್ ಕಂಬಾರ, ಗಿರೀಶ್ ಕಾರ್ನಾಡ್, ಖ್ಯಾತ ಕವಿಗಳಾದ ಕೆ.ಎಸ್.ನಿಸಾರ್ ಅಹದ್, ಚನ್ನವೀರ ಕಣವಿ, ಸಾಹಿತಿಗಳಾದ ಬರಗೂರು ರಾಮಚಂದ್ರಪ್ಪ, ಹಂಪ ನಾಗರಾಜಯ್ಯ, ಚಿತ್ರ ಸಾಹಿತಿ ಹಂಸಲೇಖ, ಸಂಸದೆ ಸುಧಾ ನಾರಾಯಣಮೂರ್ತಿ ಅವರು ಕೂಡ ದಸರಾವನ್ನು ಉದ್ಘಾಟಿಸಿದ್ದಾರೆ.

ಅಲ್ಲದೆ, ಮಠಾಧೀಶರು, ವಿಜ್ಞಾನಿಗಳು, ರಾಜಕಾರಣಿಗಳು, ವೈದ್ಯರು ಸೇರಿದಂತೆ ಸಮಾಜದ ವಿವಿಧ ವರ್ಗಕ್ಕೆ ಸೇರಿದವರು ಕೂಡ ದಸರಾವನ್ನು ಉದ್ಘಾಟಿಸಿರುವ ನಿದರ್ಶನವಿದೆ. ನಾಡ ಉತ್ಸವವಾಗಿರುವ ದಸರಾ ಉದ್ಘಾಟನೆಯು ಸಂಪ್ರದಾಯ, ಪರಂಪರೆ, ಧಾರ್ಮಿಕ ಆಚರಣೆಗಳಿಗೆ ಧಕ್ಕೆಯಾಗದ ರೀತಿಯಲ್ಲಿ ಯಥಾರೀತಿ ನಡೆಯಬೇಕೆಂಬುದು ಬಹುತೇಕರಲ್ಲಿದೆ.

# ಇಸ್ರೇಲ್ ವಾಯು ದಾಳಿಯಲ್ಲಿ ಯೆಮೆನ್ ಪ್ರಧಾನಿ ಹತ್ಯೆ

**ಕೈರೊ:** ಯೆಮೆನ್ ರಾಜಧಾನಿ ಸನಾ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಹೌತಿ ಬಂಡುಕೋರ ನಿಯಂತ್ರಣ ಆಡಳಿತ ಕೇಂದ್ರದ ಪ್ರಧಾನಿ ಹತರಾಗಿದ್ದು, ಹಲವು ಸಚಿವರು, ನಾಯಕರು ಹತ್ಯೆಗೀಡಾಗಿದ್ದಾರೆ ಎಂದು ವರದಿಯಾಗಿದೆ.



ಗುರುವಾರ ಇಸ್ರೇಲ್ ವಾಯುಪಡೆ ನಡೆಸಿದ ಏರ್‌ಸ್ಟ್ರೈಕ್‌ನಲ್ಲಿ ಪ್ರಧಾನಿ ಅಹ್ಮದ್ ಅಲ್-ರಹ್ವಿ ಹಾಗೂ ಅವರ ಸಂಪುಟದ ಹಲವು ಸಚಿವರು, ಹೌತಿ ಬಂಡುಕೋರ ಪಡೆಯ ಕಮಾಂಡರ್‌ಗಳು ಸಾವಿಗೀಡಾಗಿದ್ದಾರೆ ಎಂದು ಹೌತಿ ಸರಕಾರ ಪ್ರಕಟಣೆಯಲ್ಲಿ ಹೇಳಿಕೊಂಡಿದೆ.

ಪ್ರಧಾನಿ ಅಲ್ ರಹ್ವಿ ಸೇರಿದಂತೆ ಸಚಿವರು ಹಾಗೂ ನಾಯಕರು ಸರಕಾರದ ಯೋಜನೆಗಳ ಪರಿಶೀಲನೆಗೆ ತೆರಳಿದ್ದರು. ಅಧಿಕಾರಿಗಳ ಜತೆ ಪರಿಶೀಲನಾ ಕಾರ್ಯಗಾರದಲ್ಲಿ ಪ್ರಧಾನಿ ಪಾಲ್ಗೊಂಡಿದ್ದ ವೇಳೆ ಬಾಂಬ್ ದಾಳಿ ನಡೆಸಿ ಕೊಲ್ಲಲಾಗಿದೆ ಎಂದು ಹೌಥಿ ಸುಪ್ರೀಂ ಪೊಲಿಟಿಕಲ್ ಕೌನ್ಸಿಲ್ ಮುಖ್ಯಸ್ಥ ಮಹ್ದಿ ಅಲ್ ಮಷತ್ ತಿಳಿಸಿದ್ದಾರೆ. ಸನಾದಲ್ಲಿದ್ದ ಹೌತಿ ಬಂಡುಕೋರ ನೆಲೆಯ ಮೇಲೆ ನಿಖರ ದಾಳಿ ನಡೆಸಲಾಗಿದೆ. ಪ್ರಧಾನಿ ಅಲ್-ರಹ್ವಿ ಸೇರಿದಂತೆ ಹಲವರು ಹತರಾಗಿದ್ದಾರೆ ಎಂದು ಇಸ್ರೇಲ್ ರಕ್ಷಣಾ ಪಡೆ ಹೇಳಿಕೊಂಡಿದೆ.

ಗಾಜಾದಲ್ಲಿ ಹಮಾಸ್ ಬಂಡುಕೋರರ ವಿರುದ್ಧ ಹೋರಾಟ ನಡೆಸುತ್ತಿದ್ದ ಇಸ್ರೇಲ್ ವಿರುದ್ಧ ಹೌತಿ ಬಂಡುಕೋರರ ಪಡೆ ಸಮರ ಸಾರಿತ್ತು. ಆ.21 ರಂದು ಇಸ್ರೇಲ್ ಮೇಲೆ ಖಂಡಾಂತರ ಕ್ಷಿಪಣಿ ಮೂಲಕ ಕ್ಲಸ್ಟರ್ ಬಾಂಬ್ ದಾಳಿ ನಡೆಸಿತ್ತು. ಆ.24ರಂದು ಪ್ರತೀಕಾರದ ಕಾರ್ಯಾಚರಣೆ ಕೈಗೊಂಡಿದ್ದ ಇಸ್ರೇಲ್ ವಾಯುಪಡೆ ವಾಯುದಾಳಿ ಮೂಲಕ ಬಂಡುಕೋರ ಪಡೆ ನಿಯಂತ್ರಿತ ಸರಕಾರದ ಮುಖ್ಯಸ್ಥರು, ಸಚಿವರನ್ನು ಹತ್ಯೆಗೈದಿದೆ.

## ಧರ್ಮಸ್ಥಳ ಪ್ರಕರಣದ ಹಿಂದೆ ಬಿಜೆಪಿ ಎರಡು ಬಣಗಳ ಸಂಘರ್ಷ! ಡಿ.ಕೆ. ಶಿವಕುಮಾರ್ ಆರೋಪ



**ಬೆಂಗಳೂರು:** ರಾಜ್ಯ ಬಿಜೆಪಿಯಿಂದ ಧರ್ಮಸ್ಥಳ ಚಲೋ ಬೆನ್ನಲ್ಲೇ ಡಿಸಿಎಂ ಡಿಕೆ ಶಿವಕುಮಾರ್ ಅವರು ಬಿಜೆಪಿ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ವಿಧಾನಸೌಧದಲ್ಲಿ ಸೋಮವಾರ ಮಾತನಾಡಿದ ಅವರು, ಬಿಜೆಪಿಗೆ ತಿರುಗೇಟು ನೀಡಿದರು.

ಧರ್ಮಸ್ಥಳ ಕೇಸ್ ಎನ್‌ಐಎ ತನಿಖೆಗೆ ಬಿಜೆಪಿ ಒತ್ತಾಯ ಹಿನ್ನೆಲೆಯಲ್ಲಿ ಪ್ರತಿಕ್ರಿಯೆ ನೀಡಿ, ಈಗ ಮಾಡಿರುವ ತನಿಖೆ ಸಮಾಧಾನ ಇಲ್ವಂತಾ? ಎಸ್‌ಐಟಿ ರಚನೆ ಮಾಡಬೇಕು ಅಂತ ಅವರೇ ಒತ್ತಾಯ ಮಾಡಿದ್ದು ಎಂದರು. ಅವರಲ್ಲೇ ಆಂತರಿಕ ಎರಡು ಬಣಗಳಾಗಿವೆ. ಅವರದ್ದೇ ಷಡ್ಯಂತ್ರ, ಬಿಜೆಪಿ ಮೂಲ ಕಾರ್ಯಕರ್ತರೆ ಮಾಡಿರೋದು ಎಂದು ಬಿಜೆಪಿ ವಿರುದ್ದ ಡಿ.ಕೆ.ಶಿವಕುಮಾರ್ ವಾಗ್ದಾಳಿ ನಡೆಸಿದರು.

ಸೌಜನ್ಯ ಹಂತಕರ ಬಗ್ಗೆ ಮಾಹಿತಿ ಹೊಂದಿರುವ ಬಿಜೆಪಿ ನಾಯಕರು ಸತ್ಯ ಬಹಿರಂಗಪಡಿಸಲಿ ಎಂದು ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದ್ದಾರೆ.

ಬಿಜೆಪಿ ಮಾಜಿ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್ ಅವರು ಸೌಜನ್ಯ ಹೋರಾಟದಲ್ಲಿ ಭಾಗಿಯಾಗಿ ಮಾತನಾಡಿದ್ದ ವಿಡಿಯೋವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡ ಪ್ರಿಯಾಂಕ್, 'ಬಿಜೆಪಿ ಶಾಸಕ ಸುನಿಲ್ ಕುಮಾರ್ ಅವರಿಗೆ ಸೌಜನ್ಯ ಹತ್ಯೆ ಮಾಡಿದವರು ಯಾರು ಎಂಬ ಮಾಹಿತಿ ಇದೆ ಎಂದು ಸ್ವತಃ ಬಿಜೆಪಿಯ ನಳಿನ್ ಕುಮಾರ್ ಕಟೀಲ್ ಅವರು 2023ರಲ್ಲಿ ಪಕ್ಷದ ಅಧ್ಯಕ್ಷರು ಹಾಗೂ ಸಂಸದರಾಗಿದ್ದ ಕಾಲದಲ್ಲಿ ಹೇಳಿರುವುದು, ಹಾಗಾಗಿ ಈ ಮಾತನ್ನು ಗಂಭೀರವಾಗಿ ತೆಗೆದುಕೊಳ್ಳಬೇಕಿದೆ' ಎಂದಿದ್ದಾರೆ.

ಸೌಜನ್ಯ ಹಂತಕರ ಬಗ್ಗೆ ಬಿಜೆಪಿಯವರಿಗೆ ಮಾಹಿತಿ ಇದ್ದರೂ ಅಂದಿನಿಂದ ಇಂದಿನವರೆಗೂ ಗೌಪ್ಯವಾಗಿ ಇಟ್ಟಿರುವುದೇಕೆ? ಈಗಲೂ ಖಖಖ ಮುಂದೆ ಮಾಹಿತಿ ನೀಡಲು ಮುಕ್ತ ಅವಕಾಶವಿದೆ, ಸೌಜನ್ಯ ಹಂತಕರ ಬಗ್ಗೆ ಮಾಹಿತಿ ನೀಡುವ ಬಿಜೆಪಿ ನಾಯಕರಿಗೆ ರಕ್ಷಣೆ ಒದಗಿಸುವುದು ನಮ್ಮ ಸರ್ಕಾರದ ಜವಾಬ್ದಾರಿ ಎಂದು ತಿರುಗೇಟು ನೀಡಿದ್ದಾರೆ.

ಬಿಜೆಪಿಯವರು ಸೌಜನ್ಯ ಹತ್ಯೆಗೆ ನ್ಯಾಯ ಒದಗಿಸುವ ತಮ್ಮ ವಾಗ್ದಾನವನ್ನು ನೆನಪು ಮಾಡಿಕೊಳ್ಳಲಿ, ಹಂತಕರ ಬಗ್ಗೆ ತಮಗಿರುವ ಮಾಹಿತಿ ಬಹಿರಂಗಪಡಿಸಿ ತಮ್ಮ ಬದ್ಧತೆಯನ್ನು ನಿರೂಪಿಸಲಿ ಎಂದು ಸವಾಲು ಹಾಕಿದ್ದಾರೆ.

ಈ ನಡುವೆ ಬಿಜೆಪಿ ಧರ್ಮಸ್ಥಳ ಚಲೋ ಹಮ್ಮಿಕೊಂಡಿದೆ. ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ನಡೆಯುತ್ತಿದೆ ಎಂದು ಬಿಜೆಪಿ ನಾಯಕರು ಆರೋಪ ಮಾಡಿದ್ದಾರೆ. ಪ್ರಕರಣವನ್ನು ಎನ್ ಐ ಎ ತನಿಖೆಗೆ ನೀಡಬೇಕು. ಬುರುಡೆ ಗ್ಯಾಂಗ್ ವಿರುದ್ಧ ಸರ್ಕಾರ ಸರಿಯಾದ ಕ್ರಮ ವಹಿಸಬೇಕು ಎಂದು ಆಗ್ರಹಿಸಿದ್ದಾರೆ. ಧರ್ಮಸ್ಥಳ ಕ್ಷೇತ್ರದ ಹೊರವಲಯದಲ್ಲಿರುವ ಬೃಹತ್ ಮೈದಾನದಲ್ಲಿ ಬಿಜೆಪಿ ನಾಯಕರು ಮಧ್ಯಾಹ್ನ ಸಮಾವೇಶ ನಡೆಸಿ, ಮಾತನಾಡಿದರು. ಧರ್ಮಸ್ಥಳ ಚಲೋ ಸಮಾವೇಶದಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಸಂಸದ ಜಗದೀಶ್ ಶೆಟ್ಟರ್, ಸಂಸದ ತೇಜಸ್ವಿ ಸೂರ್ಯ, ಬಿವೈ ವಿಜಯೇಂದ್ರ, ಆರ್ ಅಶೋಕ್, ಮಾಜಿ ಸಚಿವ ಶ್ರೀರಾಮುಲು, ಶಾಸಕ ಸಿಟಿ ರವಿ ಭಾಗವಹಿಸಿದ್ದರು.

## 15 ವರ್ಷದ ಬಾಲಕಿಯನ್ನ ಮದುವೆಯಾದ ಬೆಳಗಾವಿ ಜಿಲ್ಲೆ ಗ್ರಾ.ಪಂ ಅಧ್ಯಕ್ಷ! ಹೆರಿಗೆಗೆ ಆಸ್ಪತ್ರೆಗೆ ಬಂದಾಗ ವಿಷಯ ಬಯಲು

**ಬೆಳಗಾವಿ:** ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನ ಬಸಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷ ಭೀಮಶಿ ಕಳ್ಳಿಮನಿ ಎಂಬಾತ 15 ವರ್ಷದ ಬಾಲಕಿಯನ್ನು ಮದುವೆ ಆಗಿದ್ದಾನೆ. ಇನ್ನು ಈ ವಿಚಾರ ಬಾಲಕಿಯು ಗರ್ಭಿಣಿಯಾಗಿ ಹೆರಿಗೆಗೆಂದು ಆಸ್ಪತ್ರೆಗೆ ಬಂದಾಗ ಬಯಲಾಗಿದೆ.



2023ರ ನವೆಂಬರ್ 5 ರಂದು ಅಪ್ರಾಪ್ತ ಜತೆಗೆ ಭೀಮಶಿ ಮದುವೆಯಾಗಿದೆ. ಬಾಲ್ಯ ವಿವಾಹದ ವಿಷಯ ಮುಚ್ಚಿಟ್ಟು ಅಪ್ರಾಪ್ತೆ ಜತೆಗೆ ಎರಡು ವರ್ಷ ಸಂಸಾರ ನಡೆಸಿದ್ದಾನೆ. ಎಲ್ಲಿಯೂ ಬಾಲಕಿಯ ದಾಖಲೆಗಳು ಸಿಗದಂತೆ ಮುಚ್ಚಿಟ್ಟಿದ್ದಾನೆ.

ಬಾಲ್ಯವಿವಾಹ ಕುರಿತು ದೂರು ಬಂದ ತಕ್ಷಣ ಮಕ್ಕಳ ರಕ್ಷಣಾ ತಂಡ ಬಸಾಪುರ ಗ್ರಾಮಕ್ಕೆ ಜಿಲ್ಲಾಮಕ್ಕಳ ರಕ್ಷಣಾಧಿಕಾರಿ ಡಾ. ಪ್ರವೀಣ ನೇತೃತ್ವದ ತಂಡ ನಾಲ್ಕು ಬಾರಿ ಭೇಟಿ ನೀಡಿದೆ. ಆದರೂ ಬಾಲಕಿ ಪತ್ತೆ ಹಚ್ಚಲು ಸಾಧ್ಯವಾಗಿಲ್ಲ. ಭೀಮಶಿ ಕಳ್ಳಿಮನಿ ಪೊಲೀಸ್ ಬಂಧನ ಭೀತಿಯಿಂದ ತಪ್ಪಿಸಿಕೊಂಡಿದ್ದಾನೆ. (ಯಾದಗಿರಿಯಲ್ಲಿ 9 ಕ್ಲಾಸ್ ವಿದ್ಯಾರ್ಥಿನಿಗೆ ಮಗು ಜನನ)

ಈ ಮಧ್ಯೆ ಬಾಲಕಿ ಪ್ರಾಪ್ತ ವಯಸ್ಸಿನವಳು ಎಂದು ನಿರೂಪಿಸಲು ನಕಲಿ ಜನನ ಪ್ರಮಾಣ ಪತ್ರ ವೈರಲ್ ಮಾಡಿದ್ದ. ಆದರೆ, ಬಾಲಕಿಯ ಶಾಲಾ ಟ್ರಾನ್ಸಫರ್ ಸರ್ಟಿಫಿಕೆಟ್ ಜತೆಗೆ ಹೊಸ ಜನನ ಪ್ರಮಾಣದ ದಾಖಲೆ ಹೋಲಿಕೆ ಮಾಡಿದ ಅಧಿಕಾರಿಗಳು ಬಾಲ್ಯ ವಿವಾಹ ಆಗಿರುವುದನ್ನು ಪತ್ತೆ ಹಚ್ಚಿದ್ದಾರೆ. ಗ್ರಾಪಂ ಅಧ್ಯಕ್ಷನ ವಿರುದ್ಧ ಪೋಕ್ಸೋ ಕೇಸ್ ದಾಖಲಾಗಿದೆ. ಯಮಕನಮರಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಶಿವಮೊಗ್ಗದಲ್ಲಿ ಅಪ್ರಾಪ್ತೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ದೃಢಪಟ್ಟ ಹಿನ್ನೆಲೆಯಲ್ಲಿ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಅಪರಾಧಿಗೆ 20 ವರ್ಷ ಕಠಿಣ ಕಾರಾಗೃಹ ವಾಸ, 75 ಸಾವಿರ ರೂ. ದಂಡ ವಿಧಿಸಿದೆ. ಜತೆಗೆ ಜಿಲ್ಲಾಕಾನೂನು ಸೇವಾ ಪ್ರಾಧಿಕಾರದಿಂದ ಬಾಲಕಿಗೆ 4 ಲಕ್ಷ ರೂ. ನೀಡುವಂತೆ ಆದೇಶಿಸಿದೆ.

ತೀರ್ಥಹಳ್ಳಿ ತಾಲೂಕಿನ ವ್ಯಕ್ತಿಯೊಬ್ಬ ತನ್ನ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ ಎಂದು 17 ವರ್ಷದ ಅಪ್ರಾಪ್ತೆ ನೀಡಿದ ದೂರಿನ ಮೇರೆಗೆ ಆತನ ವಿರುದ್ಧ ಪೋಕ್ಸೊ ಕಾಯಿದೆಯಡಿ ಪ್ರಕರಣ ದಾಖಲಿಸಲಾಗಿತ್ತು. ಪೊಲೀಸರು ತನಿಖೆ ಕೈಗೊಂಡು ನ್ಯಾಯಾಲಯಕ್ಕೆ ದೋಷಾರೋಪಣೆ ಪತ್ರ ಸಲ್ಲಿಸಿದ್ದರು. ಆರೋಪ ಸಾಬೀತಾದ ಹಿನ್ನೆಲೆ ನ್ಯಾಯಾಧೀಶ ನಿಂಗನಗೌಡ ಭ. ಪಾಟೀಲ್ ಅವರು ಶಿಕ್ಷೆ ವಿಧಿಸಿದ್ದಾರೆ. ಸರಕಾರದ ಪರವಾಗಿ ಸರಕಾರಿ ಅಭಿಯೋಜಕ ಎಚ್. ಆರ್. ಶ್ರೀಧರ್ ವಾದಿಸಿದ್ದರು.

## ಸಂಪುಟದಿಂದ ವಜಾಗೊಂಡರೂ ರಾಜಣ್ಣ ಸೈಲೆಂಟ್ ; ತೆರೆಮರೆಯಲ್ಲಿ ಸಿದ್ದು ಆಪ್ತನ ತಂತ್ರಗಾರಿಕೆ ಏನು?

**ಬೆಂಗಳೂರು:** ಮತಕಳ್ಳತನದ ಕುರಿತಾಗಿ ಕೆ ಎನ್ ರಾಜಣ್ಣ ನೀಡಿದ್ದ ಹೇಳಿಕೆ ಅವರ ಪಾಲಿಗೆ ದುಬಾರಿಯಾಗಿ ಪರಿಣಮಿಸಿದೆ. ಸಚಿವ ಸಂಪುಟದಿಂದ ವಜಾಗೊಂಡರೂ ಸದ್ಯ ರಾಜಣ್ಣ ಸೈಲೆಂಟ್ ಆಗಿದ್ದಾರೆ. ಆದರೆ ತೆರೆಮರೆಯಲ್ಲಿ ಮಾಜಿ ಸಚಿವ ಏನೆಲ್ಲಾ ತಂತ್ರಗಾರಿಕೆ ನಡೆಸುತ್ತಿದ್ದಾರೆ ಎಂಬುವುದು ಸಾಕಷ್ಟು ಕುತೂಹಲಕ್ಕೆ ಎಡೆಮಾಡಿಕೊಟ್ಟಿದೆ.

ಸಿದ್ದರಾಮಯ್ಯ ಪರವಾಗಿ ಗಟ್ಟಿ ಧ್ವನಿಯಲ್ಲಿ ಮಾತನಾಡುತ್ತಿದ್ದ ಕೆ ಎನ್ ರಾಜಣ್ಣ ಅವರು ಡಿಕೆಶಿ ಬಣದ ಕೆಂಗಣ್ಣಿಗೆ ಗುರಿಯಾಗಿದ್ದರು. ರಾಜಣ್ಣ ವಿರುದ್ಧ ಹೈಕಮಾಂಡ್ ನಾಯಕರಿಗೆ ಡಿಕೆಶಿ ಬಣ ದೂರನ್ನು ನೀಡಿತ್ತು. ಈ ನಡುವೆ ರಣದೀಪ್ ಸಿಂಗ್ ಸುರ್ಜೇವಾಲ ಅವರ ವಿರೋಧವನ್ನು ರಾಜಣ್ಣ ಕಟ್ಟಿಕೊಂಡಿದ್ದರು.

ಸಂದರ್ಭ ಕಾಯುತ್ತಿದ್ದ ರಾಜಣ್ಣ ವಿರೋಧಿ ಬಣಕ್ಕೆ ಮತಕಳ್ಳತನದ ಕುರಿತಾದ ಅವರ ಹೇಳಿಕೆ ಬ್ರಹ್ಮಾಸ್ತ್ರವಾಗಿ ದೊರಕಿತ್ತು. ಇದನ್ನೇ ಮುಂದಿಟ್ಟುಕೊಂಡು ಅವರು ಹೈಕಮಾಂಡ್ ನಾಯಕರ ಗಮನಕ್ಕೆ ತಂದಿದ್ದರು. ಇದರಿಂದ ಕೆರಳಿದ ಹೈಕಮಾಂಡ್ ಅಧಿವೇಶನದ ನಡೆಯುತ್ತಿದ್ದ ಸಂದರ್ಭದಲ್ಲೇ ಸಂಪುಟದಿಂದ ವಜಾಗೊಳಿಸಿತ್ತು. ಇಂತಹದೊಂದು ಕಠಿಣ ತೀರ್ಮಾನವನ್ನು ತಡೆಯಲು ಸಿದ್ದರಾಮಯ್ಯ ಅವರಿಂದಲೂ ಸಾಧ್ಯವಾಗಿರಲಿಲ್ಲ.

ಸಂಪುಟದಿಂದ ಅಗೌರವಯುತವಾಗಿ ವಜಾಗೊಂಡರೂ ಕೆ ಎನ್ ರಾಜಣ್ಣ ಬಂಡಾಯ ಸಾರಲಿಲ್ಲ. ವಜಾ ನಿರ್ಧಾರದ ಹಿಂದೆ ಯಾರ ಕೈವಾಡ ಇದೆ ಎಂಬ ಬಗ್ಗೆ ಹೇಳಿಕೆಯನ್ನು ನೀಡಿದ್ದರೂ ಸಿದ್ದರಾಮಯ್ಯ ಅವರ ಪರವಾಗಿ ಮತ್ತೆ ಬ್ಯಾಟಿಂಗ್ ಮಾಡುತ್ತಲೇ ಇದ್ದಾರೆ. ಆದರೆ ತನ್ನ ಮುಂದಿನ ಹೆಜ್ಜೆಯ ಬಗ್ಗೆ ಅವರು ಯಾವುದೇ ಸುಳಿವನ್ನು ಬಿಟ್ಟುಕೊಟ್ಟಿಲ್ಲ.

## ಡಿ.ಜೆ ಬಳಕೆ: ಭಕ್ತಿ ಭಾವದೊಂದಿಗೆ ಸಂಪ್ರದಾಯದ ಥಳಕು.. ನಿಷೇಧ ಉಲ್ಲಂಘನೆಗೂ ಕರೆ...

# ಅಪಾಯಕ್ಕೆ ಆಹ್ವಾನ ನೀಡುವ ಅತಿಯಾದ ಶಬ್ದ

**ದಾವಣಗೆರೆ:** ಗಣೇಶೋತ್ಸವ ಬಂದಾಗಲೆಲ್ಲ ಡಿಸ್ಕ್ ಜಾಕಿ (ಡಿ.ಜೆ) ಕುರಿತ ಚರ್ಚೆ ಮುನ್ನೆಲೆಗೆ ಬರುತ್ತದೆ. ಈ ಬಾರಿ ಜಿಲ್ಲಾಡಳಿತ ಡಿ.ಜೆ ನಿಷೇಧಿಸಿರುವುದ-ರಿಂದ ಆ ಚರ್ಚೆ ತಾರಕಕ್ಕೇರಿದೆ.

ಇತ್ತೀಚಿನ ವರ್ಷಗಳಲ್ಲಿ ಗಣೇಶ ವಿಸರ್ಜನೆ ಸಂದರ್ಭಯುವಜನ ಮೆರವ ಣಿಗೆಯಲ್ಲಿ ಕುಣಿದು ಕುಪ್ಪಳಿಸಲು ಮತ್ತಷ್ಟು ಹುರುಪು ತುಂಬುವ ಸಾಧನವಾಗಿ ಡಿ.ಜೆ* ರೂಪುಗೊಂಡಿದೆ.

ಹುರುಪು ತುಂಬುವುದು ಆ ಕ್ಷಣದ ಉನ್ಮಾದಕ್ಕೆ ಪ್ರೇರಣೆ ಆಗಬಹುದು. ಆದರೆ, ಆ ಡಿ.ಜೆ ಶಬ್ದದಿಂದಾಗಿ ಎದುರಾಗುವ ಆರೋಗ್ಯ ಸಮಸ್ಯೆಗಳಿಗೆ ಲೆಕ್ಕವಿಲ್ಲ ಎಂಬುದೂ ಅಷ್ಟೇ ಸತ್ಯ. ಅಂತೆಯೇ ಕೆಲವರು ಡಿ.ಜೆ.ಬಳಕೆಯನ್ನು ಪುರಸ್ಕರಿಸಿ-ದರೆ ಅನೇಕರು ವಿರೋಧಿಸಿದ್ದಾರೆ.

'ಡಿ.ಜೆ ನಿಷೇಧದಿಂದ ಹಿಂದೂಗಳ ಭಾವನೆಗಳನ್ನು ಕೆಣಕಲಾಗಿದೆ ಎಂದೂ, ಸಂಪ್ರದಾಯಕ್ಕೆ ಅಡಚಣೆ ಉಂಟು ಮಾಡಲಾಗಿದೆ' ಎಂದೂ ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಮತ್ತಿತರರು ಅಭಿಪ್ರಾಯಪಟ್ಟಿದ್ದಾರೆ.

ಆದರೆ, ಃಜಭಿಚಿ ಇತ್ತೀಚಿನ ವರ್ಷಗಳಲ್ಲಿ ಬಳಕೆ ಆಗುತ್ತಿರುವ ಡಿ.ಜೆ, ಹಿಂದೂಗಳ ಸಂಪ್ರದಾಯದ ಭಾಗ ಆಗಿದ್ದು ಯಾವಾಗ? ಎಂಬುದನ್ನೂ ಅವರು ಹೇಳಿಲ್ಲ.

'ಯುವಜನರು ನಿಷೇಧಾಜ್ಞೆಯನ್ನು




ಉಲ್ಲಂಘಿಸುವಂತೆಯೂ ಅವರು ಕರೆ * ಕೊಟ್ಟಿರುವುದು ಅನೇಕ ಯುವಕರನ್ನು

ನಾಗೇಂದ್ರ, ಜಿಲ್ಲಾ ಶಸ್ತ್ರಚಿಕಿತ್ಸಕ

ಉದ್ದೀಪನಗೊಳಿಸುವ ಸಾಧ್ಯತೆಗಳೂ, ಅಪಾಯಗಳೂ ಇರುವುದಂತೂ ದಿಟ' ಎಂಬುದು ಡಿ.ಜೆ.ಯಿಂದ ಕಿರಿಕಿರಿ ಅನು-ಭವಿಸಿದವರ ಅನಿಸಿಕೆಯಾಗಿದೆ.

ಕಳೆದ ವರ್ಷ ನಗರದ ಬೇತೂರು ರಸ್ತೆಯಲ್ಲಿ ಗಣೇಶ ವಿಸರ್ಜನೆ ಮೆರವಣಿಗೆ ಮೇಲೆ ತೂರಾಟದಂತಹ ದುರ್ಘಟನೆ ನಡೆದು, ದ್ವೇಷಮಯ ವಾತಾವರಣ ನಿರ್ಮಾಣ ಆಗಿದ್ದೂ ಈ ಬಾರಿ ಡಿ.ಜೆ ನಿಷೇಧಕ್ಕೆ ಪ್ರಮುಖ ಕಾರಣ. ಡಿ.ಜೆ ಸಂಗೀತ, ನೃತ್ಯ ಈ ದುರ್ಘಟನೆಗೆ ನೇರ ಕಾರಣ ಆಗಿ ಕಾನೂನು ಸುವ್ಯವಸ್ಥೆಗೆ

ಧಕ್ಕೆ ತಂದಿರಲಿಕ್ಕಿಲ್ಲ. ಆದರೂ ಉನ್ಮಾದಕ್ಕೆ ಪ್ರೇರಣೆ ಆಗುವುದಂತೂ ಸತ್ಯ.70 ಡೆಸಿಬಲ್‌ಗಿಂತ ಅಧಿಕ ಪ್ರಮಾಣದ ಶಬ್ದ ಕಿವಿಯ ತಮಟೆಗೆ ಧಕ್ಕೆ ತರುವ ಸಾಧ್ಯತೆ ಇದೆ. ಗಣೇಶ ವಿಸರ್ಜನೆ ಮೆರವಣಿಗೆಯಲ್ಲಿ ಅದರ ಪ್ರಮಾಣ 120ಕ್ಕೂ ಅಧಿಕ ಡೆಸಿಬಲ್ ಅಗಿರುವ ಉದಾಹರಣೆಗಳಿವೆ. ಹಾಗಾಗಿ ಡಿ.ಜೆ ಅಪಾಯಕಾರಿ. ಅನೇಕರ ಶಾಶ್ವತ ಕಿವುಡುತನಕ್ಕೆ ಅದು ಕಾರಣವಾಗಿದೆ. ದುರ್ಬಲ ಹೃದಯ ಇರುವವರಿಗೆ ಹೃದಯಾಘಾತಕ್ಕೂ ಡಿ.ಜಿ ಕಾರಣವಾಗುವ ಅಪಾಯಗಳಿವೆ ಎಂಬುದು

**ಡಿ.ಜೆ ಶಬ್ದ ಖಂಡಿತ ಕಿವಿಗೆ ತೊಂದರೆ ಉಂಟು ಮಾಡುತ್ತದೆ. ಅಧಿಕ ಡೆಸಿಬಲ್ ಸಮಸ್ಯೆ ಆಗಿದ್ದಾಗಿ ಜಿಲ್ಲಾ ಆಸ್ಪತ್ರೆಯಲ್ಲಿ ಶಬ್ದದಿಂದ ಕಿವಿ ಕೇಳಿಸುವಿಕೆಗೆ ಧಕ್ಕೆ ಆಗುತ್ತದೆ. ಆದರೆ, ಡಿ.ಜೆ.ಯಿಂದ ಯಾರೂ ಚಿಕಿತ್ಸೆಗೆ ದಾಖಲಾಗಿಲ್ಲ**

ಕಿವಿ ಮೂಗು ಗಂಟಲು (ಇಎನ್‌ಟಿ) ತಜ್ಞರ ಎಚ್ಚರಿಕೆಯಾಗಿದೆ.'ಕೆಲವರಲ್ಲಿ ಕಿವಿಯ ತಮಟೆ ದಿಢೀರ್ ಹರಿದು ಕಿವುಡುತನ ಕಾಣಿಸಿಕೊಳ್ಳದೇ ಇರಬಹುದು. ಆದರೆ, ಅಧಿಕ ಪ್ರಮಾಣದ ಶಬ್ದಕ್ಕೆ ತೆರೆದುಕೊಂಡರೆ ಅಲ್ಪಸ್ವಲ್ಪ ಪ್ರಮಾಣದ ಕಿವಿಡುತನ ಕಾಣಿಸಿಕೊ-ಳ್ಳುತ್ತದೆ. ಯುವಜನರಿಗೆ ಅದು ತಕ್ಷಣಕ್ಕೆ ಅನುಭವಕ್ಕೆ ಬರುವುದಿಲ್ಲ, ಕಾಲ ಕ್ರಮೇಣ ನ್ಯೂನತೆ ಅನುಭವಕ್ಕೆ ಬರುತ್ತದೆ' ಎಂದೂ ಅವರು ಹೇಳುತ್ತಾರೆ.ಪ್ರಾಣಿ, ಪಕ್ಷಿಗಳಿಗಂತೂ ಡಿಜಿ ಹೊರಹೊಮ್ಮಿಸುವ ಅಧಿಕ ಕಬ್ಬಪ್ರಾಣಕ್ಕೆ ಸಂಚಕಾರ ತಂದೊಡ್ಡುತ್ತದೆ. ವಿಪರೀತ ಪಕ್ಷಿಗಳು, ಬೀದಿ ನಾಯಿ, ಸಾಕು ನಾಯಿ, ಬೆಕ್ಕಿನಂಥ ಸೂಕ್ಷ್ಮ ಪ್ರಾಣಿಗಳಿಗೆ ಸಾಕಷ್ಟು ಸಮಸ್ಯೆ ಆಗುತ್ತದೆ ಎಂದೂ ಅವರು ಕಳಕಳಿ ವ್ಯಕ್ತಪಡಿಸಿದ್ದಾರೆ.

'ಸಾಮಾನ್ಯವಾಗಿ ದೈನಂದಿನ ಚಟುವಟಿಕೆಗಳಲ್ಲಿ ಒಬ್ಬ ವ್ಯಕ್ತಿಯ ಕಿವಿಗಳು ಯಾವುದೇ ತೊಂದರೆಗಳ ಲ್ಲದೆ 70 ಡೆಸಿಬೆಲ್‌ವರೆಗೆ ಶಬ್ದವನ್ನ ಕಿವಿಗಳು ತಾಳಿಕೊಳ್ಳಬಹುದು. 45 ಡೆಸಿಬೆಲ್ ಮೀರಿದ ಶಬ್ದವು ಸತತವಾಗಿ

ಕಿವುಡುತನ, ಕಿವಿಗಳಲ್ಲಿ ವಿಶೇಷ

ಘಂಟೆಗಳನ್ನು ಮೀರಿದರೆ ಕಿವಿಗಳಿಗೆ ಸಮಸ್ಯೆ ಆಗುತ್ತದೆ. 8 ಹೋಗುವ, ರಕ್ತಸ್ರಾವವಾ ಸೇರಿ ಇತರ ಸಮಸ್ಯೆಗಳು ಡಿಜೆಗಳಲ್ಲಿ ಸಾರ್ವಜನಿಕ ಪ್ರದೇಶಗಳಲ್ಲಿ 120 ಡೆಸಿಬೆಲ್‌ಗಿಂತ ಹೆಚ್ಚು ಶಬ್ದವನ್ನೇ ಇಡಬೇಕಾಗುತ್ತದೆ. ಶಬ್ದ ಮಾಲಿನ್ಯದ ಜೊತೆಗೆ ಕಿವಿಗಳ ಆರೋಗ್ಯದ ಸಮಸ್ಯೆ ಉಂಟಾಗುತ್ತದೆ' ಎಂದು ಜಿಲ್ಲಾ ಸರ್ವೇ ಕ್ಷಣಾಧಿಕಾರಿ ಡಾ.ರಾಘವನ್ ತಿಳಿಸಿದ್ದಾರೆ

**ಪೊಲೀಸ್ ಇಲಾಖೆ ವರದಿ ಆಧರಿಸಿ ಡಿ.ಜೆ ನಿಷೇಧಿಸಲಾಗಿದೆ. ದಾವಣಗೆರೆ ಜಿಲ್ಲೆ ಮಾತ್ರವಲ್ಲದೆ, ಬೆಂಗಳೂರು ಸೇರಿ ಪಕ್ಕದ ಅನೇಕ ಜಿಲ್ಲೆಗಳಲ್ಲೂ ಡಿ.ಜಿಗೆ ನಿಷೇಧ ಹೇರಲಾಗಿದೆ. ಪೆಂಡಾಲ್, ಮೈಕ್, ಲೈಟಿಂಗ್‌ಗಳ ಬಳಕೆ ಮೇಲೆ ನಿಷೇಧ ಹೇರಲಾಗಿಲ್ಲ ಜಿ.ಎಂ. ಗಂಗಾಧರಸ್ವಾಮಿ, ಜಿಲ್ಲಾಧಿಕಾರಿ**

## ಮೀನುಗಾರಿಕೆ ಇಲಾಖೆಯಿಂದ ನೆರವಿಗೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** 2025-26ನೇ ಸಾಲಿನ ಮೀನುಗಾರಿಕೆ ಇಲಾಖೆ ವತಿಯಿಂದ ರಾಜ್ಯವಲಯ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಗಳಡಿ ನೆರವು ನೀಡಲು ಅರ್ಜಿ ಅಹ್ವಾನಿಸಲಾಗಿದೆ.ಮೀನುಗಾರರಿಗೆ ನಾಲ್ಕು ಚಕ್ರ ವಾಹನ ಖರೀದಿಸಲು ಶೇ.50 ರಷ್ಟು ಅಥವಾ ಗರಿಷ್ಠ ರೂ. 3 ಲಕ್ಷ ಆರ್ಥಿಕ ನೆರವು ನೀಡಲಾಗುವುದು. ಜಿಲ್ಲೆಗೆ ಪ.ಜಾತಿ-2 ಮತ್ತು ಪ.ಪಂಗಡ-1 ಗುರಿ ನಿಗದಿಪಡಿಸಲಾಗಿದೆ. ಅರ್ಜಿಯನ್ನು ಸೆಪ್ಟೆಂಬರ್ 10 ರೊಳಗೆ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು (ಚಿಕ್ಕಮಗಳೂರು, ಮೂಡಿಗೆರೆ: 8217096041, ಕಡೂರು: 9481050325, ತರೀಕೆರೆ: 9449363007 ನರಸಿಂಹರಾಜಪುರ, ಕೊಪ್ಪ, ಶೃಂಗೇರಿ:7411174772) ಗಳನ್ನು ಸಂಪರ್ಕಿಸಲು ಮತ್ತು ಅರ್ಜಿ ಸಲ್ಲಿಸುವಂತೆ ಮೀನುಗಾರಿಕೆ ಉಪನಿರ್ದೇಶಕರು(ಜಿ.ಪಂ.) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಮ್ವೇ ನ್ಯೂಟ್ರಿಲೈಟ್‌ಗೆ ಎನ್ ಎಫ್ ಎಸ್‌ಯು ಮನ್ನಣೆ

**ಬಳ್ಳಾರಿ:** ಆಮ್ವೇಯ ಜನಪ್ರಿಯ ಆರೋಗ್ಯ ಮತ್ತು ಯೋಗಕ್ಷೇಮ ಬ್ರ್ಯಾಂಡ್ ನ್ಯೂಟ್ರಿಲೈಟ್ ಪ್ರತಿಷ್ಠಿತ ವಿಶ್ವಾಸಾರ್ಹ ಪ್ರಮಾಣೀಕರಣ ಕಾರ್ಯಕ್ರಮದ ಅಡಿಯಲ್ಲಿ ರಾಷ್ಟ್ರೀಯ ವಿಧಿವಿಜ್ಞಾನ ವಿಶ್ವವಿದ್ಯಾಲಯ (ಎನ್ ಎಫ್ ಎಸ್ ಯು)ದಿಂದ ಮನ್ನಣೆ ಪಡೆದಿದೆ. ಕ್ರೀಡಾಪಟುಗಳಿಗೆ ಪೌಷ್ಟಿಕಾಂಶ ಪೂರಕ ಪರೀಕ್ಷೆಯ ವಿಶ್ವಾಸಾರ್ಹ ಉತ್ಪನ್ನ ಎಂದು ಪರಿಗಣಿಸಲ್ಪಟ್ಟಿದೆ. ಈ ಮನ್ನಣೆಯು ಅತ್ಯಧಿಕ ಗುಣಮಟ್ಟದ, ಸುರಕ್ಷಿತ ಮತ್ತು ವೈಜ್ಞಾನಿಕವಾಗಿ ಬೆಂಬಲಿತ ಪೋಷಣೆಯುಕ್ತ ಉತ್ಪನ್ನಗಳನ್ನು ಒದಗಿಸುವ ಆಮ್ವೇ ಬದ್ಧತೆಯನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಆಮ್ವೇ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕರಾದ ರಜನೀಶ್ ಚೋಪ್ರಾ ಹೇಳಿದ್ದಾರೆ.

ಗುಜರಾತಿನ ಎನ್ ಎಫ್ ಎಸ್ ಯು ನಲ್ಲಿರುವ ಕ್ರೀಡಾ ಪೌಷ್ಠಿಕಾಂಶ ಪೂರಕಗಳನ್ನು ಪರೀಕ್ಷಿಸಲು ಸರ್ಕಾರದಿಂದ ಮಾನ್ಯತೆ ಪಡೆದ ಸೌಲಭ್ಯವಾದ ಸೆಂಟರ್ ಆಫ್ ಎಕ್ಸಲೆನ್ಸ್ - ನ್ಯಾಷನಲ್ ಸಪ್ಲಿಮೆಂಟ್ ಟೆಸ್ಟಿಂಗ್ ಫಾರ್ ಸ್ಪೋರ್ಪರ್ಸನ್ಸ್ ಈ ವಿಶ್ವಾಸಾರ್ಹ ಮನ್ನಣೆ ನೀಡಿದೆ.ಗೃಹ ಸಚಿವಾಲಯ, ಎನ್ ಎಫ್ ಎಸ್ ಯು ಮತ್ತು ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯದ ತ್ರಿಪಕ್ಷೀಯ ಒಪ್ಪಂದದ ಅಡಿಯಲ್ಲಿ ಸ್ಥಾಪನೆಯಾದ ಇದು ವಾಡಾ ನಿಷೇಧಿತ ವಸ್ತುಗಳ ವಿರುದ್ಧ ಸುಧಾರಿತ ವಿಶ್ಲೇಷಣಾತ್ಮಕ ಮತ್ತು ಬ್ಯಾಚ್-ವಾರು ಪರೀಕ್ಷೆಯನ್ನು ನಡೆಸುತ್ತದೆ.ಇದು ವಿಶ್ವ ಡೋಪಿಂಗ್ ವಿರೋಧಿ ಸಂಸ್ಥೆ (ವಾಡಾ) ನಿಗದಿಪಡಿಸಿದ ಅಂತರರಾಷ್ಟ್ರೀಯ ಮಾನದಂಡಗಳನ್ನು ಅನುಸರಿಸುತ್ತವೆ. ಈ ಉತ್ಪನ್ನ ಶ್ರೇಣಿಯಲ್ಲಿ ನ್ಯೂಟ್ರಿಲೈಟ್ ಆಲ್ ಪ್ಲಾಂಟ್ ಪ್ರೋಟೀನ್, ನ್ಯೂಟ್ರಿಲೈಟ್ ಕ್ಯಾಲ್ ಮ್ಯಾಗ್ ಡಿ ಪ್ಲಸ್ ಕೆ2, ಬೋಸ್ವೆಲಿಯಾ ಜೊತೆ ನ್ಯೂಟ್ರಿಲೈಟ್ ಗ್ಲುಕೋಸಮೈನ್ ಎಲ್‌ಸಿಎಲ್, ನ್ಯೂಟ್ರಿಲೈಟ್ ಸಾಲ್ಮನ್ ಒಮೆಗಾ 3 ಸಾಫ್ಟ್‌ಜೆಲ್‌ಗಳು ಮತ್ತು ನ್ಯೂಟ್ರಿಲೈಟ್ ಡೈಲಿ ಪ್ಲಸ್ ಸೇರಿದೆ ಎಂದು ತಿಳಿಸಿದ್ದಾರೆ.

# ಜೆಡಿಎಸ್ ಪಕ್ಷದಿಂದ ಧರ್ಮಸ್ಥಳಕ್ಕೆ ನೂರಾರು ಕಾರ್ಯಕರ್ತರ ಸತ್ಯಯಾತ್ರೆ

**ಚಿಕ್ಕಮಗಳೂರು:** ಜೆಡಿಎಸ್ ಪಕ್ಷದಿಂದ ಧರ್ಮಸ್ಥಳಕ್ಕೆ ನೂರಾರುಕಾರ್ಯಕರ್ತರು ಭಾನುವಾರ ನಗರದಿಂದ ಸತ್ಯಯಾತ್ರೆ ಆರಂಭಿಸಿದರು.

ಕಡೂರು, ತರೀಕರೆ ಹಾಗೂ ಚಿಕ್ಕಮಗಳೂರು ತಾಲೂಕಿನಿಂದ ಆಗಮಿಸಿದ್ದ ನೂರಾರುಕಾರ್ಯಕರ್ತರುಕೇಸರಿ ಶಲ್ಯ ಧರಿಸಿ ನಗದಜೆಡಿಎಸ್‌ಕಚೇರಿ ಮುಂದೆ ಸಮಾವೇಶಗೆ ಉಂಡುಅಲ್ಲಿಂದಯಾತ್ರೆ ಆರಂಭಿಸಿದರು.

ಯಾತ್ರೆಗೂ ಮುನ್ನಜೆಡಿಎಸ್ ಮುಖಂಡ, ವಿಧಾನಪರಿಷತ್ ಸದಸ್ಯ ಎಸ್.ಎಲ್.ಬೋಜೇಗೌಡ ಮಾತನಾಡಿ, ನಮ್ಮೆಲ್ಲರಆರಾಧ್ಯದೈವ ಶ್ರೀಮಂಜುನಾಥ, ಶ್ರೀಅಣ್ಣಪ್ಪಸ್ವಾಮಿ ಹಾಗೂ ಅಲ್ಲಿನಖಾವಂದರ ಬಗ್ಗೆ ಅಪಾರ ನಂಬಿಕೆ ಇದೆ. ಖಾವಂದರು ಸಮಾಜ ಸೇವೆಯಲ್ಲಿತಮ್ಮನ್ನುತಾವು ತೊಡಗಿಸಿಕೊಂಡು ಸರಕಾರ ಮಾಡದ ಕೆಲಸವನ್ನು ಮಾಡುತ್ತಿದ್ದಾರೆ.ಅವರನ್ನುದೈವ ಸ್ವರೂಪದಲ್ಲಿ ನಾವು ನೋಡುತ್ತಿದ್ದೇವೆ. ಇಂತಹವರಿಗೆ , ಧರ್ಮಸ್ಥಳಕ್ಕೆ ಅಪಚಾರ ನಡೆಯುತ್ತಿರುವುದನ್ನುನಾವು ಸಹಿಸುವುದಿಲ್ಲ.



ಈ ಸಂದರ್ಭಆಖವಂದರ ಮತ್ತು ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಷಡ್ಯಂತ್ರದ ವಿರುದ್ಧಅವರಿಗೆ ನೈತಿಕ ಬೆಂಬಲ ನೀಡುವಉದ್ದೇಶದಿಂದ ಧರ್ಮಸ್ಥಳಕ್ಕೆ ಯಾತ್ರೆ ಹಮ್ಮಿಕೊಂಡಿರುವುದಾಗಿ ತಿಳಿಸಿದರು.

ನಗರಸಭೆ ಸದಸ್ಯ ಎ.ಸಿ.ಕುಮಾರೇಗೌಡ ಮಾತನಾಡಿ,ಚಿಕ್ಕಮಗಳೂರಿನಿಂದ ಧರ್ಮಸ್ಥಳಕ್ಕೆ ಧರ್ಮಯಾತ್ರೆ ಹೊರಟಿದ್ದೇವೆ. ಅಲ್ಲಿಆಗಿರುವ ವಿಚಾರಗಳಿಗೆ ನ್ಯಾಯದೊರೆಯುವ ಸಮಯ ಸನ್ನಿಹಿತವಾಗುತ್ತಿದೆ. ಧರ್ಮಸ್ಥಳಕ್ಕೆಚ್ಯುತಿ ಬರುವ ಕೆಲಸ ಆಗಬಾರದು. ಹೀಗಾಗಿ ನೂರಾರು ಮಂದಿ ಇಂದು ಧರ್ಮಸ್ಥಳಕ್ಕೆ ಯಾತ್ರೆ ಹೊರಟಿದ್ದೇವೆಎಂದರು. ನಗರಸಭೆಅಧ್ಯಕ್ಷೆ ಶೀಲಾದಿನೇಶ್, ಸದಸ್ಯ ದಿನೇಶ್, ಮುಖಂಡರಾದ ನಿತೇಶ್ ಬೋಜೇಗೌಡ, ಸೋನಾಲ್‌ಧರ್ಮೇಗೌಡ, , ಸಿ.ಕೆ ಮೂರ್ತಿ, ಆನಂದನಾಯ್ಕ, ಶಿವಾನಂದ , ಚೇತನ್, ಮಂಜು ಮತ್ತಿತರರಿದ್ದರು.

# ಜೈ ಹನುಮಾನ್ ಯುವಕ ಸಂಘದ 27ನೇ ವರ್ಷದ ಗಣೇಶೋತ್ಸವದ ಕಾರ್ಯಕ್ರಮಗಳು

**ಗದಗ :** ನಗರದ ಜೈ ಹನುಮಾನ್ ಯುವಕ ಸಂಘ ಹಾಗೂ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿ ಹಾಗೂ ಕಾಶಿ ವಿಶ್ವನಾಥ ದೇವಸ್ಥಾನ ವಿವೇಕಾನಂದ ನಗರ ಇವರ ಸಹಯೋಗದಲ್ಲಿ 27ನೇ ವರ್ಷದ ಗಣೇಶೋತ್ಸವ ಪ್ರಯುಕ್ತ ಇದೇ ಆಗಷ್ಟ 31 ರವಿವಾರ ಬೆಳಿಗ್ಗೆ 10.30 ಗಂಟೆಗೆ ಮಹಿಳೆಯರಿಗಾಗಿ ವಿವಿಧ ಸ್ಪರ್ಧಾತ್ಮಕ ಕಾರ್ಯಕ್ರಮ ನಡೆಯಲಿದೆ.

ಸೆ. 1 ರಂದು ಸೋಮವಾರ ಸಂಜೆ 5 ಗಂಟೆಗೆ ಕಾರ್ತಿಕೋತ್ಸವ ಹಾಗೂ ಸಸಿ ವಿತರಣಾ ಕಾರ್ಯಕ್ರಮ ನಡೆಯಲಿದೆ. ಸೆ. 2 ರಂದು ಮಂಗಳವಾರ ಬೆಳಿಗ್ಗೆ 8 ಗಂಟೆಗೆ



ಸತ್ಯನಾರಾಯಣ ಪೂಜೆ ಡಾ.ಪಂ. ಪುಟ್ಟರಾಜ ಗವಾಯಿಗಳವರ ಪುಣ್ಯ ಸ್ಮರಣೋತ್ಸವ ಹಾಗೂ ಮಧ್ಯಾಹ್ನ 12.30 ಪ್ರಸಾದ ಸೇವೆ ನಡೆಯಲಿದೆ.

ಸೆ. 3 ರಂದು ಬುಧವಾರ ಸಂಜೆ 5 ಗಂಟೆಗೆ ಸನ್ಮಾನ, ಬಹುಮಾನ ವಿತರಣೆ ಕಾರ್ಯಕ್ರಮ ಜರುಗಲಿದೆ. ಸೆ. 4 ಗುರುವಾರ ಸಂಜೆ 4 ಗಂಟೆಗೆ ಗಣೇಶನ ಮಹಾಪೂಜೆಯೊಂದಿಗೆ ಗಣೇಶನ ಮೂರ್ತಿಯನ್ನು ಭವ್ಯ ಮೆರವಣಿಯೊಂದಿಗೆ ವಿಸರ್ಜನೆ ಕಾರ್ಯಕ್ರಮ ನಡೆಯಲಿದೆ ಎಂದು ಸಂಘಟಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶೇಷ ಆಧಾರ್ ಸೀಡಿಂಗ್ ಅಭಿಯಾನ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ 2024-25ನೇ ಸಾಲಿನ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ತಂತ್ರಾಂಶದ (SSP) ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, (DBT) ತಂತ್ರಾಂಶದ ಮೂಲಕ ಅರ್ಹ ವಿದ್ಯಾರ್ಥಿಗಳ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ನೇರವಾಗಿ ವಿದ್ಯಾರ್ಥಿವೇತನ ಪಾವತಿಸಲಾಗುತ್ತಿದೆ. ವಿದ್ಯಾರ್ಥಿವೇತನ ಮಂಜೂರು ಮಾಡುವ ಸಲುವಾಗಿ ಆಧಾರ್ ಸೀಡಿಂಗ್ ಆಗದೇ ಇರುವ ಎಲ್ಲಾ ಅರ್ಹ ವಿದ್ಯಾರ್ಥಿಗಳು ಆಧಾರ್ ಸೀಡಿಂಗ್ ಮಾಡಿಸಿಕೊಳ್ಳಲು ಸೆ.07 ರವರೆಗೆ ವಿಶೇಷ ಆಧಾರ್ ಸೀಡಿಂಗ್ ಅಭಿಯಾನವನ್ನು ತಾಲ್ಲೂಕು ಮಟ್ಟದಲ್ಲಿ ಹಮ್ಮಿಕೊಳ್ಳಲಾಗಿದ್ದು, ಸೆ.07 ರ ಒಳಗಾಗಿ ಅರ್ಹ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಎಸ್.ಜಿ. ಶ್ರೀನಿವಾಸ್ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ ಶಿವಮೊಗ್ಗ ಮತ್ತು ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಸಹಾಯಕ ನಿರ್ದೇಶಕರ ಕಛೇರಿ, ಸಮಾಜ ಕಲ್ಯಾಣ ಇಲಾಖೆಗಳನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸುವುದು.

## ಜನ ಸಂಪರ್ಕ ಸಭೆ

**ಶಿವಮೊಗ್ಗ:** ಭದ್ರಾವತಿ ಮೆಸ್ಕಾಂ ಗ್ರಾಮೀಣ ಉಪವಿಭಾಗ ಕಛೇರಿಯಲ್ಲಿ ಸೆ. 02 ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನಸಂಪರ್ಕ ಸಭೆ ನಡೆಯಲಿದೆ. ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಗ್ರಾಹಕರು ಈ ಅವಕಾಶದ ಸದುಪಯೋಗಪಡೆದುಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ: 9448289507.

## ಕಾರ್ಯಾಗಾರ

**ಚಿಕ್ಕಮಗಳೂರು:** ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಬೆಂಗಳೂರಿನ ಕರ್ನಾಟಕ ತಾಂತ್ರಿಕ ಸಲಹಾ ಸೇವಾ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ TReDs for MSME's Under RAMP Scheme ಒಂದು ದಿನದ ಕಾರ್ಯಾಗಾರವನ್ನು ನಗರದ ಬಸವನಹಳ್ಳಿ ಮುಖ್ಯರಸ್ತೆಯ ಹೋಟೆಲ್ ಕ್ರಿಸ್ಟಲ್ ಇನ್‌ನಲ್ಲಿ ಸೆಪ್ಟಂಬರ್ 8 ರಂದು ಬೆಳಿಗ್ಗೆ 10 ಗಂಟೆಗೆ ಆಯೋಜಿಸಲಾಗಿದೆ. Google form <https://forms.gle/65rDLS6nC6eXCMSGA>ರಲ್ಲಿ ಕಾರ್ಯಾಗಾರದಲ್ಲಿ ಭಾಗವಹಿಸುವ ಉದ್ದಿಮೆದಾರರು ತಮ್ಮ ವಿವರ ನೋಂದಾಯಿಸಿಕೊಳ್ಳಬಹುದು.

## ಜಿಲ್ಲಾ ತಂಬಾಕು ನಿಷೇಧ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ

# ಕೋಟ್ಪಾ ಕಾಯ್ದೆ ಪರಿಣಾಮಕಾರಿ ಅನುಷ್ಠಾನಕ್ಕೆ ಜಿಲ್ಲಾಧಿಕಾರಿ ಕರೆ



**ಗದಗ :** ಜಿಲ್ಲೆಯಲ್ಲಿ ಕೊಟ್ಪಾ ಕಾಯ್ದೆ ಪರಿಣಾಮಕಾರಿಯಾಗಿ ಅನುಷ್ಠಾನವಾಗಬೇಕು. ಕೊಟ್ಪಾ ಕಾಯ್ದೆ ಉಲ್ಲಂಘನೆಯಾದಲ್ಲಿ ಅಂತಹ ಅಂಗಡಿಗಳ ಪರವಾನಿಗೆಯನ್ನು ರದ್ದುಗೊಳಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಜಿಲ್ಲಾ ತಂಬಾಕು ನಿಷೇಧ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕೋಟ್ಪಾ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ಕೋಟ್ಪಾ ಕಾಯ್ದೆ ಪ್ರಕಾರ ಶಿಕ್ಷಣ ಸಂಸ್ಥೆಗಳ 100 ಗಜದ ಸುತ್ತಳತೆಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ಶಿಕ್ಷಾರ್ಹ ಅಪರಾಧವಾಗಿದ್ದು, ಶಾಲಾ/ಕಾಲೇಜು ಹಾಗೂ ಶಿಕ್ಷಣ ಸಂಸ್ಥೆಗಳ ಆವರಣದಿಂದ 100 ಗಜದಲ್ಲಿ ತಂಬಾಕು ಮಾರಾಟವಾಗುತ್ತಿದ್ದರೆ ಅಗತ್ಯ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ಎಲ್ಲಾ ಅಂಗಡಿ ಮುಂಗಟ್ಟುಗಳ ಮುಂದೆ ಧೂಮಪಾನ ನಿಷೇಧ ಹಾಗೂ 21 ವರ್ಷದೊಳಗಿನವರಿಗೆ ತಂಬಾಕು ನಿಷೇಧ ಕುರಿತ ನಾಮಫಲಕ ಬಿತ್ತರಿಸುವುದು ಅಂಗಡಿ ಮಾಲಿಕರ ಸ್ಥಳದ ಮುಖ್ಯಸ್ಥರ ಜವಾಬ್ದಾರಿಯೂ ಆಗಿರುತ್ತದೆ. ಕೋಟ್ಪಾ ಕಾಯ್ದೆ ಉಲ್ಲಂಘನೆಯಾದಲ್ಲಿ ಅಂತಹ ಅಂಗಡಿಗಳ ಪರವಾನಿಗೆಯನ್ನು ರದ್ದುಗೊಳಿಸಿ ಕಾನೂನು ರೀತಿ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಎನ್.ಟಿ.ಸಿ.ಪಿ. ಕಾರ್ಯಕ್ರಮಾಧಿಕಾರಿ ಡಾ.ವೆಂಕಟೇಶ ರಾಥೋಡ್ ಅವರು ಮಾತನಾಡಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಗದಗದಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳ ಕುರಿತು ವಿವರಿಸುತ್ತಾ ಜಿಲ್ಲೆಯಲ್ಲಿ ಜಿಲ್ಲಾ ತಂಬಾಕು ನಿಷೇಧ ಕೋಶದಿಂದ 18 ದಾಳಿ ನಡೆಸಿ 219 ಪ್ರಕರಣ ದಾಖಲಿಸಿ 35,000/-ದಂಡ ಸಂಗ್ರಹಿಸಲಾಗಿದೆ. ಪೊಲೀಸ ಇಲಾಖೆಯಿಂದ ಒಟ್ಟು 1381 ಪ್ರಕರಣ ದಾಖಲಿಸಿ ರೂ.121550 ದಂಡ ಸಂಗ್ರಹಿಸಲಾಗಿದೆ. ಜಿಲ್ಲೆಯ 11 ಗ್ರಾಮಗಳಲ್ಲಿ ಪ್ರಾಥಮಿಕ ಸಭೆ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ . ಜಿಲ್ಲಾ ತಂಬಾಕು ನಿಷೇಧ ಕೋಶದಿಂದ 28 ಶಾಲೆ/ ಕಾಲೇಜುಗಳನ್ನು ತಂಬಾಕು ಮುಕ್ತ ಶಿಕ್ಷಣ ಸಂಸ್ಥೆ ಘೋಷಣೆ ಪ್ರಕ್ರಿಯೆ ಮಾಡಲಾಗಿದೆ ಎಂದು ವಿವರಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಡಿವೈಎಸ್‌ಪಿ ಮಹಾಂತೇಶ್ ಸಜ್ಜನರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್. ಎಸ್.ನೀಲಗುಂದ, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ.ಮೀನಾಕ್ಷಿ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ಕೆ. ಭಜಂತ್ರಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಿ.ಸಿ.ಕರಿಗೌಡ್ರ, ಡಾ.ರಾಜೇಂದ್ರ ಬಸರಿಗಿಡದ, ಡಾ. ಅರುಂಧತಿ ಕುಲಕರ್ಣಿ, ತಾಲೂಕು ಆರೋಗ್ಯಾಧಿಕಾರಿಗಳು, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಲಹೆಗಾರರಾದ ಗೋಪಾಲ ಸುರಪುರ, ಮತ್ತಿತರರು ಇದ್ದರು

## ದಿಯಾ ಪೀರಸಾಬ್ ಕೌತಾಳ ಅವರಿಗೆ ಜೂನಿಯರ್ ಪರೀಕ್ಷೆಯಲ್ಲಿ ದ್ವಿತೀಯ ಸ್ಥಾನ



**ಗದಗ :** ಕರ್ನಾಟಕ ರಾಜ್ಯ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ ಮೈಸೂರು ಇವರು ನಡೆಸುವ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಹಾರ್ಮೋನಿಯಂ ವಾದ್ಯದ ಜೂನಿಯರ್ ಪರೀಕ್ಷೆಯಲ್ಲಿ ನಗರದ ಕುಮಾರೇಶ್ವರ ಕೃಪಾ ಪೋಷಿತ ಪಂ. ಪಂಚಾಕ್ಷರಿ ಗವಾಯಿಗಳ ಸಂಗೀತ ಪಾಠಶಾಲೆಯ ವಿದ್ಯಾರ್ಥಿನಿ ಕು. ದಿಯಾ ಪೀರಸಾಬ್ ಕೌತಾಳ ಅವರು ವಿದುಷಿ ಗಂಗೂಬಾಯಿ ಹಾನಗಲ್ ಸಂಗೀತ ವಿಶ್ವವಿದ್ಯಾಲಯಕ್ಕೆ ದ್ವಿತೀಯ ಸ್ಥಾನ ಮತ್ತು ಗದಗ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ.

ಕರ್ನಾಟಕ ರಾಜ್ಯ ವಾಯುವ್ಯ ರಸ್ತೆ ಸಾರಿಗೆ ನಿಗಮದ ಉಪಾಧ್ಯಕ್ಷರಾದ ಪೀರಸಾಬ್ ಕೌತಾಳ ಅವರ ಪುತ್ರಿಯಾಗಿರುವ ದಿಯಾ ಕೌತಾಳ ಅವರಿಗೆ ಮೈಸೂರ ವಿಶ್ವವಿದ್ಯಾಲಯ ಸಭಾಂಗಣದಲ್ಲಿ ನಡೆದ ಪ್ರಮಾಣ ಪತ್ರ ಪ್ರಧಾನ ಸಮಾರಂಭದಲ್ಲಿ ಕುಲಪತಿಗಳಾದ ಪ್ರೋ. ನಾಗೇಶ ಬೆಟ್ಟಕೊಡೆ, ಅಂತರರಾಷ್ಟ್ರೀಯ ವಾಯಲಿನ್ ವಾದಕರು ಮತ್ತು ಸಂಗೀತ ವಿದ್ವಾಂಸರಾದ ಡಾ. ಮೈಸೂರು ಮಂಜುನಾಥ ಅವರು ಪ್ರಮಾಣ ಪತ್ರ ನೀಡಿದರು.

ಕು. ದಿಯಾ ಕೌತಾಳ ಅವರು ಸಂಗೀತದಲ್ಲಿ ಸಾಧನೆ ಮಾಡುವ ಮೂಲಕ ಗದಗ ಜಿಲ್ಲೆಗೆ ಹಾಗೂ ಕುಮಾರೇಶ್ವರ ಕೃಪಾ ಪೋಷಿತ ಪಂ. ಪಂಚಾಕ್ಷರಿ ಗವಾಯಿಗಳ ಸಂಗೀತ ಪಾಠ ಶಾಲೆಗೆ ಕೀರ್ತಿ ತಂದಿದ್ದಾರೆ.

## ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಹಾಸನ :** ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯನ್ನು 7-10-2025 ರಂದು ರಾಜ್ಯ ಮಟ್ಟದಲ್ಲಿ ಆಚರಿಸುತ್ತಿರುವುದರಿಂದ ಈ ಜಯಂತಿ ಅಂಗವಾಗಿ ಪ.ಪಂಗಡದ ಜನಾಂಗದ ಏಳಿಗೆಗಾಗಿ ಶ್ರಮಿಸಿದ ವ್ಯಕ್ತಿಗಳಿಗೆ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಯನ್ನು ನೀಡಲು ಸರ್ಕಾರ ನಿರ್ಧರಿಸಿದ್ದು, ಸದರಿ ಪ್ರಶಸ್ತಿಗಾಗಿ ಅರ್ಹ ವ್ಯಕ್ತಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಪ್ರಶಿಸ್ತಿಗಾಗಿ ಅರ್ಜಿ ಸಲ್ಲಿಸಲು ದಿನಾಂಕ 10-9-2025 ಕೊನೆಯ ದಿನಾಂಕವಾಗಿದ್ದು, ಈ ಅವಧಿಯೊಳಗೆ ಈ ಕಚೇರಿಯಿಂದ ಮಾರ್ಗಸೂಚಿ ಮತ್ತು ಅರ್ಜಿ ನಮೂನೆಗಳನ್ನು ಪಡೆದು ಅರ್ಜಿ ಸಲ್ಲಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

# ಡಿಜೆ ಸಿಸ್ಟಂ ಹೊತ್ತ ಲಾರಿ ಸೀಜ್

**ದಾವಣಗೆರೆ:** ಗಣೇಶೋತ್ಸವ ಮೆರವಣಿಗೆಯಲ್ಲಿ ಡಿಜೆ ಸೌಂಡ್ ಸಿಸ್ಟಂ ಬಳಕೆಯನ್ನು ಜಿಲ್ಲಾಡಳಿತ ನಿಷೇಧಿಸಿದ್ದರೂ, ನಿಯಮ ಉಲ್ಲಂಘಿಸಿ ಸಾರ್ವಜನಿಕರಿಗೆ ತೊಂದರೆ ಉಂಟು ಮಾಡುತ್ತಿದ್ದ ಡಿಜೆ ಸಿಸ್ಟಂ ಹೊತ್ತ ಲಾರಿಯನ್ನು ದಾವಣಗೆರೆ ಗ್ರಾಮಾಂತರ ಪೊಲೀಸರು ವಶಪಡಿಸಿಕೊಂಡು, ಮೂವರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

ಶನಿವಾರ ಮಧ್ಯರಾತ್ರಿ ಬಸವನಾಳು ಗೊಲ್ಲರಹಟ್ಟಿಯಲ್ಲಿ ಗಣೇಶ ಮೆರವಣಿಗೆಯ ಸಂದರ್ಭದಲ್ಲಿ ಡಿಜೆ ಸೌಂಡ್ ಸಿಸ್ಟಂ ಇರುವ ಲಾರಿ ಸಂಚರಿಸುತ್ತಿದೆ ಎಂದು ಪೊಲೀಸರಿಗೆ ಮಾಹಿತಿ ಲಭಿಸಿದೆ. ಕೂಡಲೇ ಕಾರ್ಯಪ್ರವೃತ್ತರಾದ ಪೊಲೀಸರು, ಸ್ಥಳಕ್ಕೆ ತೆರಳಿ ಪರಿಶೀಲಿಸಿದಾಗ, ಜಿಲ್ಲಾಧಿಕಾರಿಗಳ ಆದೇಶವನ್ನು ಉಲ್ಲಂಘಿಸಿ ಡಿಜೆ ಸೌಂಡ್ ಸಿಸ್ಟಂ ಬಳಸುತ್ತಿರುವುದು ಕಂಡುಬಂದಿದೆ.

# ಗಾಂಧಿ ಜಯಂತಿ ಪ್ರಯುಕ್ತ ರಾಜ್ಯಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ

**ಚಿಕ್ಕಮಗಳೂರು, ಸೆ.1:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 156ನೇ ಜಯಂತಿಯ ದಿನಾಚರಣೆ–ಯ ಅಂಗವಾಗಿ ವಿದ್ಯಾರ್ಥಿ ಹಾಗೂ ಯುವಜನರಲ್ಲಿ ಮಹಾತ್ಮ ಗಾಂಧೀಜಿಯವರ ಬದುಕು. ಸ್ವಾತಂತ್ರ್ಯ ಚಳುವಳಿ. ಸರಳತೆ, ಅಹಿಂಸಾ ಮಾರ್ಗ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಇತ್ಯಾದಿ ವಿಚಾರಗಳ ಬಗ್ಗೆ ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ–ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ.

ವಿವಿಧ ವಿಷಯಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ–ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ವಿಭಾಗಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಆಯೋಜಿಸಲು ಉದ್ದೇಶಿಸಿದೆ.

ವಿಜೇತರಿಗೆ ಜಿಲ್ಲಾಮಟ್ಟದಲ್ಲಿ ಪ್ರಥಮ ರೂ. 3 ಸಾವಿರ, ದ್ವಿತೀಯ ರೂ. 2 ಸಾವಿರ ಮತ್ತು ತೃತೀಯ ರೂ.1 ಸಾವಿರ ಬಹುಮಾನ, ರಾಜ್ಯಮಟ್ಟದಲ್ಲಿ ಪ್ರಥಮ ರೂ.31 ಸಾವಿರ, ದ್ವಿತೀಯ ರೂ.21 ಸಾವಿರ ಮತ್ತು ತೃತೀಯ ರೂ.11 ಸಾವಿರ ಬಹುಮಾನ ಹಾಗೂ ನೀಡಲಾಗುವುದು.

ಪ್ರೌಢಶಾಲಾ ವಿಭಾಗದಲ್ಲಿ ಸ್ವಚ್ಛತೆಯ ಪಾಠ – ಗಾಂಧೀಜಿಯವರ ಸಂದೇಶ, ಮಕ್ಕಳ ಭವಿಷ್ಯ ನಿರ್ಮಾಣದಲ್ಲಿ ಗಾಂಧೀಜಿಯವರ ಪಾತ್ರ. ಗಾಂಧೀಜಿಯವರ ಸ್ವಾತಂತ್ರ್ಯದ ಕನಸು–ನನ್ನ ಕಲ್ಪನೆ. ಈ ವಿಭಾಗದ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 700 ರಿಂದ 800 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು.

ಪದವಿ ಪೂರ್ವ ಶಿಕ್ಷಣ ವಿಭಾಗದಲ್ಲಿ ಅಸ್ಪೃಶ್ಯತೆ ನಿವಾರಣೆಯಲ್ಲಿ ಗಾಂಧೀಜಿಯವರ ಹೋರಾಟ, ಇಂದಿನ ಸಮಾಜದಲ್ಲಿ ಸರ್ವೋದಯ ಮತ್ತು ಅಂತ್ಯೋದಯದ ಪ್ರಾಸಂಗಿಕತೆ, ಬದಲಾವಣೆ ನನ್ನಿಂದಲೇ ಆರಂಭ–ಗಾಂಧೀಜಿಯವರ ಪಾಠ, ಈ ವಿಭಾಗದ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 900 ರಿಂದ 1000 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು.

ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದಲ್ಲಿ ಗಾಂಧೀಜಿ ಕಂಡ ನ್ಯಾಯಸಮ್ಮತ ರಾಜಕೀಯ ವ್ಯವಸ್ಥೆ, ಗಾಂಧೀಜಿ ಮತ್ತು ಡಾ. ಬಿ.ಆರ್. ಅಂಬೇಡ್ಕರ್–ತತ್ವಗಳ ಹೋಲಿಕೆ, ಮೌಲ್ಯಾಧಾರಿತ ನಾಯಕತ್ವ ಹಾಗೂ ನೈತಿಕ ರಾಜಕಾರಣ–ಯುವಕರಿಗೆ ಗಾಂಧೀಜಿಯವರ ಪಾಠ. ಈ ವಿಭಾಗದ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 1400 ರಿಂದ 1500 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಎಲ್ಲಾ ಜಿಲ್ಲಾ ಕಚೇರಿಗಳು ಜಿಲ್ಲಾಡಳಿತದ ಸಹಯೋಗದೊಂದಿಗೆ ಸೆಪ್ಟೆಂಬರ್ 6 ರೊಳಗಾಗಿ ಸ್ಪರ್ಧೆ ಏರ್ಪಡಿಸಿ ನಂತರ ಮೌಲ್ಯಮಾಪನ ಮಾಡಿ ಸೆಪ್ಟೆಂಬರ್ 12 ರೊಳಗಾಗಿ ವಿಜೇತರ ವಿವರಗಳು ಹಾಗೂ ಪ್ರಬಂಧಗಳನ್ನು ಕೇಂದ್ರ ಕಚೇರಿಗೆ ಕಳುಹಿಸಬೇಕು. ಜಿಲ್ಲಾಮಟ್ಟದ ಪ್ರಥಮ ಬಹುಮಾನ ವಿಜೇತ ಪ್ರಬಂಧಗಳನ್ನು ರಾಜ್ಯಮಟ್ಟದಲ್ಲಿ ಮರುಮೌಲ್ಯಮಾಪನ ಮಾಡಿ. ರಾಜ್ಯಮಟ್ಟದ ಫಲಿತಾಂಶ ಘೋಷಿಸಲಾಗುವುದು.

**ನಿಬಂಧನೆಗಳು:** ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು. ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿಯೇ ಶುದ್ಧ ಕೈಬರಹದಲ್ಲಿ ಪ್ರಬಂಧ ಬರೆಯಬೇಕು. ಆಕರವಾಗಿ ಬಳಸಿದ ಪರಾಮರ್ಶನ, ಅಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು. ಆದರೆ, ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿ ಪರಾಮರ್ಶನ, ಆಧಾರ ಗ್ರಂಥಗಳು, ಮೊಬೈಲ್‌ಗಳ ಬಳಕೆಗೆ ಅವಕಾಶವಿರುವುದಿಲ್ಲ. ಪ್ರಬಂಧಕಾರರ ಹೆಸರು, ವಿಳಾಸ ನಮೂದಿಸಿರಬೇಕು. ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಾಯ್ದಿರಿಸಿಕೊಂಡಿರುತ್ತದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

# ಪ್ರಚೋದನಕಾರಿ ಪೋಸ್ಟ್: ಇನ್‌ಸ್ಟಾ ಖಾತೆ ವಿರುದ್ಧ ದೂರು

**ದಾವಣಗೆರೆ:** ಸಾಮಾಜಿಕ ಜಾಲತಾಣದಲ್ಲಿ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವ ಮತ್ತು ಸಮಾಜದಲ್ಲಿ ಶಾಂತಿ ಕದಡುವ ಉದ್ದೇಶದಿಂದ ಪ್ರಚೋದನಕಾರಿ ಪೋಸ್ಟ್‌ಗಳನ್ನು ಹಾಕಿದ ಆರೋಪದ ಮೇಲೆ, "hindu_adalita_davanagere" ಎಂಬ ಇನ್‌ಸ್ಟಾಗ್ರಾಮ್ ಖಾತೆಯ ವಿರುದ್ಧ ಆಜಾದ್ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


ಕಳೆದ ಆಗಸ್ಟ್ 28ರಂದು ಆರ್.ಎಂ.ಸಿ ರಸ್ತೆಯ ಮಟ್ಟಿಕಲ್ ಬಳಿ ಫ್ಲೆಕ್ಸ್ ವಿಚಾರಕ್ಕೆ ಸಂಬಂಧಿಸಿದಂತೆ ಹಿಂದೂ ಮತ್ತು ಮುಸ್ಲಿಂ ಯುವಕರ ನಡುವೆ ವಾದ–ವಿವಾದ ನಡೆದಿತ್ತು. ಇದೇ ಘಟನೆಯ ವೀಡಿಯೋವನ್ನು ಬಳಸಿಕೊಂಡು, "hindu_adalita_davanagere" ಎಂಬ ಇನ್‌ಸ್ಟಾಗ್ರಾಮ್ ಖಾತೆಯು ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವಂತಹ ಪೋಸ್ಟ್ ಅನ್ನು ಹಂಚಿಕೊಂಡಿದೆ. ವಿಡಿಯೋದ ಹಿನ್ನೆಲೆಯಲ್ಲಿ ಶಿವಾಜಿ ಮಹಾರಾಜ ಮತ್ತು ಇಸ್ಲಾಂ ಧರ್ಮದ ಸೈನಿಕನ ಚಿತ್ರಗಳನ್ನು ಹಾಕಿ, "ಒಂದು ಕಟೌಟ್‌ಗೆ ಕಂಪ್ಲೆಂಟ್ ಕೊಟ್ಟಿರ, ಉಳ್ಕೊಂಡಿರಲ್ಲಾ" ಎಂಬಂತಹ ಅವಹೇಳನಕಾರಿ ಮತ್ತು ಪ್ರಚೋದನಕಾರಿ ಬರಹಗಳನ್ನು ಸೇರಿಸಲಾಗಿತ್ತು.

ಈ ಪೋಸ್ಟ್, ಸಮಾಜದಲ್ಲಿ ಎರಡು ಧಾರ್ಮಿಕ ಪಂಗಡಗಳ ಮಧ್ಯೆ ದ್ವೇಷ ಮತ್ತು ವೈಮನಸ್ಸು ಹೆಚ್ಚಿಸಿ, ಗಣೇಶ ಹಬ್ಬ ಹಾಗೂ ಮುಂದಿನ ಈದ್ ಮಿಲಾದ್ ಹಬ್ಬದ ಸಂದರ್ಭದಲ್ಲಿ ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ, ಈ ಪ್ರಚೋದನಕಾರಿ ಪೋಸ್ಟ್ ಅನ್ನು ಹಾಕಿದ ಇನ್‌ಸ್ಟಾಗ್ರಾಮ್ ಖಾತೆಯ ಅಡ್ಮಿನ್ ಮತ್ತು ಅದನ್ನು ಶೇರ್ ಮಾಡಿದ ವ್ಯಕ್ತಿಗಳ ವಿರುದ್ಧ ಸ್ವಯಂ ದೂರು ದಾಖಲಿಸಲಾಗಿದೆ.

## ಹಿರಿಯೂರು ತಾಲ್ಲೂಕಿನಲ್ಲಿ ಮಳೆ ಕೊರತೆ, ಬಿತ್ತನೆ ವೈಫಲ್ಯ

# ಶೇ.25 ರಷ್ಟು ಬೆಳೆ ವಿಮೆ ಪಾವತಿಸಲು ಶಿಫಾರಸ್ಸು : ಜಿಲ್ಲಾಧಿಕಾರಿ

**ಚಿತ್ರದುರ್ಗ:** ಜಿಲ್ಲೆಯ ಹಿರಿಯೂರು ತಾಲ್ಲೂಕಿನಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನ ಜೂನ್ ಮತ್ತು ಜುಲೈ ತಿಂಗಳಿನಲ್ಲಿ ಶೇ.48 ರಷ್ಟು ಮಳೆಯ ಕೊರತೆ–ಯಾಗಿದೆ. ತಾಲ್ಲೂಕಿನ ಒಟ್ಟು ಕೃಷಿ ಭೂಮಿ ಪೈಕಿ ಶೇ.14.66 ರಷ್ಟು ಮಾತ್ರ ಬಿತ್ತನೆಯಾಗಿದ್ದು, ಬೆಳೆ ವಿಮೆ ತುಂಬಿದ ರೈತರಿಗೆ ನಿಯಮಾನುಸಾರ ಶೇ.25 ರಷ್ಟು ವಿಮಾ ಪರಿಹಾರ ನೀಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡುವುದಾಗಿ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಹೇಳಿದರು.



ಈ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸೋಮವಾರ ಕೃಷಿ ಇಲಾಖೆ, ವಿಮಾ ಕಂಪನಿ ಹಾಗೂ ರೈತ ಮುಖಂಡರೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ತಾಲ್ಲೂಕಿನ 40,510 ಹೆಕ್ಟೇರ್ ಕೃಷಿ ಭೂಮಿ ಪೈಕಿ ಕೇವಲ 5,939 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಆಗಸ್ಟ್ ತಿಂಗಳಿನಲ್ಲಿ ಮಳೆಯಿಂದ ಬಿತ್ತನೆಗೆ ಏನು ಪ್ರಯೋಜನವಾಗಿಲ್ಲ. ಹಿರಿಯೂರಿನ ಕಸಬಾ ಹೋಬಳಿಯಲ್ಲಿ 9,045 ಹೆಕ್ಟೇರ್ ಕೃಷಿ ಭೂಮಿ ಪೈಕಿ 947 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದೆ. ಇದೇ ಮಾದರಿಯಲ್ಲಿ ಐಮಂಗಲ ಹೋಬಳಿಯಲ್ಲಿ 9,385 ಹೆಕ್ಟೇರ್ ಪೈಕಿ 1,748 ಹೆಕ್ಟೇರ್, ಜೆ.ಜಿ.ಹಳ್ಳಿ ಹೋಬಳಿಯಲ್ಲಿ 9,965 ಹೆಕ್ಟೇರ್ ಪೈಕಿ, 1,313 ಹೆಕ್ಟೇರ್, ಧರ್ಮಪುರ ಹೋಬಳಿಯಲ್ಲಿ 12,115 ಹೆಕ್ಟೇರ್ ಪೈಕಿ 2,468 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಹಿರಿಯೂರು ತಾಲ್ಲೂಕಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ 9,410 ರೈತರು ನೊಂದಣಿಯಾಗಿದ್ದು, ಸುಮಾರು 1.62 ಕೋಟಿ ವಿಮಾ ಕಂತು ಪಾವತಿಸಿದ್ದಾರೆ. ಸರ್ಕಾರದ ಅಧಿಸೂಚನೆಯಂತೆ ಶೇ.75 ಕ್ಕಿಂತ ಹೆಚ್ಚಿನ ಕ್ಷೇತ್ರದಲ್ಲಿ ಬಿತ್ತನೆ ವಿಫಲಗೊಂಡರೆ, ವಿಮಾ ಮೊತ್ತದ ಗರಿಷ್ಠ ಶೇ.25 ರಷ್ಟು ಪರಿಹಾರವನ್ನು ವಿಮಾ ಸಂಸ್ಥೆ ನೀಡಿ, ಮುಂದಿನ ಅವಧಿ ವಿಮೆಯನ್ನು ರದ್ದು ಪಡಿಸಬೇಕು. ಈ ಹಿನ್ನಲೆಯಲ್ಲಿ ಜಂಟಿ ಸಮೀಕ್ಷೆ ವರದಿಯನ್ನು ಅನುಮೋದಿಸಿ ವಿಮಾ ಕಂಪನಿ ನಷ್ಟ ಪರಿಹಾರ ನೀಡುವಂತೆ ಶಿಫಾರಸ್ಸು ಮಾಡಿರುವುದಾಗಿ ತಿಳಿಸಿದರು.

ವಾಡಿಕೆ ಪ್ರಕಾರ ಹಿರಿಯೂರು ತಾಲ್ಲೂಕಿನಲ್ಲಿ ಜೂನ್ ತಿಂಗಳಿನಲ್ಲಿ 49 ಮಿ.ಮೀ ಮಳೆ ನಿರೀಕ್ಷೆ ಇತ್ತು, ಆದರೆ ವಾಸ್ತವದಲ್ಲಿ ಕೇವಲ 17.5 ಮಿ.ಮೀ ಆಗಿದೆ. ಶೇ.64 ರಷ್ಟು ಮಳೆ ಕೊರತೆಯಾಗಿದೆ. ಇದೇ ರೀತಿ ಜುಲೈ ತಿಂಗಳಿನಲ್ಲಿ 53 ಮಿ.ಮೀ ಮಳೆ ನಿರೀಕ್ಷೆ ಇತ್ತು, ವಾಸ್ತವದಲ್ಲಿ 30 ಮಿ.ಮೀ ಮಳೆಯಾಗಿದ್ದು, ಶೇ.42 ರಷ್ಟು ಮಳೆ ಕೊರತೆಯಾಗಿದೆ. ತಾಲ್ಲೂಕಿನ ಕಸಬಾ ಹಾಗೂ ಐಮಂಗಳ ಹೋಬಳಿಯಲ್ಲಿ ಶೇ.57 ರಷ್ಟು, ಧರ್ಮಪುರ ಹೋಬಳಿಯಲ್ಲಿ ಶೇ.34 ರಷ್ಟು ಹಾಗೂ ಜೆ.ಜಿ.ಹಳ್ಳಿ ಹೋಬಳಿಯಲ್ಲಿ ಶೇ. 63 ರಷ್ಟು ಮಳೆ ಕೊರತೆಯಾಗಿದೆ. ಒಟ್ಟಾರೆ ಹಿರಿಯೂರು ತಾಲ್ಲೂಕಿನಲ್ಲಿ ಈ ವರ್ಷ ಜನವರಿಯಿಂದ ಜುಲೈ ತಿಂಗಳಿನವರೆಗೆ ಶೇ. 23 ರಷ್ಟು ಮಳೆ ಕೊರತೆಯಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕ ಮಂಜುನಾಥ ಮಾಹಿತಿ ನೀಡಿದರು.

ಸಭೆಯಲ್ಲಿ ಜಿ.ಪಂ. ಉಪಕಾರ್ಯದರ್ಶಿ ಡಾ.ರಂಗನಾಥ, ಕೃಷಿ ವಿಜ್ಞಾನಿ ಓಂಕಾರಪ್ಪ, ದಿ ಓರಿಯಂಟಲ್ ಇನ್ಸೂರೆನ್ಸ್ ಕಂಪನಿ ವ್ಯವಸ್ಥಾಪಕಿ ಸುಧಿತಾ ಶಾಲಿನಿ, ಸಹಾಯಕ ವ್ಯವಸ್ಥಾಪಕಿ ಕರಪಗವಲ್ಲಿ, ಜಿಲ್ಲಾ ಶಾಖೆಯ ಅರುಣ್ ಕುಮಾರ್, ಅಜಿತ್.ಎಂ.ಆರ್, ರೈತ ಮುಖಂಡರುಗಳಾದ ಕೆ.ಟಿ.ತಿಪ್ಪೇಸ್ವಾಮಿ, ಹಂಪಯ್ಯನ ಮಾಳಗಿ ಧನಂಜಯ, ಸುರೇಶ್ ಬಾಬು, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಹೊರಕೇರಪ್ಪ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಲ್ಲಿರುವ ಸುಪ್ತ ಪ್ರತಿಭೆ ಹೊರಬರಲು ಕ್ರೀಡಾಕೂಟ ಸಹಕಾರಿ : ಶಾಸಕ ಹೆಚ್.ಡಿ. ತಮ್ಮಯ್ಯ



**ಚಿಕ್ಕಮಗಳೂರು**–ವಿದ್ಯಾರ್ಥಿಗಳು ಕ್ರೀಡಾ ಮನೋಭಾವದಿಂದ ಕ್ರೀಡಾಕೂಟಗಳಲ್ಲಿ ಭಾಗವಹಿಸಿದಾಗ ಮುಂದೆ ತಮ್ಮಲ್ಲಿರುವ ವಿವಿಧ ರೀತಿಯ ಸುಪ್ತ ಪ್ರತಿಭೆಗಳು ಹೊರಬರಲು ನೆರವಾಗುತ್ತದೆ ಎಂದು ಶಾಸಕ ಹೆಚ್.ಡಿ ತಮ್ಮಯ್ಯ ಕರೆನೀಡಿದರು.

ಅವರು ಇಂದು ನಗರದ ನೇತಾಜಿ ಸುಭಾಷ್ ಚಂದ್ರಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ಜಿ.ಪಂ, ತಾ.ಪಂ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಕ್ಷೇತ್ರ ಸಮನ್ವಯಾಧಿಕಾರಿಗಳು, ಸಮೂಹ ಸಂಪನ್ಮೂಲ ಕೇಂದ್ರ, ಶಾಲಾ ಶಿಕ್ಷಣ ಇಲಾಖೆ ಉಪ್ಪಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಕಸಬಾ–1 ವಲಯ ಮಟ್ಟದ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟ 2025–26 ನ್ನು ಉದ್ಘಾಟಿಸಿ ಮಾತನಾಡಿದರು.

ಕ್ರೀಡಾಕೂಟಗಳಲ್ಲಿ ಸೋಲು–ಗೆಲುವಿಗಿಂತ ಭಾಗವಹಿಸುವುದು ಮುಖ್ಯ. ಕ್ರೀಡಗಳಲ್ಲಿ ಗೆದ್ದವರು ಜಿಲ್ಲೆ, ರಾಜ್ಯ, ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಲು ಸಹಕಾರಿಯಾಗಲಿದೆ ಎಂದು ಹೇಳಿದರು. ನ್ಯಾಯ ನಿರ್ಣಾಯಕರು ಪಾರದರ್ಶಕ ತೀರ್ಪು ನೀಡಬೇಕು. ಜೊತೆಗೆ ನಿಜವಾದ ಪ್ರತಿಭೆಗಳನ್ನು ಹೊರತರುವ ಪ್ರಯತ್ನವನ್ನು ಪ್ರಾಮಾಣಿಕವಾಗಿ ಮಾಡುವ ಅಗತ್ಯವಿದೆ ಎಂದು ತಿಳಿಸಿದರು. ಆಯಾ ಶಾಲೆಯ ದೈಹಿಕ ಶಿಕ್ಷಕರು ವಿದ್ಯಾರ್ಥಿಗಳಿಗೆ ಯಾವ ಯಾವ ಕ್ರೀಡೆಗಳಲ್ಲಿ ಆಸಕ್ತಿ ಇದೆ ಎಂಬುದನ್ನು ಗುರ್ತಿಸಿ ಹೊರತಂದರೆ ಆ ಮಗು ರಾಷ್ಟ್ರದ ಆಸ್ತಿಯಾಗುತ್ತದೆ. ಇದನ್ನು ಮನಗಂಡು ವಿದ್ಯಾರ್ಥಿಯ ಗೆಲುವಿಗೆ ಶ್ರಮಿಸಿದಾಗ ಕೊನೆಯವರೆಗೂ ನೆನಪಿನಲ್ಲಿಟ್ಟುಕೊಳ್ಳುತ್ತಾನೆ ಎಂದು ವಿವರಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ರುದ್ರಪ್ಪ ಪ್ರಾಸ್ತವಿಕವಾಗಿ ಮಾತನಾಡಿ, ಇಂದು ನಡೆಯುತ್ತಿರುವ ಕ್ರೀಡಾಕೂಟಕ್ಕೆ ಉತ್ತಮವಾದ ವಾತಾವರಣ ಲಭಿಸಿದೆ. ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಹೆಚ್ಚು ಹೆಚ್ಚು ತಮ್ಮ ಪ್ರತಿಭೆಯನ್ನು ಹೊರಹಾಕಿ ದೈಹಿಕ ಶಿಕ್ಷಕರು ನೀಡಿರುವ ತರಬೇತಿ ತಂತ್ರಾಂಶವನ್ನು ಬಳಸಿಕೊಂಡು ಜಯಶೀಲರಾಗಬೇಕೆಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಆಸೀಫ್ ಪಾಷ ಮಾತನಾಡಿ, ಕ್ರೀಡಾಕೂಟಗಳಲ್ಲಿ ವಿದ್ಯಾರ್ಥಿಗಳು ಭಾಗವಹಿಸುವುದು ಮುಖ್ಯ. ಗೆದ್ದವರು ಬೀಗದೆ ಸೋತವರು ಬಾಗದೆ ಚೆನ್ನಾಗಿ ಆಟವಾಡಿ ಜಯಶೀಲರಾಗಬೇಕೆಂದು ಶುಭ ಹಾರೈಸಿದರು.

ವೇದಿಕೆಯಲ್ಲಿ ವಿವಿಧ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳಾದ ಅನ್ಸಾರ್, ಸುಧೀರ್, ಪರಮೇಶ್ವರಪ್ಪ, ಅಜ್ಜಯ್ಯ, ಚಂದ್ರಯ್ಯ, ರವಿ, ಸುಂದ್ರೇಶ್, ಅರಸ್, ಸೋಮಶೇಖರ್ ಮತ್ತಿತರರು ಉಪಸ್ಥಿತರಿದ್ದರು. ಮೊದಲಿಗೆ ಮುಖ್ಯ ಶಿಕ್ಷಕ ಸೋಮಶೇಖರ್ ಸ್ವಾಗತಿಸಿ, ಕೊನೆಯಲ್ಲಿ ಶಿಕ್ಷಕಿ ರಮ್ಯಶ್ರೀ ವಂದಿಸಿದರು.

# ಆಮ್ವೇ ನ್ಯೂಟ್ರಿಲೈಟ್‌ಗೆ ಎನ್‌ಎಫ್‌ಎಸ್‌ಯು ಮನ್ನಣೆ

**ಬಳ್ಳಾರಿ:** ಆಮ್ವೇಯ ಜನಪ್ರಿಯ ಆರೋಗ್ಯ ಮತ್ತು ಯೋಗಕ್ಷೇಮ ಬ್ರ್ಯಾಂಡ್ ನ್ಯೂಟ್ರಿಲೈಟ್ ಪ್ರತಿಷ್ಠಿತ ವಿಶ್ವಾಸಾರ್ಹ ಪ್ರಮಾಣೀಕರಣ ಕಾರ್ಯಕ್ರಮದ ಅಡಿಯಲ್ಲಿ ರಾಷ್ಟ್ರೀಯ ವಿಧಿವಿಜ್ಞಾನ ವಿಶ್ವವಿದ್ಯಾಲಯ (ಎನ್‌ಎಫ್‌ಎಸ್‌ಯು)ದಿಂದ ಮನ್ನಣೆ ಪಡೆದಿದೆ. ಕ್ರೀಡಾಪಟುಗಳಿಗೆ ಪೌಷ್ಟಿಕಾಂಶ ಪೂರಕ ಪರೀಕ್ಷೆಯ ವಿಶ್ವಾಸಾರ್ಹ ಉತ್ಪನ್ನ ಎಂದು ಪರಿಗಣಿಸಲ್ಪಟ್ಟಿದೆ. ಈ ಮನ್ನಣೆಯು ಅತ್ಯಧಿಕ ಗುಣಮಟ್ಟದ, ಸುರಕ್ಷಿತ ಮತ್ತು ವೈಜ್ಞಾನಿಕವಾಗಿ ಬೆಂಬಲಿತ ಪೋಷಣೆಯುಕ್ತ ಉತ್ಪನ್ನಗಳನ್ನು ಒದಗಿಸುವ ಆಮ್ವೇ ಬದ್ಧತೆಯನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಆಮ್ವೇ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕರಾದ ರಜನೀಶ್ ಚೋಪ್ರಾ ಹೇಳಿದ್ದಾರೆ.

ಗುಜರಾತಿನ ಎನ್‌ಎಫ್‌ಎಸ್‌ಯುನಲ್ಲಿರುವ ಕ್ರೀಡಾ ಪೌಷ್ಠಿಕಾಂಶ ಪೂರಕಗಳನ್ನು ಪರೀಕ್ಷಿಸಲು ಸರ್ಕಾರದಿಂದ ಮಾನ್ಯತೆ ಪಡೆದ ಸೌಲಭ್ಯವಾದ ಸೆಂಟರ್ ಆಫ್ ಎಕ್ಸಲೆನ್ಸ್ – ನ್ಯಾಷನಲ್ ಸಪ್ಲಿಮೆಂಟ್ ಟೆಸ್ಟಿಂಗ್ ಫಾರ್ ಸ್ಪೋರ್ಟ್ಸ್‌ಪರ್ಸನ್ಸ್ ಈ ವಿಶ್ವಾಸಾರ್ಹ ಮನ್ನಣೆ ನೀಡಿದೆ.

ಗೃಹ ಸಚಿವಾಲಯ, ಎಫ್‌ಎಸ್‌ಎಸ್‌ಎಐ ಮತ್ತು ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯದ ತ್ರಿಪಕ್ಷೀಯ ಒಪ್ಪಂದದ ಅಡಿಯಲ್ಲಿ ಸ್ಥಾಪನೆಯಾದ ಇದು ವಾಡಾ ನಿಷೇಧಿತ ವಸ್ತುಗಳ ವಿರುದ್ಧ ಸುಧಾರಿತ ವಿಶ್ಲೇಷಣಾತ್ಮಕ ಮತ್ತು ಬ್ಯಾಚ್–ವಾರು ಪರೀಕ್ಷೆಯನ್ನು ನಡೆಸುತ್ತದೆ.

ಇದು ವಿಶ್ವ ಡೋಪಿಂಗ್ ವಿರೋಧಿ ಸಂಸ್ಥೆ (ವಾಡಾ) ನಿಗದಿಪಡಿಸಿದ ಅಂತರರಾಷ್ಟ್ರೀಯ ಮಾನದಂಡಗಳನ್ನು ಅನುಸರಿಸುತ್ತವೆ. ಈ ಉತ್ಪನ್ನ ಶ್ರೇಣಿಯಲ್ಲಿ ನ್ಯೂಟ್ರಿಲೈಟ್ ಆಲ್ ಪ್ಲಾಂಟ್ ಪ್ರೋಟೀನ್, ನ್ಯೂಟ್ರಿಲೈಟ್ ಕ್ಯಾಲ್ ಮ್ಯಾಗ್ ಡಿ ಪ್ಲಸ್ ಕೆ2, ಬೋಸ್ವೆಲಿಯಾ ಜೊತೆ ನ್ಯೂಟ್ರಿಲೈಟ್ ಗ್ಲುಕೋಸಮೈನ್ ಎಚ್‌ಸಿಎಲ್, ನ್ಯೂಟ್ರಿಲೈಟ್ ಸಾಲ್ಮನ್ ಒಮೆಗಾ 3 ಸಾಫ್ಟ್‌ಜೆಲ್‌ಗಳು ಮತ್ತು ನ್ಯೂಟ್ರಿಲೈಟ್ ಡೈಲಿ ಪ್ಲಸ್ ಸೇರಿದೆ ಎಂದು ತಿಳಿಸಿದ್ದಾರೆ.

# ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಕ್ಕೆ ಚಾಲನೆ




**ಚಿತ್ರದುರ್ಗ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಜಿಲ್ಲೆಯ ವಿವಿಧ ಕ್ರೀಡಾ ಸಂಸ್ಥೆಗಳ ಸಹಯೋಗದಲ್ಲಿ ನಗರದ ವೀರವನಿತೆ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಹಾಗೂ ಜಿಲ್ಲಾಮಟ್ಟದ ದಸರಾ ಕ್ರೀಡಾಕೂಟಕ್ಕೆ ಚಾಲನೆ ನೀಡಲಾಯಿತು.

ಕ್ರೀಡಾಕೂಟ ಉದ್ಘಾಟಿಸಿದ ಚಿತ್ರದುರ್ಗ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಸುಚೇತಾ ಎಂ ನೆಲವಿಗಿ ಅವರು ಮಾತನಾಡಿ, ಈಗಾಗಲೇ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಯಶಸ್ವಿಯಾಗಿ ನೆರವೇರಿಸಲಾಗಿದ್ದು, ತಾಲ್ಲೂಕು ಮಟ್ಟದಲ್ಲಿ ವಿಜೇತರಾದ ಕ್ರೀಡಾಪಟುಗಳು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದು, ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ವಿಜೇತರಾದವರು ವಿಭಾಗ ಮಟ್ಟಕ್ಕೆ ಆಯ್ಕೆಯಾಗಿ, ನಂತರ ವಿಭಾಗದ ಮಟ್ಟದ ವಿಜೇತ ಕ್ರೀಡಾಪಟುಗಳು ರಾಜ್ಯಮಟ್ಟದ ದಸರಾ ಕ್ರೀಡಾಕೂಟಕ್ಕೆ ಆಯ್ಕೆಯಾಗುವರು. ರಾಜ್ಯಮಟ್ಟದ ದಸರಾ ಕ್ರೀಡಾಕೂಟವು ಸೆಪ್ಟೆಂಬರ್ 22 ರಿಂದ 25 ರವರೆಗೆ ಮೈಸೂರಿನ ಚಾಮುಂಡಿ ವಿಹಾರದ ಕ್ರೀಡಾಂಗಣದಲ್ಲಿ ನಡೆಯಲಿದೆ ಎಂದು ತಿಳಿಸಿದರು.

ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ 975 ಪುರುಷರು ಹಾಗೂ 234 ಮಹಿಳಾ ಕ್ರೀಡಾಪಟುಗಳು ಆನ್‌ಲೈನ್ ನೋಂದಣಿ ಮಾಡಿಕೊಂಡಿದ್ದಾರೆ. ಚಳ್ಳಕೆರೆ ತಾಲ್ಲೂಕಿನ 354 ಕ್ರೀಡಾಪುಟಗಳು, ಚಿತ್ರದುರ್ಗ–714, ಹೊಸದುರ್ಗ–470, ಹಿರಿಯೂರು–171, ಹೊಳಲ್ಕೆರೆ–218, ಮೊಳಕಾಲ್ಮುರು–157 ಕ್ರೀಡಾಪಟುಗಳು ನೋಂದಣಿ ಮಾಡಿಕೊಂಡಿದ್ದು, ಇನ್ನೂ ನೋಂದಣಿ ಪ್ರಕ್ರಿಯೆ ನಡೆಯುತ್ತಿದ್ದು, ಸುಮಾರು 2800ಕ್ಕೂ ಹೆಚ್ಚು ಕ್ರೀಡಾಪುಟಗಳು ಭಾಗವಹಿಸುವ ನಿರೀಕ್ಷೆ ಇದೆ ಎಂದು ಹೇಳಿದರು.

ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಅಥ್ಲೆಟಿಕ್ಸ್, ವಾಲಿಬಾಲ್, ಖೋಖೋ, ಕಬಡ್ಡಿ ಬ್ಯಾಸ್ಕೆಟ್‌ಬಾಲ್, ಕುಸ್ತಿ, ಬ್ಯಾಡ್ಮಿಂಟನ್, ಹಾಕಿ, ಹ್ಯಾಂಡ್‌ಬಾಲ್, ಟೇಬಲ್ ಟೆನ್ನಿಸ್, ಥ್ರೋಬಾಲ್, ಬಾಲ್ ಬ್ಯಾಡ್ಮಿಂಟನ್ ಸೇರಿದಂತೆ ವಿವಿಧ ವಿಭಾಗಗಳ ಸ್ಪರ್ಧೆಗಳಲ್ಲಿ ಪುರುಷ ಮತ್ತು ಮಹಿಳಾ ಸ್ಪರ್ಧಿಗಳು ಹುಮ್ಮಸ್ಸಿನಿಂದ ಭಾಗವಹಿಸಿ ಗೆಲುವಿಗಾಗಿ ಸೆಣಸಾಡಿದರು.

ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಅಂಗವಾಗಿ ಭಾರತದ ಹಾಕಿ ಮಾಂತ್ರಿಕ ಮೇಜರ್ ಧ್ಯಾನ್ ಚಂದ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ವಾಲಿಬಾಲ್ ತರಬೇತುದಾರ ಮಹಮ್ಮದ್ ಮುಹೀಬುಲ್ಲಾ ಅವರು ಪ್ರತಿಜ್ಞಾವಿಧಿ ಬೋಧಿಸಿದರು.

ಕಾರ್ಯಕ್ರಮದಲ್ಲಿ ಹೊಸದುರ್ಗ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಮಹಂತೇಶ್, ನಿವೃತ್ತ ದೈಹಿಕ ಶಿಕ್ಷಣಾಧಿಕಾರಿಗಳಾದ ಜಯಣ್ಣ, ಎ.ನೀಲಕಂಠಾಚಾರ್, ದೈಹಿಕ ಶಿಕ್ಷಣ ಶಿಕ್ಷಕಿ ಸಲ್ಮಾ, ಕ್ರೀಡಾ ತರಬೇತುದಾರರಾದ ಸಾಧಿಕ್, ಮುಹಿಬುಲ್ಲಾ ಸೇರಿದಂತೆ ಕ್ರೀಡಾಪಟುಗಳು ಇದ್ದರು.

# ಡೆಂಗ್ಯೂ ಪತ್ತೆ: ಮುಂಜಾಗ್ರತಾ ಕ್ರಮಗಳ ಕುರಿತು ಆರೋಗ್ಯ ಶಿಕ್ಷಣ



**ಚಿತ್ರದುರ್ಗ :** ಚಿತ್ರದುರ್ಗ ನಗರದ ಮಾರುತಿ ನಗರ ಆರೋಗ್ಯ ಕೇಂದ್ರ ವ್ಯಾಪ್ತಿಯಲ್ಲಿ ಬರುವ ಕೊಳಚೆ ಪ್ರದೇಶದಲ್ಲಿ ಡೆಂಗ್ಯೂ ಪತ್ತೆ ಹಿನ್ನಲೆಯಲ್ಲಿ ಶುಕ್ರವಾರ ಜಿಲ್ಲಾ ಸಿಎಂಡಿ ವಿಭಾಗದ ಎಸ್.ಅಶೋಕ್ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಡೆಂಗ್ಯೂ ಪತ್ತೆ ಹಿನ್ನಲೆಯಲ್ಲಿ ಆಶಾ ಕಾರ್ಯಕರ್ತರ ತಂಡ ರಚನೆ ಮಾಡಿ, ಸುಮಾರು ನೂರಕ್ಕೆ ಹೆಚ್ಚು ಮನೆಗಳನ್ನು ಭೇಟಿ, ಲಾರ್ವಾ ಸಮೀಕ್ಷೆ ಮಾಡಿ, ಪಾಸಿಟಿವ್ ಬಂದ ತಾಣಗಳು ಹಾಗೂ ಸ್ವಚ್ಛತೆ ಬಗ್ಗೆ ತಿಳುವಳಿಕೆ ನೀಡಲಾಯಿತು.

ನೀರನ್ನು ಶೇಖರಣೆ ಮಾಡುವ ಡ್ರಮ್ ತೊಟ್ಟಿಗಳು ಹಾಗೂ ಘನತ್ಯಾಜ್ಯ ವಸ್ತುಗಳು, ಟೈರ್, ಹೂವಿನ ಕುಂಡಗಳು ಇವೆಲ್ಲವನ್ನೂ ಪರಿಶೀಲಿಸಿ, ಡೆಂಗ್ಯೂ ಹರಡುವ ವಿಧಾನ, ಜ್ವರದ ಲಕ್ಷಣಗಳು, ತಡೆಗಟ್ಟುವ ಕ್ರಮ ಹಾಗೂ ಮುಂಜಾಗ್ರತಾ ಕ್ರಮಗಳ ಬಗ್ಗೆ ಆರೋಗ್ಯ ಶಿಕ್ಷಣ ನೀಡಲಾಯಿತು.

ಈ ಸಂದರ್ಭದಲ್ಲಿ ಆಶಾ ಕಾರ್ಯಕರ್ತೆಯರಾದ ಶೋಭಾ ಸೇರಿದಂತೆ ಮತ್ತಿತರರು ಇದ್ದರು.

# ಸಂಸ್ಥೆ ಬೆಳೆಯಲು ಸರ್ವರ ಪರಿಶ್ರಮ ಅಗತ್ಯ : ಸಂಸದ ರಾಘವೇಂದ್ರ

**ಚಿಕ್ಕಮಗಳೂರು:** ಒಂದು ಸಂಸ್ಥೆ ಸದೃಢವಾಗಲು ಒಬ್ಬರಿಂದ ಸಾಧ್ಯವಿಲ್ಲ ಸಂಸ್ಥೆಯ ತಂಡದಲ್ಲಿರುವ ಸರ್ವರ ಪರಿಶ್ರಮ ಅತ್ಯಗತ್ಯ ಎಂದು ಶಿವಮೊಗ್ಗ ಲೋಕಸಭಾ ಕ್ಷೇತ್ರದ ಸಂಸದ ಬಿ.ವೈ ರಾಘವೇಂದ್ರ ಅಭಿಪ್ರಾಯಿಸಿದರು.

ಅವರು ಚಿಕ್ಕಮಗಳೂರು ನಗರದ ಬಸವೇಶ್ವರ ರಸ್ತೆಯಲ್ಲಿ (ಬೈಪಾಸ್) ಕಿಯಾ ಕಾರ್ ಶೋರೂಮ್‌ನ ಸರ್ವೀಸ್ ಸೆಂಟರ್ ಉದ್ಘಾಟನೆಯಲ್ಲಿ ಪಾಲ್ಗೊಂಡು ಮಾತನಾಡಿದರು. ಯಾವುದೇ ಒಂದು ಸಂಸ್ಥೆಯನ್ನು ಪ್ರಾರಂಭಿಸಬೇಕಾದರೆ ಒಬ್ಬರಿಂದ ಮಾತ್ರ ಸಾಧ್ಯವಿಲ್ಲ ಸಂಸ್ಥೆಯ ಎಲ್ಲಾ ಸಿಬ್ಬಂದಿ ವರ್ಗದವರ ಸಹಕಾರದಿಂದ ಈ ಒಂದು ಸಂಸ್ಥೆ ಇಷ್ಟು ಎತ್ತರಕ್ಕೆ ಬೆಳೆದಿದ್ದು, ಸಂಸ್ಥೆಯ ಬೆಳವಣಿಗೆಗೆ ಪ್ರತಿಯೊಬ್ಬ ಸಿಬ್ಬಂದಿಗಳ ಶ್ರಮವಿದೆ ಎಂದು ತಿಳಿಸಿದರು.



ಅಲ್ಲದೆ ಚಿಕ್ಕಮಗಳೂರು ಮತ್ತು ಶಿವಮೊಗ್ಗ ಸಹೋದರತ್ವದ ಊರಾಗಿದ್ದು ಸದ್ಯದಲ್ಲೆ ಶೃಂಗೇರಿ ಮಾರ್ಗವಾಗಿ ಚಿಕ್ಕಮಗಳೂರು –ತೀರ್ಥಹಳ್ಳಿ – ಶಿವಮೊಗ್ಗ ಜಿಲ್ಲೆಗೆ ರೈಲ್ವೇ ಮಾರ್ಗಕ್ಕೆ ಕೇಂದ್ರದಿಂದ ಅನುಮೋದನೆ ಸದ್ಯದಲ್ಲೇ ತರಲಾಗುವುದು ಎಂದರು.

ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪನವರು ಕಾರ್ಯಕ್ರಮ ಉದ್ಘಾಟಿಸಿದರು, ಕಾರ್ಯಕ್ರಮದಲ್ಲಿ ನಟಿ ಹರ್ಷಿಕಾ ಪೂಣಚ್ಚ ಹಾಗೂ ಪತಿ ಬಿಗ್ ಬಾಸ್ ಖ್ಯಾತಿಯ ಭುವನ್ ಪೊನ್ನಣ್ಣ ಅವರು ಟೇಪ್ ಕತ್ತರಿಸುವುದರ ಮೂಲಕ ಸರ್ವಿಸ್ ಸೆಂಟರ್‌ಅನ್ನು ಲೋಕಾರ್ಪಣೆಗೊಳಿಸಿದರು. ನಂತರ ನಟಿ ಹರ್ಷಿಕಾ ಪೂಣಚ್ಚ ಅವರು ಮಾತನಾಡಿ ನಮ್ಮ ನಾಡು ಕಂಡ ಅದ್ಭುತ ಮುಖ್ಯಮಂತ್ರಿ ಎಂದರೆ ಅದು ಯಡಿಯೂರಪ್ಪ ಅವರು, ರೈತರ, ಬಡವರ, ದೀನ ದಲಿತರ ಹೇಳಿಕೆಗೆ ಅವರು ಸಾಕಷ್ಟು ಕೊಡುಗೆಗಳನ್ನು ನೀಡಿದ್ದಾರೆ, ಇವರ ಜೊತೆ ವೇದಿಕೆ ಹಂಚಿಕೊಳ್ಳುವುದೇ ಒಂದು ಸೌಭಾಗ್ಯ, ಕಾಫಿ ನಾಡು ಚಿಕ್ಕಮಗಳೂರು ಪ್ರವಾಸಿಗರ ಪಾಲಿನ ಸ್ವರ್ಗ ಇಂತಹ ಒಂದು ಪ್ರಕೃತಿಯ ಮಡಿಲಲ್ಲಿ ಜಾನ್ಸಿ ಕಿಯಾ ಶೋರೂಮ್ ಪ್ರಾರಂಭವಾಗಿರುವುದು ತುಂಬಾ ಸಂತೋಷದ ಸಂಗತಿ, ಈ ಶೋರೂಮ್ ಉತ್ತರೋತ್ತರ ಅಭಿವೃದ್ಧಿಯಾಗಲಿ ಎಂದು ಶುಭ ಕೋರಿದರು.

ಬಿಗ್ ಬಾಸ್ ಖ್ಯಾತಿಯ ಭುವನ್ ಪೊನ್ನಣ್ಣ ಅವರು ಮಾತನಾಡಿ ಪ್ರತಿಯೊಬ್ಬರು ವ್ಯವಹಾರವನ್ನು ಪ್ರಾರಂಭಿಸುತ್ತಾರೆ ಆದ–ರೆ ಈ ಒಂದು ಶೋರೂಮ್ ನ ವಿಶೇಷತೆ ಎಂದರೆ, ಸ್ಥಳೀಯರಿಗೆ ಉದ್ಯೋಗವನ್ನು ಕೊಟ್ಟಿದ್ದಾರೆ, ಈ ಒಂದು ಶೋರೂಮ್ ಜನರಿಗೆ ಉತ್ತಮ ಗುಣಮಟ್ಟದ ಕಾರ್ ಗಳನ್ನು ನೀಡುವುದರ ಜೊತೆಗೆ ಸ್ಥಳೀಯ ಉದ್ಯೋಗಿಗಳಿಗೆ ಉದ್ಯೋಗವಕಾಶಗಳನ್ನು ಕೂಡ ನೀಡಿರುವುದು ಹೆಮ್ಮೆಯ ಸಂಗತಿ ಎಂದರು. ಶಾಸಕ ಹೆಚ್ ಡಿ ತಮ್ಮಯ್ಯ ಅವರು ಮಾತನಾಡಿ ಚಿಕ್ಕಮಗಳೂರು ಒಂದು ಮಿನಿ ಸ್ವಿಜರ್ಲ್ಯಾಂಡ್ ಇಡೀ ಜಗತ್ತನ್ನೇ ತನ್ನತ್ತ ಸೆಳೆಯುತ್ತಿದೆ ಇಂತಹ ಒಂದು ಪ್ರಸಿದ್ಧ ಪ್ರವಾಸಿ ತಾಣವಾದ ಕಾಫಿನಾಡು ಚಿಕ್ಕಮಗಳೂರಿನಲ್ಲಿ ಈ ಒಂದು ಶೋರೂಮ್ ಪ್ರಾರಂಭವಾಗಿರುವುದು ಸಂತೋಷದ ಸಂಗತಿ, ಜನರಿಗೆ ಉತ್ತಮ ಗುಣಮಟ್ಟದ ಹೊಸ ಹೊಸ ಕಾರುಗಳನ್ನ ನೀಡುವುದರ ಜೊತೆಗೆ ಈ ಸಂಸ್ಥೆ ಉನ್ನತ ಮಟ್ಟಕ್ಕೆ ಬೆಳೆಯಲಿ ಎಂದು ಶುಭ ಕೋರಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**